ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ


ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 139 ಸಂಚಿಕೆ- 139 | PAGE-8 ಪುಟ-8 | ಶುಕ್ರವಾರ 11.07.2025 | RS.2/- ಬೆಲೆ 2/-

## ಹೂಡಿಕೆದಾರರಿಗೆ ಕೋಟ್ಯಾಂತರ ರೂ. ವಂಚಿಸಿದ್ದ ವಂಚಕನ ಬಂಧನ





ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:ಜು.10:ಸಾರ್ವಜನಿಕರಿಗೆಹಣ ಹೂಡಿಕೆ ಮಾಡಿದರೇ ಹೆಚ್ಚಿನ ಹಣ ನೀಡುವುದಾಗಿ ವಂಚಿಸಿ ಅವರಿಂದ ಹಣ ಪಡೆದು ವಂಚಿಸಿದ ವಂಚಕನನ್ನು ಬಂಧಿಸುವಲ್ಲಿ ಕಲಬುರಗಿ ಸಿಇಎನ್ ಪೊಲೀಸರು ಯಶಸ್ವಿಯಾಗಿದ್ದಾರೆ ಎಂದು ನಗರ ಪೊಲೀಸ ಆಯುಕ್ತ ಡಾ.ಶರಣಪ್ಪ ಢಗೆ ತಿಳಿಸಿದರು.

ಅವರಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿ,ನಗರದ ಹೈಕೋರ್ಟ ಹತ್ತಿರ ಅಕ್ಕಮಹಾದೇವಿ ಕಾಲೋನಿಯ ಆರ್ಕೆಡ ಬಿಲ್ಡಿಂಗ ನಲ್ಲಿ " ವಿನಸ್ ಎಂಟರ್ ಪ್ರೈಜಸ್ ಹೆಸರಿನಲ್ಲಿ ಆಫೀಸ ತೆರೆದಿದ್ದ ಎಮ್.ಡಿ ರಾಮಚಂದ್ರ ಚಾರಿ ಅಕುಲ್ @ ರಾಮು ಅಕುಲ್ ಚಾರಿ ಇವನು ಮೂಲತಹ ಹೈದರಾಬಾದನವನಾಗಿದ್ದು ಸಾರ್ವಜನಿಕರಿಗೆ ಮೋಸ, ವಂಚನೆ ಮಾಡುವ ಉದ್ದೇಶದಿಂದ ಷೇರು ಮಾರ್ಕೆಟ್ಟನಲ್ಲಿ ಹಣ ಹೂಡಿಕೆ ಮಾಡಿದರೆ ಅಧಿಕ ಲಾಭಾಂಶದ ಹಣ ನೀಡುವುದಾಗಿ ಹೇಳಿ ನಗರದ ಉಲ್ಲಾಸ ಅಶೋಕ ನೆಲ್ಲ ಮತ್ತು ಅವರ ಸಂಬಂಧಿಕರು ಹಾಗೂ ಪಿರ್ಯಾದಿದಾರರಗೆಳೆಯರಿಗೆ ಸುಳ್ಳು ಹೇಳಿ ನಂಬಿಸಿ ಅವರಿಂದ ಹಂತ ಹಂತವಾಗಿ ಬ್ಯಾಂಕ ಖಾತೆಗೆ ಮತ್ತು ನಗದು ರೂಪದಲ್ಲಿ 11.17 ಕೋಟಿ ರೂ ಪಡೆದು ಲಾಭಾಂಶವೆಂದು 10 ಲಕ್ಷ ರೂ ನೀಡಿರುತ್ತಾನೆ. ಉಳಿದ 97 ಲಕ್ಷ ರೂ ನೀಡದೇ ವಂಚಿಸಿದ್ದನ್ನು ಈ ಬಗ್ಗೆ ಉಲ್ಲಾಸ ಅವರು ಸಿಇಎನ್ ಠಾಣೆಯಲ್ಲಿ ದೂರು ದಾಖಲಿಸಿದ್ದರು.

ಪ್ರಕರಣದ ತನಿಖೆ ನಡೆಸಿದಾಗ ರಾಮು ಅಕುಲ್ ಎಂಬ ಆರೋಪಿಯು ಸಾರ್ವಜನಿಕರಿಗೆ ಅಪ್ರಾಮಾಣಿಕತೆಯಿಂದ ಮೋಸ, ವಂಚನೆ ಮಾಡಿರುತ್ತಾನೆ. ಇದಲ್ಲದೆ ಕಲಬುರಗಿ ನಗರದ 200 ಕ್ಕಿಂತ ಹೆಚ್ಚು ಜನರಿಂದ ಹಣ ಹೂಡಿಕೆ ಮಾಡಿಕೊಂಡು ಸ್ವಲ್ಪ ಹಣ ಮರಳಿ ಕೊಟ್ಟು ಉಳಿದ ಹಣ ಕೊಡದೆ ಸುಮಾರು 10 ರಿಂದ 12 ಕೋಟಿ ರೂಪಾಯಿ. ಮೋಸ ಮತ್ತು ವಂಚನೆ ಮಾಡಿರುತ್ತಾನೆ ಎಂಬುದು ಪತ್ತೆಯಾಯಿತು ಎಂದರು.

ಆರೋಪಿಯು ಸಾರ್ವಜನಿಕರಿಗೆ 6 ತಿಂಗಳ ಸ್ತೀಮ್ ಅಡಿಯಲ್ಲಿ ರೂ. 1 ಲಕ್ಷ ರೂಪಾಯಿ ಹಣ ಹೂಡಿಕೆ ಮಾಡಿದಲ್ಲಿ, ಪ್ರತಿ ತಿಂಗಳಿಗೆ ರೂ. 20,000/- ರಂತೆ, 6 ತಿಂಗಳ ಲಾಭಾಂಶದ ಹಣ ರೂ. 1,20,000/- ಲಕ್ಷ ರೂಪಾಯಿ ಹಣ ಒದಗಿಸಿರುತ್ತಾನೆ. 06 ತಿಂಗಳ ಸ್ಕಿಮ್‌ನಲ್ಲಿ ಅಂದಾಜು 574 ಸಾರ್ವಜನಿಕರಿಂದ ಹಣ ಸಂಗ್ರಹಿಸಿ ಹೂಡಿಕೆ ಮಾಡಿಸಿಕೊಂಡು ವಂಚನೆ ಮಾಡಿರುತ್ತಾನೆ. ಅಲ್ಲದೇ ಒಬ್ಬ ಗ್ರಾಹಕರಿಗೆ ಹಣ ಹೂಡಿಕೆ ಮಾಡುವಂತೆ ಪ್ರೇರೆಪಿಸಿದ ದಲ್ಲಾಳಿಗಳಿಗೆ ಪ್ರತಿ ಗ್ರಾಹಕ ವ್ಯಕ್ತಿಯ ಹೂಡಿಕೆ ಮಾಡುವ ಹಣಕ್ಕೆ 15% ಪ್ರತಿಶತ ಕಮೀಷನ ಹಣ ನೀಡಿರುತ್ತಾನೆ .

8 ತಿಂಗಳ ಸ್ಟೀಮ್ ಈ ಸ್ಕಿಮ್ ಅಡಿಯಲ್ಲಿ 1 ಲಕ್ಷ ರೂಪಾಯಿ ಹಣ ಹೂಡಿಕೆ ಮಾಡಿದಲ್ಲಿ, ಪ್ರತಿ ತಿಂಗಳಿಗೆ ರೂ. 20,000/- ರಂತೆ, 8 ತಿಂಗಳ ಲಾಭಾಂಶದ ಹಣ ರೂ. 1,60,000/- ಲಕ್ಷ ರೂಪಾಯಿ ಹಣ ಒದಗಿಸಿರುತ್ತಾನೆ. 08 ತಿಂಗಳ ಸ್ಕಿಮ್‌ನಲ್ಲಿ ಅಂದಾಜು 82 ಸಾರ್ವಜನಿಕರಿಂದ ಹಣ ಸಂಗ್ರಹಿಸಿ ಹೂಡಿಕೆ ಮಾಡಿಸಿಕೊಂಡು ವಂಚನೆ ಮಾಡಿರುತ್ತಾನೆ. ಅಲ್ಲದೇ ಒಬ್ಬ ಗ್ರಾಹಕರಿಗೆ ಹಣ ಹೂಡಿಕೆ ಮಾಡುವಂತೆ ಪ್ರೇರೆಪಿಸಿದ ದಲ್ಲಾಳಿಗಳಿಗೆ ಪ್ರತಿ ಗ್ರಾಹಕ ವ್ಯಕ್ತಿಯ ಹೂಡಿಕೆ ಮಾಡುವ ಹಣಕ್ಕೆ 15% ಪ್ರತಿಶತ ಕಮೀಷನ ಹಣ ನೀಡಿರುತ್ತಾನೆ.

12 ತಿಂಗಳ ಸ್ಟೀಮ್ ಅಡಿಯಲ್ಲಿ ರೂ. 1 ಲಕ್ಷ ರೂಪಾಯಿ ಹಣ ಹೂಡಿಕೆ ಮಾಡಿದಲ್ಲಿ, ಪ್ರತಿ ತಿಂಗಳಿಗೆ ರೂ. 20,000/- ರಂತೆ, 12 ತಿಂಗಳ ಲಾಭಾಂಶದ ಹಣ ರೂ. 2,40,000/- ಲಕ್ಷ ರೂಪಾಯಿ ಹಣ ಒದಗಿಸಿರುತ್ತಾನೆ. 12 ತಿಂಗಳ ಸ್ಕಿಮ್ ನಲ್ಲಿ ಅಂ

(2ನೇ ಪುಟ ನೋಡಿ)

## ಮಗನ ಸಾವಿನ ಸುದ್ದಿ ಕೇಳಿ ತಂದೆ ಹೃದಯಾಘಾತದಿಂದ ಸಾವು





ಮಲ್ಲಮ್ಮನುಡಿ ವಾರ್ತೆ ಯಾದಗಿರಿ :ಜು.10: ಜಿಲ್ಲೆಯ ವಡಗೇರ ಪಟ್ಟಣದ 22 ವರ್ಷದ ಮಹೆಬೂಬ್ ಆತ್ಮಹತ್ಯೆ ಮಾಡಿಕೊಂಡ ಯುವಕನಾಗಿದ್ದು, ಆತನ ತಂದೆ 50 ವರ್ಷದ ಸೈಯದ್ ಅಲಿ ಹೃದಯಾಘಾತದಿಂದ ಸಾವನ್ನಪ್ಪಿದ್ದಾರೆ. ಕಳೆದ ಒಂದು ವಾರದ ಹಿಂದೆ ಜಮೀನಿನಲ್ಲಿ ದಾರಿ ವಿಚಾರವಾಗಿ ಮಹೆಬೂಬ್ ದಲಿತ ಕುಟುಂಬವೊಂದರೊಂದಿಗೆ ಜಗಳವಾಡಿದ್ದ ಎನ್ನಲಾಗಿದೆ. ಈ ಜಗಳವನ್ನು ಹಿರಿಯರು ನ್ಯಾಯ ಪಂಚಾಯಿತಿ ಮೂಲಕ ಬಗೆಹರಿಸಿದ್ದರು. ಆದರೆ, ಬೇರೆ ಊರಿನಿಂದ ಬಂದ ದಲಿತ ಮುಖಂಡನೊಬ್ಬ ಮಹೆಬೂಬ್ ವಿರುದ್ಧ

ಜಾತಿ ನಿಂದನೆ ಕೇಸ್ ದಾಖಲಿಸಲು ಮುಂದಾಗಿದ್ದಾನೆ. "ಜಾತಿ ನಿಂದನೆ ಕೇಸ್ ದಾಖಲಿಸಿ ಜೈಲಿಗೆ ಕಳುಹಿಸುತ್ತೇನೆ" ಎಂದು ಆ ಮುಖಂಡ ಮಹೆಬೂಬ್‌ಗೆ ಬೆದರಿಕೆ ಹಾಕಿದ್ದಾನೆ ಎಂದು ಆರೋಪಿಸಲಾಗಿದೆ. ಆತ್ಮಹತ್ಯೆ ಮತ್ತು ತಂದೆಯ ಸಾವು ಈ ಬೆದರಿಕೆಯಿಂದ ವಿಚಲಿತನಾದ ಮಹೆಬೂಬ್, ಕೇಸ್ ದಾಖಲಾದರೆ ಮಾನ ಮರ್ಯಾದೆ ಹೋಗುತ್ತದೆ ಮತ್ತು ಜೈಲಿಗೆ ಹೋಗಬೇಕಾಗುತ್ತದೆ ಎಂದು ಹೆದರಿ, ನಿನ್ನೆ ಮರಕ್ಕೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಮಗನ ಆತ್ಮಹತ್ಯೆ ಸುದ್ದಿ ಕೇಳಿ ತೀವ್ರ ಆಘಾತಕ್ಕೆ ಒಳಗಾದ ತಂದೆ ಸೈಯದ್ ಅಲಿ ಅವರಿಗೆ ಹೃದಯಾಘಾತವಾಗಿದೆ.

ತಕ್ಷಣವೇ ಅವರನ್ನು ಕಲಬುರಗಿಯ ಜಯದೇವ ಆಸ್ಪತ್ರೆಗೆ ದಾಖಲಿಸಲಾಗಿದೆಯಾದರೂ, ಚಿಕಿತ್ಸೆ ಫಲಕಾರಿಯಾಗದೆ ಸೈಯದ್ ಅಲಿ ಕೂಡ ಸಾವನ್ನಪ್ಪಿದ್ದಾರೆ. ಈ ಘಟನೆ ವಡಗೇರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ.

## ವಸತಿ ಶಾಲೆಗೆ ಸೇರಿಸಿದ್ದಕ್ಕೆ ವಿದ್ಯಾರ್ಥಿ ಆತ್ಮಹತ್ಯೆ



ಮಲ್ಲಮ್ಮನುಡಿ ವಾರ್ತೆ ಕಲಬುರಗಿ:ಜು.10: ವಸತಿ ಶಾಲೆಗೆ ಸೇರಿಸಿದ್ದಕ್ಕೆ 7ನೇ ತರಗತಿ ವಿದ್ಯಾರ್ಥಿಯೋರ್ವ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಸೇಡಂ ತಾಲೂಕಿನ ಮುಧೋಳದ ವಸತಿ ಶಾಲೆಯೊಂದರಲ್ಲಿ ಗುರುವಾರ ನಡೆದಿದೆ.

ಕಲಬುರಗಿ ತಾಲೂಕಿನ ಪಾಣೆಗಾಂವ್ ಗ್ರಾಮದ ನಾರಾಯಣ ರಾಠೋಡ್ (13) ಮೃತ ವಿದ್ಯಾರ್ಥಿ ಎಂದು ಗುರುತಿಸಲಾಗಿದೆ.

ವಸತಿ ಶಾಲೆಗೆ ಸೇರಿಸಿದರೆ ಆತ್ಮಹತ್ಯೆ ಮಾಡಿಕೊಳ್ಳುತ್ತೇನೆ ಎಂದು ಬಾಲಕ ನಾರಾಯಣ ರಾಠೋಡ್ ಈ ಹಿಂದೆ ಹೇಳಿದ್ದನು. ಈ ವೇಳೆ ಪೋಷಕರು ನಾರಾಯಣ ರಾಠೋಡ್ ನನ್ನು ಮನವೊಲಿಸಿ ಮುಧೋಳದ ಇಂದಿರಾ ಗಾಂಧಿ ವಸತಿ ಶಾಲೆಗೆ ದಾಖಲಿಸಿದ್ದರು. ವಿದ್ಯಾರ್ಥಿ ತಾಯಿಯನ್ನು ಬಿಟ್ಟಿರಲಾರದೆ ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎಂಬ ಶಂಕೆ ವ್ಯಕ್ತಪಡಿಸಲಾಗಿದೆ.

ಮುಧೋಳ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಪ್ರಕರಣ ನಡೆದಿದೆ.

## ಬೀದರ್ ಜಿಲ್ಲೆಯಲ್ಲಿ ಎರಡು ವರ್ಷದಲ್ಲಿ 132 ಮಂದಿ ರೈತರು ಆತ್ಮಹತ್ಯೆಗೆ ಶರಣು



ಮಲ್ಲಮ್ಮನುಡಿ ವಾರ್ತೆ ಬೀದರ. ಜು. 10 : ಬೀದರ್ ಜಿಲ್ಲೆಯಲ್ಲಿ ರೈತರ ಆತ್ಮಹತ್ಯೆ ಪ್ರಕರಣಗಳು ಕಡಿಮೆಯಾಗುತ್ತಿಲ್ಲ. ಬೀದರ್ ಕೃಷಿ ಪ್ರಧಾನ ಜಿಲ್ಲೆಯಾಗಿದೆ. ಕಬ್ಬು, ಉದ್ದು, ಹಸಿರು ಕಾಳು, ಸೋಯಾಬಿನ್, ಶುಂಠಿ ಹೀಗೆ ಹಲವು ಬೆಳೆಗಳನ್ನು ಬೆಳೆಯಲಾಗುತ್ತದೆ. ಜಿಲ್ಲೆಯ ಒಂದಷ್ಟು ಕಡೆ ನೀರಾವರಿಯ ಸೌಲಭ್ಯವೂ ಇದೆ. ಆದರೆ, ಜಿಲ್ಲೆಯಲ್ಲಿ ರೈತರು ಆತ್ಮಹತ್ಯೆ ಸಂಖ್ಯೆ ಮಾತ್ರ ಏರುತ್ತಲೇ ಇದೆ. ಎರಡೂವರೆ ವರ್ಷದಲ್ಲಿ ಬೀದರ್ ಜಿಲ್ಲೆಯೊಂದರಲ್ಲೇ ಬರೋಬ್ಬರಿ 132 ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಬಹುತೇಕ ರೈತರ ಆತ್ಮಹತ್ಯೆಗೆ ಬ್ಯಾಂಕ್ ಹಾಗೂ ಖಾಸಗಿ ಸಾಲ ಕಾರಣವಾಗಿರುವುದು ಸ್ಪಷ್ಟವಾಗಿದೆ. ಬರಗಾಲ, ಸಾಲ, ಮತ್ತಿತರೆ ಕಾರಣಗಳಿಂದ ರೈತರು ಆತ್ಮಹತ್ಯೆಗೆ ಶರಣಾಗುತ್ತಿದ್ದಾರೆ. ಸರಕಾರದ ಸಾಲ ಮನ್ನಾ ಸೇರಿದಂತೆ ಅನೇಕ ಯೋಜನೆಗಳಿದ್ದ ಮೇಲೂ ರೈತರ ಸರಣಿ ಆತ್ಮಹತ್ಯೆ ನಿಲ್ಲದಿರುವುದು ಕಳವಳಕಾರಿಯಾದ ಬೆಳವಣಿಗೆಯಾಗಿದೆ. ರೈತರು ಆತ್ಮಹತ್ಯೆ ಮಾಡಿಕೊಳ್ಳಲಿಕ್ಕೆ ಸರಕಾರ ಕಾರಣ ಎಂದು ರೈತ

(2ನೇ ಪುಟ ನೋಡಿ)

## ಅನಧಿಕೃತ ಅಕ್ಕಿ ದಾಸ್ತಾನು, ಸಾಗಾಣಿಕೆ ಪತ್ತೆ ಎಪ್ರೀಲ್‌ನಿಂದ ಈತನಕ 12 ಪ್ರಕರಣ ದಾಖಲು



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.10-ಜಿಲ್ಲೆಯಲ್ಲಿ ಸರ್ಕಾರದ ವಿವಿಧ ಯೋಜನೆಯ ಅಕ್ಕಿಯನ್ನು ಅನಧಿಕೃತವಾಗಿ ದಾಸ್ತಾನು ಮಾಡಿ ಸಾಗಾಣಿಕೆ ಮಾಡುತ್ತಿರುವದನ್ನು ಆಹಾರ ಇಲಾಖೆಯ ಅಧಿಕಾರಿಗಳು ಪತ್ತೆ ಹಚ್ಚಿ ಜಪ್ತ ಮಾಡಿ ಪ್ರಕರಣಗಳನ್ನು ದಾಖಲಿಸಿಕೊಂಡಿದ್ದಾರೆ.

ಆಹಾರ ಇಲಾಖೆಯ ಜಂಟಿ ನಿರ್ದೇಶಕ ಶ್ರೀಶೈಲ ಕಂಕಣವಾಡಿ ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿ ಮಾಹಿತಿ ನೀಡಿದ್ದು, ಸರ್ಕಾರದ ವಿವಿಧ ಯೋಜನೆಗಳಡಿ ಫಲಾನುಭವಿಗಳಿಗೆ ವಿತರಿಸಲಾಗುವ ಅಕ್ಕಿಯನ್ನು ಅನಧಿಕೃತವಾಗಿ ದಾಸ್ತಾನು ಮಾಡಿ ಬೇರೆಡೆ ಸಾಗಿಸುತ್ತಿರುವವರನ್ನು ಪತ್ತೆ ಹಚ್ಚಿ ಅಗತ್ಯ ವಸ್ತುಗಳ ಕಾಯ್ದೆ-1955ರಡಿ ಪ್ರಕರಣ ದಾಖಲಿಸುವ ಕಾರ್ಯ ನಿರಂತರವಾಗಿ ನಡೆದಿದೆ ಎಂದಿದ್ದಾರೆ.

ಜುಲೈ 8 ರಾತ್ರಿ ಸಾರ್ವಜನಿಕರಿಂದ ಬಂದ ದೂರವಾಣಿ ಕರೆಯ ಮೇರೆಗೆ ಆಹಾರ, ಕಂದಾಯ ಹಾಗೂ ಪೊಲೀಸ್ ಇಲಾಖೆಗಳ ಅಧಿಕಾರಿಗಳ ತಂಡದೊಂದಿಗೆ ದಾಳಿ ಮಾಡಿ, ಅಕ್ಕಿಯನ್ನು ಅನಧಿಕೃತವಾಗಿ ದಾಸ್ತಾನು ಮಾಡಿ ಸಾಗಾಣಿಕೆ ಮಾಡುತ್ತಿರುವುದನ್ನು ಪತ್ತೆ ಹಚ್ಚಿ ಜಿಲ್ಲೆಯ ರಬಕವಿ ಬನಹಟ್ಟಿ ತಾಲೂಕಿನ ಮಹಾಲಿಂಗಪೂರ ಸಮೀಪದ ಬುದ್ನಿ ಗ್ರಾಮದಲ್ಲಿ ಸುಮಾರು 150 ಕ್ವಿಂಟಲ್ ಅಕ್ಕಿ ಹಾಗೂ ಒಂದು ವಾಹನವನ್ನು ಹಾಗೂ ಜುಲೈ 9 ರಂದು ಮುಧೋಳ ತಾಲೂಕಿನ ಇಂಗಳಗಿ ಗ್ರಾಮದಲ್ಲಿ ಅನಧಿಕೃತವಾಗಿ ಸಂಗ್ರಹಿಸಿದ 14.75 ಕ್ವಿಂಟಲ್

(2ನೇ ಪುಟ ನೋಡಿ)

## ಗಣೇಶ ಉತ್ಸವ ಪರಿಸರ ಸ್ನೇಹಿ ಮತ್ತು ಸೌಹಾರ್ದತೆಯಿಂದ ಆಚರಿಸೋಣ: ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ



ಮಲ್ಲಮ್ಮನುಡಿ ವಾರ್ತೆ ಬೀದರ. ಜು.10 : ಜಿಲ್ಲೆಯಲ್ಲಿ ಮುಂಬರುವ ಗಣೇಶ ಉತ್ಸವವನ್ನು ಪರಿಸರ ಸ್ನೇಹಿ ಮತ್ತು ಸೌಹಾರ್ದತೆಯಿಂದ ಆಚರಿಸೋಣ ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ತಿಳಿಸಿದರು.

ಅವರು ಗುರುವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಗಣೇಶ ಉತ್ಸವ ಪೂರ್ವಭಾವಿ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಿಲ್ಲೆಯಲ್ಲಿ ಪಿ.ಓ.ಪಿ ಹಾಗೂ ರಾಸಾಯನಿಕ ಗುಣಗಳುಳ್ಳ ವಸ್ತುಗಳನ್ನು ಬಳಸಿ ತಯಾರಿಸಲಾದ ಗಣೇಶ ವಿಗ್ರಹಗಳ ಉತ್ಪಾದನೆ, ಸಂಗ್ರಹ, ಮಾರಾಟ ನಿಷೇಧಿಸಿ ಮಣ್ಣಿನಿಂದ ಮಾಡಿದ ವಿಗ್ರಹಗಳನ್ನು ಬಳಕೆ ಮಾಡಬೇಕು. ನೀರಿನ ಮೂಲಗಳಾದ ನದಿ, ತೊರೆ, ಹಳ್ಳ, ಕೆರೆ, ಬಾವಿ ಇವುಗಳ ನೀರು ಮಾಲಿನ್ಯವಾಗದಂತೆ ನೋಡಿಕೊಳ್ಳಬೇಕು ಎಂದರು.

ಗಣೇಶ ವಿಗ್ರಹಗಳ ಪ್ರತಿಷ್ಠಾಪಣೆ ಹಾಗೂ ವಿಸರ್ಜನೆ ದಿನದಂದು ನಡೆಯುವ ಮೆರವಣಿಗೆಯಲ್ಲಿ ಕಡಿಮೆ ಶಬ್ದ ಇರುವ ಡಿಜೆ ಮಾತ್ರ ಬಳಸಬೇಕು ಮತ್ತು ಸಮಯ ಪಾಲನೆ ಮಾಡಬೇಕು ಎಂದರು. ಒಂದು ವೇಳೆ ಹೆಚ್ಚಿನ ಶಬ್ದ ಹೊಂದಿರುವ ಡಿಜೆ ಕಂಡುಬಂದರೆ ಅದನ್ನು ತಕ್ಷಣ ಜಪ್ತಿ ಮಾಡಬೇಕು ಮತ್ತು ಸಾರ್ವಜನಿಕರಿಗೆ ತೊಂದರೆಯಾಗದಂತೆ ಸೌಹಾರ್ದತೆಯಿಂದ ಗಣೇಶ ಉತ್ಸವ ಆಚರಿಸಬೇಕು ಎಂದರು.

ಗಣೇಶ ಮಂಡಳಿ ಕಾರ್ಯಾಧ್ಯಕ್ಷರಾದ ಬಾಬು ವಾಲಿ ಮಾತನಾಡಿ, ಮಣ್ಣಿನ ಗಣೇಶ ವಿಗ್ರಹಗಳು ಸಾರ್ವಜನಿಕರು ಬಳಸುವಂತೆ ಜನರಲ್ಲಿ ಮತ್ತು ಶಾಲಾ-ಕಾಲೇಜುಗಳಲ್ಲಿ ಜಾಗೃತಿ ಮೂಡಿಸಬೇಕು ಎಂದರು.

ಈ ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ. ಈಶ್ವರ ಉಳ್ಳಾಗಡ್ಡಿ, ಡಿ.ವಾಯ್. ಎಸ್.ಪಿ. ಶಿವನಗೌಡ ಪಾಟೀಲ, ಪರಿಸರಾಧಿಕಾರಿ ಮೃತ್ಯುಂಜಯ, ಮುಖಂಡರುಗಳಾದ ಶಶಿ ಹೊಸಳ್ಳಿ, ರಮೇಶ ಚಿಟ್ಟಾ, ಗಣೇಶ ಭೊಸಲೆ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಗ್ರಂಥಗಳಲ್ಲಿ ಪಟ್ಟದ್ದೇವರ ತುಲಾಭಾರ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜು.10: ಇಲ್ಲಿಯ ಹಿರೇಮಠ ಸಂಸ್ಥಾನದಲ್ಲಿ ಗುರುವಾರ ಗುರುಪೂರ್ಣಿಮೆ ಸಂಭ್ರಮ ಮನೆ ಮಾಡಿತು.

ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು, ಪೀಠಾಧಿಪತಿ ಗುರುಬಸವ ಪಟ್ಟದ್ದೇವರ ಸಾನ್ನಿಧ್ಯದಲ್ಲಿ ಬೆಳಿಗ್ಗೆಯಿಂದಲೇ ಶ್ರೀಮಠದಲ್ಲಿ ವಿವಿಧ ಪೂಜೆ ಕೈಂಕರ್ಯ ನೆರವೇರಿದವು.

ಷಟಸ್ಥಲ್ ಧ್ವಜಾರೋಹಣ, ಪ್ರಾರ್ಥನೆ, ಪಾದಪೂಜೆ ಸೇರಿದಂತೆ ಮುಂತಾದ ಧಾರ್ಮಿಕ ಕಾರ್ಯಕ್ರಮ

(2ನೇ ಪುಟ ನೋಡಿ)

## ಮುಂದಿನ ಬಾರಿಯೂ ನಾನೇ ಸಿಎಂ



ಮಲ್ಲಮ್ಮನುಡಿ ವಾರ್ತೆ ನವದೆಹಲಿ,ಜು.10: ಮುಂದಿನ ಅವಧಿಗೂ ನಾನೇ ಮುಖ್ಯಮಂತ್ರಿಯಾಗಿರುತ್ತೆ?ನೆ. ಇದರಲ್ಲಿ ಯಾವುದೇ ಬದಲಾವಣೆ ಇಲ್ಲ ಎಂದು ಖಡಾಖಂಡಿತವಾಗಿ ಹೇಳಿರುವ ಸಿದ್ದರಾಮಯ್ಯನವರು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಹೆಚ್ಚಿನ ಕಾಂಗ್ರೆಸ್? ಶಾಸಕರ ಬೆಂಬಲ ಇಲ್ಲ ಎಂದಿದ್ದಾರೆ.

ದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ ರುವ ಅವರು, ನಾನು 5 ವರ್ಷಗಳ ಅವಧಿ ಮುಖ್ಯ ಮಂತ್ರಿಯಾಗಿ ಪೂರ್ಣಗೊಳಿಸುತ್ತೇನೆ. ಇದರಲ್ಲಿ ಯಾವುದೇ ಅನುಮಾನ ಇಲ್ಲ. ಇದೇ ತಿಂಗಳ ಆರಂಭದಲ್ಲಿ ನಾನು ಈ ಹೇಳಿಕೆ ನೀಡಿದಾಗ ಡಿ.ಕೆ.ಶಿವಕುಮಾರ್ ಕೂಡ ಜೊತೆಯಲ್ಲೆ ಇದ್ದರು. ಮುಂದಿನ 2028ರ ವಿಧಾನಸಭೆ ಚುನಾವಣೆಗೂ ನನ್ನದೇ ನಾಯಕತ್ವ ಇರುತ್ತದೆ ಎಂದರು.

ಡಿ.ಕೆ.ಶಿವಕುಮಾರ್ ಪಕ್ಷದ ಅಧ್ಯಕ್ಷರಾಗಿ ಶ್ರಮ ವಹಿಸಿದ್ದಾರೆ. ಕಷ್ಟಪಟ್ಟು ಕೆಲಸ ಮಾಡಿದ್ದಾರೆ ಎಂಬ ವಾದಕ್ಕೆ ಪ್ರತಿಕ್ರಿಯಿಸಿದ ಸಿದ್ದರಾಮಯ್ಯ, ಯಾರೇ ಆ ಸ್ಥಾನದಲ್ಲಿದ್ದರೂ ಅದೇ ರೀತಿ ಕೆಲಸ ಮಾಡಬೇಕು. ಡಿ.ಕೆ.ಶಿವಕುಮಾರ್ ಕೂಡ ತಮ್ಮ ಕರ್ತವ್ಯ ಮಾಡಿದ್ದಾರೆ ಎಂದಿದ್ದಾರೆ. ಕಾಂಗ್ರೆಸ್ ಶಾಸಕರ ಜೊತೆ ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ ಸಭೆ ನಡೆಸಿದ ವೇಳೆ ನಾಯಕತ್ವ ಬದಲಾವಣೆಯ ಬಗ್ಗೆ ಪ್ರಶ್ನೆ ಕೇಳಲಾಗಿಲ್ಲ, ಯಾವ ಶಾಸಕರೂ ಸಭೆಯಲ್ಲಿ ಈ ಕುರಿತು ಅಭಿಪ್ರಾಯ ಹೇಳಿಲ್ಲ.

ಕೆಲ ಶಾಸಕರು ಡಿ.ಕೆ.ಶಿವಕುಮಾರ್ ಅವರನ್ನು ಬೆಂಬಲಿಸಿ ಬಹಿರಂಗ ಹೇಳಿಕೆ ನೀಡಿದ್ದಾರೆ. ಆದರೆ ಅದು ಹೆಚ್ಚಿನ ಸಂಖ್ಯೆಯಲ್ಲಿಲ್ಲ ಎಂದು ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ.

ಎರಡೂವರೆ ವರ್ಷಗಳ ಅವಧಿಗೆ ಸೀಮಿತವಾಗಿ ಅಧಿಕಾರ ಹಂಚಿಕೆಯಾಗಿದೆ ಎಂಬುದು ಸರಿಯಲ್ಲ. ಹೈಕಮಾಂಡ್ ಯಾವುದೇ ನಿರ್ಧಾರ ತೆಗೆದುಕೊಂಡರೂ ನಾನು, ಡಿ.ಕೆ.ಶಿವಕುಮಾರ್ ಮತ್ತು ಎಲ್ಲರೂ ಅದನ್ನು ಅನುಸರಿಸುತ್ತೆ?ವೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರು ಈ ವಿಚಾರವಾಗಿ

(2ನೇ ಪುಟ ನೋಡಿ)

ಒಂದನೇ ಪುಟದಿಂದ

# 132 ಮಂದಿ ರೈತರು ಆತ್ಮಹತ್ಯೆಗೆ ಶರಣು

ಮುಂಖಡರು ಆರೋಪ ಮಾಡಿದ್ದಾರೆ. ಅತಿವೃಷ್ಠಿ, ಅನಾವೃಷ್ಠಿಯಿಂದ ರೈತರು ಬೆಳೆ ಕಳೆದುಕೊಂಡರೆ ಕೇಂದ್ರ ಹಾಗೂ ರಾಜ್ಯ ಸರಕಾರದಿಂದ ಪರಿಹಾರ ಸಿಗುತ್ತಿದೆ. ಸರ್ಕಾರ ರೈತರಿಗಾಗಿ ಹಲವು ಯೋಜನೆಗಳನ್ನು ಜಾರಿಗೆ ತಂದಿದೆ. ಆದರೂ ಕೂಡ ರೈತರು ಸದೃಢವಾಗಿ ನಿಲ್ಲಲು ಸಾಧ್ಯವಾಗುತ್ತಿಲ್ಲ ಎಂಬುವುದು ದುರಾದೃಷ್ಟಕರ ಸಂಗತಿ. ಮಳೆಯೂ ಕೂಡ ಜಿಲ್ಲೆಯ ರೈತರೊಂದಿಗೆ ಚೆಲ್ಲಾಟವಾಡುತ್ತಿದೆ ಎಂದರೆ ತಪ್ಪಾಗದು. ಒಮ್ಮೆ ಅತಿವೃಷ್ಠಿ ಮತ್ತೊಮ್ಮೆ ಅನಾವೃಷ್ಟಿ. ಎರಡು ರೀತಿಯಿಂದಲೂ ರೈತರಿಗೆ ನಷ್ಟವಾಗುತ್ತಿದೆ. ಕಳೆದ ಮೂರ್ನಾಲ್ಕು ವರ್ಷಗಳಿಂದ ಬರಗಾಲ ಜಿಲ್ಲೆಯಲ್ಲಿ ಮಂಡಿಯೂರಿದ್ದು, ರೈತ ಕುಸಿದು ಹೋಗುವಂತಾಗಿದೆ. ಬೆಳೆ ಬೆಳೆಯದ ಕಾರಣ ಸಾಲ ಮಾಡುವುದು ಅನಿವಾರ್ಯವಾಗಿದೆ. ಸಾಲ ತೀರಿಸಲಾಗದೆ ರೈತರು ಕೊನೆಗೆ ಆತ್ಮಹತ್ಯೆಗೆ ಶರಣಾಗುತ್ತಿದ್ದಾರೆ. ಮಳೆ ಇಲ್ಲದ ಸಮಯದಲ್ಲಿ ಸರ್ಕಾರ ಸಕಾಲದಲ್ಲಿ ರೈತರ ನೆರವಿಗೆ ಬಾರದೆ ಇರುವುದು ಒಂದು ಕಾರಣ ಎನ್ನಬಹುದಾಗಿದೆ. ಪ್ರಸಕ್ತ ಸಾಲಿನಲ್ಲಿ ಬರ ಪರಿಹಾರ, ಬೆಳೆ ವಿಮೆ, ಕಬ್ಬಿನ ಬಾಕಿ ಹಣ ಇನ್ನೂವರೆಗೂ ರೈತರ ಕೈಗೆ ಸಿಗದೆ ಜಿಲ್ಲೆಯ ಅನ್ನದಾತರು ಪರದಾಡುವಂತಾಗುತ್ತಿದೆ. 2023–23ನೇ ಸಾಲಿನಲ್ಲಿ 46 ಮಂದಿ ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. 2024–25 ನೇ ಸಾಲಿನಲ್ಲಿ 76 ಮಂದಿ ರೈತರು ಆತ್ಮಹತ್ಯೆ ಮಾಡಿಕೊಂಡಿದ್ದು, 2025ರಲ್ಲಿ ಈಗವರೆಗೆ 11 ಮಂದಿ ರೈತರು ಆತ್ಮಹತ್ಯೆ ಮಾಡಿಕೊಂಡಿದ್ದು, ಬೀದರ್‌ನಲ್ಲಿ 03, ಭಾಲ್ಕಿ 07, ಬಸವಕಲ್ಯಾಣ 0, ಹುಮನಾಬಾದ್ 02 ಹಾಗೂ ಔರಾದ್‌ನಲ್ಲಿ 0 ರೈತರು ಆತ್ಮಹತ್ಯೆಗೆ ಶರಣಾಗಿದ್ದಾರೆಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದರು. ಕಳೆದ ಎರಡೂವರೆ ವರ್ಷದಲ್ಲಿ ರೈತರು ಒಂದಿಲ್ಲೊಂದು ಕಾರಣಕ್ಕೆ ಆತ್ಮಹತ್ಯೆ ಮಾಡಿಕೊಳ್ಳುತ್ತಲೇ ಇದ್ದಾರೆ. ರೈತರನ್ನು ಸಂಕಷ್ಟದಿಂದ ಪಾರು ಮಾಡುವ ಉದ್ದೇಶದಿಂದ ಸರ್ಕಾರ ಹತ್ತಾರು ಯೋಜನೆಯನ್ನು ಜಾರಿಗೆ ತಂದರು ಕೂಡ ರೈತರ ಆತ್ಮಹತ್ಯೆಯನ್ನು ತಡೆಯಲು ಸಾಧ್ಯವಾಗುತ್ತಿಲ್ಲ. ಸರ್ಕಾರ ಈ ವಿಚಾರವನ್ನು ಗಂಭಿರವಾಗಿ ಪರಿಗಣಿಸಿ ರೈತರು ಯಾವ ವಿಚಾರಕ್ಕೆ ಆತ್ಮಹತ್ಯೆ ಮಾಡಿಕೊಳ್ಳುಲು ಮುಂದಾಗುತ್ತಾರೆ ಎಂದು ತಿಳಿದು ಆ ಸಮಸ್ಯೆಗೆ ಪರಿಹಾರ ಹುಡುಕಬೇಕಾಗಿದೆ. ರೈತರ ಆತ್ಮಹತ್ಯೆಗೆ ಬ್ರೇಕ್ ಹಾಕಬೇಕಾಗಿದೆ.

# ಎಪ್ರೀಲ್‌ನಿಂದ ಈತನಕ 12 ಪ್ರಕರಣ ದಾಖಲು

ಅಕ್ಕಿಯನ್ನು ಜಪ್ತ ಮಾಡಿ ಅಗತ್ಯ ವಸ್ತುಗಳ ಕಾಯ್ದೆ 1955ರಡಿ ಪೊಲೀಸ್ ಪ್ರಕರಣಗಳನ್ನು ಆಹಾರ ಇಲಾಖೆ ಅಧಿಕಾರಿಗಳು ದಾಖಲಿಸಿರುತ್ತಾರೆ. 2024–25ನೇ ಸಾಲಿನಲ್ಲಿ 16 ಪ್ರಕರಣಗಳನ್ನು ದಾಖಲಿಸಿ 1020.32 ಕ್ವಿಂಟಲ್ ಅಕ್ಕಿ ಹಾಗೂ 12 ವಾಹನಗಳನ್ನು ಜಪ್ತಿ ಮಾಡಿದ್ದು, 29 ಜನರನ್ನು ಬಂಧಿಸಲಾಗಿದೆ. ಹಾಗೆಯೇ 2025–26ನೇ ಸಾಲಿನಲ್ಲಿ ಏಪ್ರೀಲ್‌ನಿಂದ ಈತನಕ 12 ಪ್ರಕರಣಗಳನ್ನು ದಾಖಲಿಸಿ 391.02 ಕ್ವಿಂಟಲ್ ಅಕ್ಕಿ ಹಾಗೂ 6 ವಾಹನಗಳನ್ನು ಜಪ್ತ ಮಾಡಿ 20 ಜನರನ್ನು ಬಂಧಿಸಿ, ಅಗತ್ಯ ವಸ್ತುಗಳ ಕಾಯ್ದೆ 1955ರಡಿ ಪ್ರಕರಣ ದಾಖಲಿಸಲಾಗಿರುತ್ತದೆ. ಈ ಪ್ರಕರಣಗಳು ಆಯಾ ತಾಲೂಕಾ ಜೆಎಂಎಫ್‌ಸಿ ನ್ಯಾಯಾಲಯಗಳಲ್ಲಿ ವಿಚಾರಣೆ–ಯ ಹಂತದಲ್ಲಿವೆ ಎಂದು ಕಂಕಣವಾಡಿ ತಿಳಿಸಿದ್ದಾರೆ. ಸರ್ಕಾರದ ವಿವಿಧ ಯೋಜನೆಯ ಆಹಾರಧಾನ್ಯ ದುರ್ಬಳಕೆ ಕುರಿತು ಯಾವುದಾದರೂ ದೂರುಗಳಿದ್ದಲ್ಲಿ ಪೋಲೀಸ್ ಇಲಾಖೆಯ ಸಹಾಯವಾಣಿ : 112, 9480803900, ಆಹಾರ ಇಲಾಖೆಯ ಸಹಾಯವಾಣಿ 1967 ದೂರವಾಣಿ 08354–235094 ಕರೆ ಮಾಡಿ ದೂರು ಸಲ್ಲಿಸಬಹುದಾಗಿದೆಯಲ್ಲದೇ ಸಂಬಂಧಿಸಿದ ತಾಲೂಕಿನ ಆಹಾರ ಇಲಾಖೆ ಅಧಿಕಾರಿಗಳಿಗೂ ಸಲ್ಲಿಸಬಹುದು. ತಹಶೀಲ್ದಾರ ಕಚೇರಿಯ ಆಹಾರ ನಿರೀಕ್ಷಕರಿಗೂ ದೂರು ನೀಡಬಹುದಾಗಿದೆ ಎಂದು ಆಹಾರ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಟ್ಟದ್ದೇವರ ತುಲಾಭಾರ

ಜರುಗಿದವು. ಮಹಾರಾಷ್ಟ್ರ ಬಸವ ಭಕ್ತರು ಭಜನೆ ಕಾರ್ಯಕ್ರಮ ನಡೆಸಿ ಕೊಟ್ಟರು. ದಿನವೀಡಿ ಶ್ರೀಮಠ ಭಕ್ತರಿಂದ ತುಂಬಿ ತುಳಿಕಿತು. ರಾಜ್ಯ ಅಲ್ಲದೇ ನೆರೆಯ ಮಹಾರಾಷ್ಟ್ರ, ತೆಲಂಗಾಣ ರಾಜ್ಯದ ಭಕ್ತರು ಆಗಮಿಸಿ ಉಭಯ ಪೂಜ್ಯರನ್ನು ಶಾಲು ಹೊದಿಸಿ, ಹಣ್ಣು ಹಂಪಲು, ಕಾಣಿಕೆ ನೀಡಿ ಆಶೀರ್ವಾದ ಪಡೆದು ಕೊಂಡ ದೃಶ್ಯ ಕಂಡು ಬಂತು.ಗ್ರಂಥಗಳಲ್ಲಿ ತುಲಾಭಾರ :ಇದೇವೇಳೆ ಇದೆ ಮೊದಲ ಬಾರಿಗೆ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಅವರನ್ನು ಬಸವಾದಿ ಶರಣರ ಗ್ರಂಥಗಳಲ್ಲಿ ತುಲಾಭಾರ ನೆರವೇರಿಸಿದ್ದು ವಿಶೇಷ ವೆನಿಸಿತು.ಮಹಾರಾಷ್ಟ್ರದ ಭಕ್ತರು ಮಹಾರಾಷ್ಟ್ರ ಬಸವ ಪರಿಷತ್ ವತಿಯಿಂದ ಪ್ರಕಟಿಸಿದ ಮರಾಠಿ ಭಾಷೆಯ ಅನುವಾದಿತ ಬಸವಾದಿ ಶರಣರ ಸುಮಾರು 500 ಗ್ರಂಥಗಳಲ್ಲಿ ಪೂಜ್ಯರನ್ನು ತುಲಾಭಾರ ನಡೆಸಿ ಗ್ರಂಥಗಳ ಮೂಲಕ ವಿಶಿಷ್ಟವಾಗಿ ಬಸವ ತತ್ವದ ಮಹತ್ವ ಸಾರುವ ಪ್ರಯತ್ನ ಮಾಡಲಾಯಿತು.ಮಹಾರಾಷ್ಟ್ರದ ದೇಗಲೂರು ಮೂಲದ ಡಾ.ರವೀಂದ್ರ ಭಾಲ್ಕೆ ಅವರು ಗ್ರಂಥ ತುಲಾಭಾರದ ದಾಸೋಹ ವಹಿಸಿ ಕೊಂಡಿದ್ದರು. ಸಾಹಿತಿ ರಾಜು ಜುಬರೆ ಪ್ರಾಸ್ತಾವಿಕವಾಗಿ ಮಾತನಾಡಿದರು. ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು, ಗುರುಬಸವ ಪಟ್ಟದ್ದೇವರು ತಮ್ಮ ಆಶೀರ್ವಚನದ ಮೂಲಕ ಗುರುವಿನ ಮಹತ್ವ ಸಾರಿದರು. ಮಹಾಲಿಂಗ ಸ್ವಾಮೀಜಿ ನೇತೃತ್ವ ವಹಿಸಿದ್ದರು. ಮಾಜಿ ಶಾಸಕ ಪ್ರಕಾಶ ಖಂಡ್ರೆ, ಕಿರಣ ಖಂಡ್ರೆ ಸೇರಿದಂತೆ ಮುಂತಾದವರು ಇದ್ದರು.ಉದಗೀರಿನ ಶಕುಂತಲಾ ಸಂಜು ಘಾಳೆ, ಸಾರಿಕಾ ವಿಶಾಲ ಘಾಳೆ ಪ್ರಸಾದ ದಾಸೋಹ ಕೈಗೊಂಡಿದ್ದರು.ಮನುಷ್ಯನ ಬದುಕು ಸಾರ್ಥಕವಾಗಬೇಕಾದರೇ ಗುರುವಿನ ಸಾಕ್ಷಾತ್ಕಾರ ಆಗಬೇಕು. ಗುರುವಿನ ಗುಲಾಮನಾಗುವ ತನಕ ದೊರೆಯದಣ್ಣ ಮುಕುತಿ ಎನ್ನುವ ದಾಸರ ವಾಣಿಯಂತೆ ಬಾಲ್ಯ, ಯೌವನ, ಮುಪ್ಪು ಈ ಮೂರು ಹಂತಗಳನ್ನು ದಾಟಬೇಕು ಅದಕ್ಕೆ ಗುರುವಿನ ಮಾರ್ಗದರ್ಶನ ಅಗತ್ಯ.–ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಹಿರೇಮಠ ಸಂಸ್ಥಾನ ಭಾಲ್ಕಿ

ಯಾವುದೇ ವ್ಯಕ್ತಿ ಜೀವನದಲ್ಲಿ ಯಶಸ್ಸು ಸಾಧಿಸಲು ಗುರು ಮತ್ತು ಗುರಿ ಅಗತ್ಯವಾಗಿರುತ್ತದೆ. ಅವುಗಳ ಪಾಲನೆ ಮಾಡದಿದ್ದರೇ ಪ್ರಯತ್ನಕ್ಕೆ ಯಶಸ್ಸು ಸಿಗಲಾರದು. ಗುರು ಪರಂಪರೆಗೆ ಕೃತಜ್ಞತೆ ಸಲ್ಲಿಸುವುದೇ ಗುರು ಪೂರ್ಣಿಮೆಯ ಮಹತ್ವ. –ಗುರುಬಸವ ಪಟ್ಟದ್ದೇವರು ಹಿರೇಮಠ ಸಂಸ್ಥಾನ ಭಾಲ್ಕಿ

# ವಂಚಿಸಿದ್ದ ವಂಚಕನ ಬಂಧನ

ದಾಜು 56 ಸಾರ್ವಜನಿಕರಿಂದ ಹಣ ಸಂಗ್ರಹಿಸಿ ಹೂಡಿಕೆ ಮಾಡಿಸಿಕೊಂಡು ವಂಚನೆ ಮಾಡಿರುತ್ತಾನೆ. ಅಲ್ಲದೇ ಒಬ್ಬ ಗ್ರಾಹಕರಿಗೆ ಹಣ ಹೂಡಿಕೆ ಮಾಡುವಂತೆ ಪ್ರೇರೆಪಿಸಿದ ದಲ್ಲಾಳಿಗಳಿಗೆ ಪ್ರತಿ ಗ್ರಾಹಕ ವ್ಯಕ್ತಿಯ ಹೂಡಿಕೆ ಮಾಡುವ ಹಣಕ್ಕೆ 15% ಪ್ರತಿಶತ ಕಮೀಷನ ಹಣ ನೀಡಿರುತ್ತಾನೆ. ಆರೋಪಿತನು ಸಾರ್ವಜನಿಕರಿಗೆ 06 ತಿಂಗಳ ಸ್ಕಿಮ್, 08 ತಿಂಗಳ ಸ್ಕಿಮ್, 12 ತಿಂಗಳ ಸ್ಕಿಮ್ ಹೀಗೆ ಮೂರು ರೀತಿಯ ವಿವಿಧ ಸ್ಕಿಮ್ ಗಳಿಂದ ಅಧಿಕ ಲಾಭಾಂಶದ ಹಣದ ಆಸೆ ತೋರಿಸಿ ಆರೋಪಿತನಾದ ರಾಮು ಅಕುಲ್ @) ರಾಮಚಂದ್ರಚಾರಿ ಅಕುಲ ತಂದೆ ಚಾರಿ ಅಕುಲಾ, ವಯ: 58 ವರ್ಷ, ಉ: ರಿಯಲ್ ಎಸ್ಟೇಟ ಕೆಲಸ, ಸಾ: ಪ್ಲಾಟ್ ನಂ 26/ಬಿ. ಎಸ್.ಪಿ. ಆರ್.ಬಿ ರೆಡ್ಡಿ ನಗರ ಅಲ್ವಾಸಗುಡ, ರಂಗರೆಡ್ಡಿ, ರಾಜ್ಯ ತೆಲಂಗಾಣ ಮೊಬೈಲ್ ನಂ: 8431936405 ಈತನು ಕಲಬುರಗಿ ನಗರದಲ್ಲಿ ವೇನಿಸ್ ಎಂಟರ್‌ಪ್ರೆಸೆಸ್ಟ್ ಎಂಬ ಹೆಸರಿನಲ್ಲಿ ಅಧಿಕ ಬಡ್ಡಿ ಹಣದ ಆಸೆಯನ್ನು ಸಾರ್ವಜನಿಕರಿಗೆ ತೋರಿಸಿ, ಕಲಬುರಗಿ ನಗರ ಹಾಗೂ ಜಿಲ್ಲೆ , ವಿಜಯಪೂರ ಮತ್ತು ಬೀದರ ಹೀಗೆ ಮೂರು ಜಿಲ್ಲೆಗಳಲ್ಲಿನ ಒಟ್ಟು ಅಂದಾಜು 800 ಕ್ಕಿಂತ ಅಧಿಕ ಗ್ರಾಹಕರಿಗೆ ಅಧಿಕ ಬಡ್ಡಿಯ ಆಸೆಯನ್ನು ತೆ–ೂರಿಸಿ, ಹಣ ಹೂಡಿಕೆ ಮಾಡಿಕೊಂಡು ಲಾಭಾಂಶದ ಹಣ ನೀಡುವುದಾಗಿ ಎಂದು ಹೇಳಿ ಮೋಸ, ವಂಚನೆ ಮಾಡಿದ್ದಾನೆ ಎಂದರು. ದೂರು ದಾಖಲಾಗುವ ಮುನ್ನ ಆರೋಪಿಯು ತಲೆಮರೆಸಿಕೊಂಡು ಹೋಗಿದ್ದನು. ಆತನ ಪತ್ತೆಗಾಗಿ ವಿಶೇಷ ತಂಡ ರಚಿಸಲಾಗಿತ್ತು, ವಿಶೇಷ ತಂಡವು ಆರೋಪಿಯನ್ನು ಹೈದರಾಬಾದನಲ್ಲಿ ಬಂಧಿಸಿದೆ ಎಂದರು.ಸುದ್ದಿಗೋಷ್ಠಿಯಲ್ಲಿ ಡಿಸಿಪಿ ಕನ್ನಿಕಾ ಸಿಕ್ರಿವಾಲ್ ಹಾಗೂ ಸಿಇಎನ್ ಎಸಿಪಿ ಮಡಿಯಾಳಪ್ಪ ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.ವಂಚನೆಗೊಳಗಾಗಬೇಡಿ:ಕಲಬುರಗಿ ನಗರ ಪೊಲೀಸ್ ಆಯುಕ್ತಾಯಲದ ವತಿಯಿಂದ ಸಾರ್ವಜನಿಕರಲ್ಲಿ ಮನವಿ ಮಾಡಿಕೊಂಡಿರುವ ಡಾ.ಶರಣಪ್ಪ ಢಗೆಯವರು ಯಾವುದೇ ವ್ಯಕ್ತಿಗಳು ಅತ್ಯಂತ ಕಡಿಮೆ ಅವಧಿಯಲ್ಲಿ ಹಣ ಹೂಡಿಕೆ ಮಾಡಿಕೊಂಡು ಅತ್ಯಂತ ಕಡಿಮೆ ಸಮಯದಲ್ಲಿ ಹೆಚ್ಚಿನ ಲಾಭವನ್ನು (15% ರಿಂದ 20%) ನೀಡಲು ಸಾಧ್ಯವಿಲ್ಲ, ಸಾರ್ವಜನಿಕರು ದುರಾಸೆ ಹಾಗೂ ಆಮೀಷಗಳಿಗೆ ಒಳಗಾಗದೇ, ಜಾಗೃತರಾಗಿರಬೇಕು. ಈ ರೀತಿಯ ಹೂಡಿಕೆ ಹಣದಿಂದ ಬರುವ ಲಾಭಾಂಶದಿಂದ ಹಣ ದುಪ್ಪಟ್ಟು ಮಾಡುವ ಹಾಗೂ ವಿವಿಧ ಸ್ಕಿಮ್ ಗಳ ಹೆಸರಿನಲ್ಲಿ ಹೆಚ್ಚಿನ ಹಣ ಗಳಿಸುವ ಹಾಗೂ ಈ ರೀತಿಯ ಅಪರಾಧಗಳಲ್ಲಿ ಭಾಗಿಯಾಗುವಂತೆ ಪ್ರೇರೆಪಿಸುವ ವ್ಯಕ್ತಿಗಳು ಕಂಡು ಬಂದಲ್ಲಿ ಸ್ಥಳಿಯ ಪೊಲೀಸ್ ಠಾಣೆಗೆ ಮಾಹಿತಿ ನೀಡಬೇಕೆಂದು ಮನವಿ ಮಾಡಿದ್ದಾರೆ.

# ಬಾರಿಯೂ ನಾನೇ ಸಿಎಂ

ತಮ ಬಳಿ ಏನನ್ನೂ ಹೇಳಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.ಸುರ್ಜೇವಾಲ ಸಭೆ ನಡೆಸಿದ ವೇಳೆ ಕ್ಷೆ?ತ್ರದಲ್ಲಿ ಗ್ಯಾರಂಟಿಯೋಜನೆಗಳು ಯಾವ ರೀತಿ ಅನುಷ್ಠಾನಗೊಂಡಿವೆ, ಏನೆಲ್ಲಾ ಅಭಿವೃದ್ಧಿ ಕೆಲಸಗಳಾಗಿವೆ, ಸರ್ಕಾರದಿಂದ ಮತ್ಯಾವರೀತಿಯ ಕೆಲಸಗಳಾಗಬೇಕು ಎಂಬ ಪ್ರಶ್ನೆಗಳನ್ನಷ್ಟೆ ಕೇಳಿದ್ದಾರೆ. ನಾಯಕತ್ವದ ಬದಲಾವಣೆ ಬಗ್ಗೆ ಚರ್ಚೆಯೇಆಗಿಲ್ಲ.ಹೀಗಾಗಿ ತಾವು ಮುಂದಿನ ಎರಡೂವರೆ ವರ್ಷಗಳ ಕಾಲ ಮುಖ್ಯಮಂತ್ರಿಯಾಗಿರುತ್ತೇನೆ. ಸದ್ಯಕ್ಕೆ ಕುರ್ಚಿ ಖಾಲಿ ಇಲ್ಲ ಎಂದರು.ಸಚಿವ ಸಂಪುಟ ಪುನರ್ ರಚನೆಯ ಬಗ್ಗೆಯೂ ಚರ್ಚೆಯಾಗಿಲ್ಲ. ಆ ರೀತಿಯ ಯಾವ ಬೆಳವಣಿಗೆಯೂ ಇಲ್ಲ ಎಂದು ಸಿದ್ದರಾಮಯ್ಯ ಸ್ಪಷ್ಟಪಡಿಸಿದರು.ಗ್ಯಾರಂಟಿ ಯೋಜನೆಗಳಿಂದ ಸರ್ಕಾರ ದಿವಾಳಿಯಾಗಿಲ್ಲ. ಇದಕ್ಕೆ ಹಣಕಾಸಿನ ಕೊರತೆಯೂ ಇಲ್ಲ. ಒಂದೆರಡು ಪ್ರಕರಣಗಳಲ್ಲಿ ವೇತನಪಾವತಿಯಾಗಿಲ್ಲ ಎಂದಾಕ್ಷಣ ಸರ್ಕಾರ ಆರ್ಥಿಕವಾಗಿ ದಿವಾಳಿಯಾಗಿದೆ ಎಂದರ್ಥವಲ್ಲ ಎಂದು ಸ್ಪಷ್ಟಪಡಿಸಿದರು.ಗ್ಯಾರಂಟಿ ಯೋಜನೆಗಳಿಂದ ಅಭಿವೃದ್ಧಿ ಯೋಜನೆಗಳು ಕುಂಠಿತವಾಗಿವೆ ಎಂಬುದು ಸರಿಯಲ್ಲ. ಬಜೆಟ್‌ನಲ್ಲಿ ಘೆಣಟಿಜಜಜುಟಿಜಜ?ಷಿಸಿದ ಎಲ್ಲಾ ಕಾಮಗಾರಿಗಳು, ಯೋಜನೆಗಳು ಜಾರಿಯಲ್ಲಿವೆ. ಶಾಸಕರು ವಿಶೇಷ ಅನುದಾನಕ್ಕಾಗಿ ಬೇಡಿಕೆ ಸಲ್ಲಿಸುತ್ತಿದ್ದಾರೆ. ಆ ವಿಚಾರವಾಗಿ ಚರ್ಚೆ ನಡೆಯುತ್ತಿವೆ ಎಂದರು.ಕೇಂದ್ರ ಸರ್ಕಾರ ಜಾರಿ ನಿರ್ದೇಶನಾಲಯವನ್ನು ಸಂಪೂರ್ಣವಾಗಿ ಕರ್ನಾಟಕ ಸರ್ಕಾರದ ಶಾಸಕರು, ಸಚಿವರನ್ನು ಗುರಿಯಾಗಿಸಿಕೊಂಡೇ ಬಳಕೆ ಮಾಡಿಕೊಳ್ಳುತ್ತಿದೆಣಟಿಜಜಜುಟಿಜಜ. ಗೃಹಸಚಿವ ಪರಮೇಶ್ವರ್ ಅವರ ಶಿಕ್ಷಣ ಸಂಸ್ಥೆಗಳ ಮೇಲೆ ದಾಳಿಯಾಯಿತು. ಈಗ ಶಾಸಕರುಗಳ ಮನೆ ಮೇಲೆ ದಾಳಿಯಾಗಿದೆ. ನನ್ನನ್ನೂ ಸೇರಿದಂತೆ ಎಲ್ಲರ ವಿರುದ್ಧವೂ ಇ.ಡಿ. ನಿಗಾ ಇರಿಸಿದೆ ಎಂದು ಹೇಳಿದರು.ಬಿಜೆಪಿಯ ವಿರುದ್ಧ ಶೇ.40 ರಷ್ಟು ಕಮಿಷನ್ ಆರೋಪ ಮಾಡಿದ್ದು ನಾವಲ್ಲ. ಗುತ್ತಿಗೆದಾರರ ಸಂಘದ ಅಧ್ಯಕ್ಷ ಕೆಂಪಣ್ಣ ಆರೋಪಿಸಿದ್ದರು. ನಾವು ಅದನ್ನು ಪುನರುಚ್ಚರಿಸಿದ್ದೇವೆ.ನಮ ಸರ್ಕಾರದ ವಿರುದ್ಧ ಶೇ.60 ರಷ್ಟು ಕಮಿಷನ್ ಆರೋಪವನ್ನು ಯಾರೂ ಮಾಡಿಲ್ಲ. ಬಿಜೆಪಿಯವರು ರಾಜಕೀಯ ಕಾರಣಕ್ಕಾಗಿ ಇಂತಹ ಹೇಳಿಕೆಗಳನ್ನು ನೀಡುತ್ತಿದ್ದಾರೆ ಎಂದು ತಿರುಗೇಟು ನೀಡಿದರು.ಆರ್‌ಸಿಬಿ ವಿಜಯೋತ್ಸವದ ವೇಳೆ ಕಾಲ್ತುಳಿತ ಪ್ರಕರಣದಲ್ಲಿ ಕಾಂಗ್ರೆಸ್? ಸರ್ಕಾರದ ಲೋಪವಾಗಲಿ, ವೈಫಲ್ಯವಾಗಲೀ ಇಲ್ಲ. ಆರ್‌ಸಿಬಿ ಮತ್ತು ಕರ್ನಾಟಕ ಕ್ರಿಕೆಟ್ ಸಂಸ್ಥೆ ಕಾರ್ಯಕ್ರಮ ಆಯೋಜಿಸಿದ್ದವು. ಅವರ ಮನವಿಯ ಮೇರೆಗೆ ವಿಧಾನಸೌಧದ ಬಳಿ ಅಭಿನಂದನಾ ಸಮಾರಂಭ ನಡೆಸಲಾಯಿತು. ಸಂಜೆ 4.15 ಕ್ಕೆ ಕಾಲ್ತುಳಿತವಾಗಿದೆ. ಈ ವಿಚಾರವನ್ನು ಪೊಲೀಸ್? ಅಧಿಕಾರಿಗಳು ನನಗೆ ಮಾಹಿತಿ ನೀಡಲಿಲ್ಲ ಮತ್ತು ಸರಿಯಾದ ಭದ್ರತೆ ಒದಗಿಸಲಿಲ್ಲ. ಈ ಕಾರಣಕ್ಕೆ ಅಮಾನತುಗೊಳಿಸಲಾಗಿದೆ ಎಂದರು.ರಾಜ್ಯದಲ್ಲಿ ಜಾತಿ ಜನಗಣತಿಯ 2ನೇ ಸಮೀಕ್ಷೆಯನ್ನು ಮೂರ್ನಾಲ್ಕು ತಿಂಗಳಲ್ಲೆ? ಪೂರ್ಣಗೊಳಿಸಲಾಗುವುದು ಎಂದು ಅವರು ಸ್ಪಷ್ಟಪಡಿಸಿದ್ದಾರೆ.

# ಅನಾಹುತ ಜರುಗುವ ಮುನ್ನ ಮುನ್ನೆಚ್ಚರ ವಹಿಸಿ : ಕರವೇ ಶರಣ ಬಸಪ್ಪ ಎಲ್ಹೇರಿ ಎಚ್ಚರಿಕೆ

ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ/ಗುರುಮಠಕಲ್:ಜು.10: ತಾಲೂಕಿನ ಕಾಳೆಬೆಳಗುಂದಿ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮೇಲ್ಛಾವಣಿ ಶಿಥಿಲ್ಗೊಂಡಿರುವ ಸ್ಥಿತಿಯಲ್ಲಿ ಇದ್ದರು ಸಹ ಪ್ರತಿನಿತ್ಯ ಆದರ ಕೆಳಗೆ ಮಕ್ಕಳ ವಿದ್ಯಾಭ್ಯಾಸ ಮಾಡುತ್ತಿರುವ ಮಕ್ಕಳ ಪರಿಸ್ಥಿತಿ ನೋಡಿದರೆ ತುಂಬಾ ಚಿಂತಜನಕ ವಿಚಾರ.



ಕಲ್ಯಾಣ ಕರ್ನಾಟಕದ ಶಿಕ್ಷಣ ವ್ಯವಸ್ಥೆ ಸುಧಾರಣೆ ಬರಿ ಮಾತಿಗೆ ಮಾತ್ರ ಅನ್ನುವ ಹಾಗಾಗಿದೆ ಯಾದಗಿರಿ ಜಿಲ್ಲೆ ಪ್ರಭಾವಿ ಶಾಸಕರು ಹಾಗೂ ಮಂತ್ರಿಗಳನ್ನು ಹೊಂದಿದ್ದು ಈ ಭಾಗಕ್ಕೆ ಲಾಭ ಪಡೆಯುವಲ್ಲಿ ವಿಫಲವಾಗಿದೆ.

ಕಳೆದ ಒಂದು ವರ್ಷದಿಂದ ಕಟ್ಟಡದ ಮೇಲ್ಛಾವಣೆ ಸಂಪೂರ್ಣ ಹಾಳಾಗಿ ಸ್ಟಿಲ್ ಹಳಿಗಳು ಹೊರಬಂದು ಸಿಮೆಂಟ್ ಕೆಳಗೆ ಬೀಳುತ್ತಿರುವ ಸ್ಥಿತಿಯಲ್ಲಿದೆ, ಅದರ ಕೆಳಗಡೆ ಮಕ್ಕಳಿಗೆ ದಿನನಿತ್ಯ ವಿದ್ಯಾಭ್ಯಾಸ ಮಾಡುವುದು ನೋಡಿದರೆ ಎದೆ ಜಲ್ ಎನ್ನುತ್ತದೆ, ಈಗಾಗಲೇ ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತಂದರು ಕೂಡ ಯಾವುದೇ ರೀತಿಯ ಪ್ರಯೋಜನೆ ಆಗಿಲ್ಲ ಮಕ್ಕಳಿಗೆ ಪರ್ಯಾಯವಾಗಿ ವಿದ್ಯಾಭ್ಯಾಸ ಮಾಡಲು ಬೇರೆ ಕಡೆ ಸ್ಥಳ ಅವಕಾಶ ಮಾಡಿಕೊಟ್ಟಿಲ್ಲ, ಆ ಶಾಲೆಯಲ್ಲಿ ಹೆಚ್ಚುವರಿ ಕಟ್ಟಡವು ಸಹ ಇರುವುದಿಲ್ಲ ಪೋಷಕರು ಭಯದಲ್ಲೇ ಮಕ್ಕಳನ್ನು ಶಾಲೆಗೆ ಕಳುಹಿಸುವಂತಾಗಿದೆ.

ಜಿಲ್ಲಾ ಪಂಚಾಯತಿ ಹಾಗೂ ಜಿಲ್ಲಾಡಳಿತ ಯಾದಗಿರಿ ಕಲ್ಯಾಣ ಕರ್ನಾಟಕ 2023–24 ನೇ ಸಾಲಿನ ಕೆ ಕೆ ಆರ್ ಡಿ ಬಿ ಯ ಅಕ್ಷರ ಅವಿಸ್ಕಾರ ಮೈಕ್ರೋಯೋಜನೆಯಡಿಯಲ್ಲಿ ಶಾಲೆಗೆ ಕೊಠಡಿಗಳ ದುರಸ್ತಿ ಹಾಗೂ ಇತರ ಕಾಮಗಾರಿಗಳಿಗೆ ಅನುದಾನ ಬಂದಿರುತ್ತದೆ.


ಅಂದಾಜು ಮೊತ್ತ ಖಅಕ. 1.44 ಲಕ್ಷ ಖಿಖಕ 0.39 ಲಕ್ಷ ಉಇಓ. 1.17 ಲಕ್ಷ ಒಟ್ಟು 3 ಲಕ್ಷ ನಿರ್ಮಾಣಕ್ಕಾಗಿ ಕೆ ಆರ್ ಐ ಡಿ ಎಲ್ ಯಾದಗಿರಿ ತಾಲೂಕ ಗುರುಮಠಕಲ್ ಇವರಿಗೆ ಕಾಮಗಾರಿಯನ್ನು ವಹಿಸಿರುತ್ತಾರೆ, ಆದರೆ ಬಂದಿರುವ ಅನುದಾನ ಕಟ್ಟಡದ ಮಾಡುವುದಕ್ಕೆ ಆಗುವುದಿಲ್ಲ ಎಂದು ಬೇರೆ ಕ್ರೀಡಾ ಸಾಮಗ್ರಿಗಳು ಇನ್ನಿತರ ಕೆಲಸಕ್ಕೆ ಬಳಸಿಕೊಂಡಿದ್ದಾರೆ.

ಆದರೆ ಈಗ ಶಾಲೆಯ ಹೊಸ ಎರಡು ಕೋಠಡಿಗಳ ನಿರ್ಮಾಣಕ್ಕೆ ಅನುದಾನ ಬಂದಿರುತ್ತದೆ ಆದಷ್ಟು ಬೇಗನೆ ಹಳೆಯ ಕಟ್ಟಡವನ್ನು ಬೀಳಿಸಿ ಹೊಸ ಕಟ್ಟಡವನ್ನು ನಿರ್ಮಾಣ ಮಾಡಬೇಕು ಮತ್ತು ಶಿಕ್ಷಣ ಇಲಾಖೆ ನಾಳೆಯಿಂದ ದುರಸ್ತಿ ಇರುವ ಕಟ್ಟಡಗಳಿಗೆ ಬೀಗ ಹಾಕಿ ಗ್ರಾಮದಲ್ಲಿ ಬೇರೆ ಸ್ಥಳದಲ್ಲಿ ಮಕ್ಕಳಿಗೆ ವಿದ್ಯಾಭ್ಯಾಸ ಮಾಡಲು ಅನುಕೂಲ ಮಾಡಬೇಕು ಇಲ್ಲವಾದರೆ ಮಕ್ಕಳಿಗೆ ಅನಾಹುತ ಜರುಗಿದರೆ ಇದಕ್ಕೆ ಶಿಕ್ಷಣ ಇಲಾಖೆ ಹಾಗೂ ಸರ್ಕಾರವೇ ನೇರ ಹೊಣೆಯಾಗುತ್ತದೆ ಎಂದು ಕರ್ನಾಟಕ ರಕ್ಷಣಾ ವೇದಿಕೆ ಗುರುಮಠಕಲ್ ತಾಲೂಕ ಅಧ್ಯಕ್ಷ ಶರಣಬಸಪ್ಪ ಎಲ್ಹೇರಿ ಅವರು ಶಾಲೆಗೆ ಭೇಟಿ ನೀಡಿ ಅಧಿಕಾರಿಗಳ ಮಾತನಾಡಿ ಅನಾಹುತ ಜರುಗುವ ಮುನ್ನ ಮುಂಜಾಗ್ರತೆ ವಹಿಸಲು ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ತಾಲೂಕ ಪದಾಧಿಕಾರಿಗಳಾದ ದೇವಸಿಂಗ್ ಠಾಕೂರ್, ಮೌನೇಶ್ ಮಾಧ್ವಾರ, ತಾಯಪ್ಪ ಚೇಳಿಮೆಲಿ. ರಾಜು ಕಲಾಲ್, ಲಕ್ಷ್ಮಣ್ ಬಾಗಿಲಿ ಉಪಸ್ಥಿತರಿದ್ದರು

# ಅಂತರರಾಷ್ಟ್ರೀಯ ಅಥ್ಲೆಟಿಕ್ಸ್: ಮಮಿತಾಬಾಯಿಗೆ ನಾಲ್ಕು ಪದಕ ಶ್ರೀಲಂಕಾದಲ್ಲಿ ಬೀದರ್ ಹೆಡ್ ಕಾನ್‌ಸ್ಟೆಬಲ್ ಸಾಧನೆ

ಮಲ್ಲಮ್ಮ ನುಡಿ ವಾರ್ತೆ ಬೀದರ. ಜು. 10 :ಇಲ್ಲಿಯ ಜಿಲ್ಲಾ ಕಾರಾಗೃಹದ ಹೆಡ್ ಕಾನ್‌ಸ್ಟೆಬಲ್ ಮಮಿತಾಬಾಯಿ ಕದ್ರೆ ಶ್ರೀಲಂಕಾದಲ್ಲಿ ನಡೆದ ಅಂತರರಾಷ್ಟ್ರೀಯ ಮಟ್ಟದ ವಾರ್ಷಿಕ ಮಾಸ್ಟರ್ಸ್ ಅಥ್ಲೆಟಿ–ಕ್ಸ್ ಚಾಂಪಿಯನ್‌ಶಿಪ್‌ನಲ್ಲಿ ನಾಲ್ಕು ಪದಕಗಳನ್ನು ಜಯಿಸಿ ಭಾರತದ ಕೀರ್ತಿ ಪತಾಕೆ ಹಾರಿಸಿದ್ದಾರೆ.



ಶ್ರೀಲಂಕಾ ಮಾಸ್ಟರ್ಸ್ ಚಾಂಪಿಯನ್ಸ್ ಸಂಘಟನೆ ವತಿಯಿಂದ ಕೊಲಂಬೊದಲ್ಲಿ ಈಚೆಗೆ ಆಯೋಜಿಸಿದ್ದ ಕ್ರೀಡಾಕೂಟದಲ್ಲಿ 35 ವರ್ಷ ಮೇಲ್ಪಟ್ಟವರ ವೈಯಕ್ತಿಕ ವಿಭಾಗದ 2 ಸಾವಿರ ಮೀಟರ್ ಸ್ಟೀಪಲ್ ಚೇಸ್ ಓಟದಲ್ಲಿ ಚಿನ್ನದ ಪದಕ, 5 ಸಾವಿರ ಮೀಟರ್ ಓಟದಲ್ಲಿ ಬೆಳ್ಳಿ, 800 ಮೀಟರ್ ಓಟ ಹಾಗೂ 100ಘಿ400 ಮೀಟರ್ ರಿಲೆನಲ್ಲಿ ಕಂಚಿನ ಪದಕ ಗೆದ್ದುಕೊಂಡಿದ್ದಾರೆ.

ಕ್ರೀಡಾಕೂಟದಲ್ಲಿ ಭಾರತ, ಶ್ರೀಲಂಕಾ, ಬಾಂಗ್ಲಾದೇಶ, ನೇಪಾಳ್ ಸೇರಿ ವಿವಿಧ ದೇಶಗಳ ಕ್ರೀಡಾಪಟುಗಳು ಭಾಗವಹಿಸಿದ್ದರು.

ಮಮಿತಾಬಾಯಿ ವೃತ್ತಿ ಜತೆಗೆ ಕ್ರೀಡೆಯಲ್ಲೂ ಆಸಕ್ತಿ ಬೆಳೆಸಿಕೊಂಡಿದ್ದಾರೆ.

ವಿವಿಧ ಕ್ರೀಡಾಕೂಟಗಳಲ್ಲಿ ಸಾಧನೆಗೈದುಗಮನಸೆಳೆದಿದ್ದಾರೆ.

ಅಂತರರಾಷ್ಟ್ರೀಯ ಮಟ್ಟದ ಕ್ರೀಡಾಕೂಟದಲ್ಲಿ ಮಮಿತಾಬಾಯಿ ಅವರ ಸಾಧನೆಗೆ

ಅನೇಕರು ಸಂತಸ ವ್ಯಕ್ತಪಡಿಸಿದ್ದಾರೆ.

# ಸರ್ವರಿಗೂ ಸಮಪಾಲು, ಸಮಬಾಳು ದೊರಕಿಸುವ ಸದಾಶಯ ಸಹಕಾರಿ ಚಳುವಳಿಯದ್ದು: ನಂಜನಗೌಡ

ಮಲ್ಲಮ್ಮ ನುಡಿ ವಾರ್ತೆ ಬೀದರ. ಜು. 10 : 121 ವರ್ಷಗಳ ಭವ್ಯ ಇತಿಹಾಸವುಳ್ಳ ಭಾರತದ ಸಹಕಾರ ಚಳುವಳ ವ್ಯಾಪ್ತಿಯಲ್ಲಿ, ಗಾತ್ರದಲ್ಲಿ ವಿಶ್ವ ಮಾನ್ಯತೆ ಪಡೆದಿದೆ. 1904ರಲ್ಲಿ ಆರಂಭವಾದ ಸಹಕಾರ ಚಳುವಳಿಯು ಸರ್ವರಿಗೂ ಸಮಪಾಲು ಸರ್ವರಿಗೂ ಸಮಬಾಳು ದೊರಕಿಸಿಕೊಡಬೇಕೆಂಬ ಮಹತ್ತರ ಆಶಯ ಇರಸಿಕೊಂಡು ಹಲವಾರು ಕ್ಷೇತ್ರಗಳಲ್ಲಿ ಪ್ರಗತಿ ಸಾದಿಸಿದೆ ಎಂದು ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿಯಮಿತದ ರಾಜ್ಯಾಧ್ಯಕ್ಷರಾದ ಜಿ.ನಂಜನಗೌಡ ಹೇಳಿದರು.




ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ಸಹಕಾರ ಚಳುವಳಿಯು ಭಾರತ ದೇಶದ ಆರ್ಥಿಕತೆಯ ಸುಭದ್ರತೆಗೆ ತನ್ನದೇ ಆದ ಛಾಪನ್ನು ಹೊಂದಿರುತ್ತದೆ. ಬಡತನ ನಿವಾರಣೆ, ಉದ್ಯೋಗ ಸೃಷ್ಟಿ, ಸಮಾಜಿಕ ನ್ಯಾಯದಂತಹ ಕಾರ್ಯಕ್ರಮಗಳು ಚಳುವಳಿಯ ಪ್ರಜಾಪ್ರಭುತ್ವದ ತಳಹದಿಯ ಮೂಲಕ ಯಶಸ್ವಿಯಾಗಿ ಕಾರ್ಯಗತವಾಗುತ್ತಿವೆ. ಕೃಷಿ ಕ್ರಾಂತಿ, ಕ್ಷೀರಕ್ರಾಂತಿ, ರಸಗೊಬ್ಬರ ಕ್ಷೇತ್ರದಲ್ಲಿ ಸಹಕಾರ ಚಳುವಳಿ ದೊಡ್ಡ ಕೊಡುಗೆಯನ್ನೇ ನೀಡಿದೆ ಎಂದರು.

ಜವಾಬ್ದಾರಿಯುತ ಸದಸ್ಯ, ಸ್ವಯಂ ಆಡಳಿತ ನಿರ್ವಹಣೆ, ಪ್ರಗತಿಪರ ಕಾರ್ಯಕ್ರಮಗಳು ಸೌಹಾರ್ದ ಸಹಕಾರಿಗಳ ಯಶಸ್ಸಿನ ತಳಪದಿ, "ಸ್ವಾ–ಯತ್ತತೆ. ಸ್ವಯಂ ಆಡಳಿತ ಹಾಗೂ ಸ್ವಯಂ ನಿಯಂತ್ರಣ" ಸೌಹಾರ್ದ ಸಹಕಾರಿಗಳ ಧೈಯವನ್ನಾಗಿಸಿಕೊಂಡು ಜನೆವರಿ 12001ರಲ್ಲಿ ಸೌಹಾರ್ದ ಸಹಕಾರಿ ಕಾಯ್ದೆ ಜಾರಿಗೆ ಬಂದ ನಂತರ 2002ರಲ್ಲಿ ಸಂಯುಕ್ತ ಸಹಕಾರಿ ನೋಂದಣಿಯಾಗಿ ಕಾರ್ಯನಿರ್ವಹಿಸುತ್ತಿದೆ. 01 ಜನವರಿ 2025ಕ್ಕೆ ಸೌಹಾರ್ದ ಸಹಕಾರಿ ಕಾಯ್ದೆ ಜಾರಿಗೆ ಬಂದು 25 ವರ್ಷಗಳಾಗಿದೆ. ಇದು ರಜತ ಮಹೋತ್ಸವ ವರ್ಷವಾಗಿದೆ. ಈ ಅವಧಿಯಲ್ಲಿ ಸರಕಾರದ ಸಾರ್ವಜನಿಕರ ಹಾಗೂ ಸಹಕಾರಿಗಳ ಮನ್ನಣೆ ಗಳಿಸಿ ಉತ್ತಮ ಪ್ರಗತಿ ಸಾಧಿಸುತ್ತ ಮುನ್ನಡೆಯುತ್ತಿದೆ ಎಂದರು.

ಕರ್ನಾಟಕ ರಾಜ್ಯದಲ್ಲಿನ ಸೌಹಾರ್ದ ಸಹಕಾರ ಕ್ಷೇತ್ರದ ನೇತೃತ್ವ ವಹಿಸಿ.ಮಾತೃ ಸಂಸ್ಥೆಯಾಗಿ, ರಾಷ್ಟದ ಸಹಕಾರಿ ಕ್ಷೇತ್ರದ ಏಕೈಕ ಶಾಸನ ಬದ್ಧ ಸಂಸ್ಥೆಯಾಗಿ, ಕಾನೂನು ಬದ್ದವಾಗಿ ರಚನೆಯಾಗಿ ಕಾರ್ಯನಿರ್ವಹಿಸುತ್ತಿರುವ ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿಯು, ಶಾಸನ ಬದ್ಧ ಕಾರ್ಯಗಳ ಜೊತೆಗೆ ತರಬೇತಿ. ಶಿಕ್ಷಣ, ಪ್ರಚಾರ ಚಟುವಟಿಕೆಗಳನ್ನು ಕೂಡ ನಡೆಸುತ್ತ ಬಂದಿದೆ ಎಂದರು.

ಪ್ರತಿ ವರ್ಷದಂತೆ ಸಂಯುಕ್ತ ಸಹಕಾರಿಯ ಸಾಮಾನ್ಯ ಸಭೆ ಜರುಗಿಸುವ ಮೊದಲು ರಾಜ್ಯದಾದ್ಯಂತ ಪ್ರವಾಸ ಮಾಡಿ ಸಹಕಾರ ಕ್ಷೇತ್ರದ ಜ್ವಲಂತ ವಿಷಯಗಳನ್ನು ಚರ್ಚಿಸುವುದು ಹಾಗೂ ಸಹಕಾರ ಕ್ಷೇತ್ರದ ಅಭಿವೃದ್ಧಿ ದೃಷ್ಟಿಯಿಂದ ಸಂಪರ್ಕ ಸಭೆಗಳನ್ನು ಆಯೋಜಿಸಲು ಸಂಯುಕ್ತ ಸಹಕಾರಿಯು ನಿರ್ಧರಿಸಿದೆ. ಅದರಂತೆ ಗುರುವಾರ ಬೀದರ್‌ನಲ್ಲಿ ಸಭೆ ಆಯೋಜಿಸಲಾಗಿತ್ತೆಂದು ತಿಳಿಸಿದರು.

ಪ್ರಸ್ತುತ ರಾಜ್ಯದಲ್ಲಿ ಒಟ್ಟು 6514 ಸಹಕಾರಿಗಳ ಸಂಖ್ಯೆ ಹೊಂದಿದ್ದು, 72 ಲಕ್ಷ ಸದಸ್ಯರು ಸದಸ್ಯತ್ವ ಹೊಂದಿದ್ದಾರೆ.16.30 ಕೋಟಿ ಶೇರು ಬಂಡವಾಳ ಹೊಂದಿದ್ದು, 44.793 ಕೋಟಿ ಠೇವಣಿಗಳು ಹೊಂದಿದ್ದು,35,747 ಕೋಟಿ ಸಾಲ ನೀಡಲಾಗಿದೆ. 51,064 ಕೋಟಿ ದುಡಿಯುವ ಬಂಡವಾಳ ಹೊಂದಿದ್ದು, 735 ಕೋಟಿ ಈ ವರ್ಷ ನಿವ್ವಳ ಲಾಭ ಹೊಂದಿದೆ. 3,992 ಕೋಟಿ ಕಾಯ್ದಿರಿಸಿದ ನಿಧಿಗಳು ಇವೆ. ಒಟ್ಟು 75 ಸಾವಿರ ಉದ್ಯೋಗಿಗಳು ಕಾರ್ಯನಿರ್ವಹಿಸುತ್ತಿರುವ ಇದರಲ್ಲಿ 1,710 ಇಸ್ಟಾಂಪಿಂಗ್ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ ಎಂದರು.

ನಗರ ಹಾಗೂ ಪಟ್ಟಣ ಪ್ರದೇಶದಲ್ಲಿ ಶೇಕಡಾ 80 ಪ್ರತಿಶತದಷ್ಟು ಸೌಹಾರ್ದ ಸಹಕಾರಿಗಳು ಕಾರ್ಯನಿರ್ವಹಿಸುತ್ತಿದ್ದು, ಗ್ರಾಮೀಣ ಭಾಗದಲ್ಲಿ ಇನ್ನು ಬೆಳೆಯಬೇಕಾದ ಅನಿವಾರ್ಯತೆ ಇದೆ. ಇದು ಸಾಧ್ಯವಾದಾಗ ಮಾತ್ರ ರಾಮ ರಾಜ್ಯದ ಕಲ್ಪನೆ ಸಾಕಾರಗೊಳ್ಳಲಿದೆ ಎಂದು ನಂಜನಗೌಡ ಹೇಳಿದರು.

ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿಯಮಿತದ ನಿರ್ದೇಶಕ ಗುರುನಾಥ ಜ್ಯಾಂತಿಕರ್ ಮಾತನಾಡಿ, ಬೀದರ ಜಿಲ್ಲೆಯಲ್ಲಿ ಒಟ್ಟು ಸೌಹಾರ್ದ ಸಹಕಾರಿಗಳು 169, ಸಹಕಾರಿಗಳಲ್ಲಿ ಅಂ–ದಾಜು 43.870 ಸದಸ್ಯರು, 270.42 ಕೋಟಿ ದುಡಿಯುವ ಬಂಡವಾಳ, 10.98 ಕೋಟ ಶೇರು ಬಂಡವಾಳ, 244.32 ಕೋಟಿ ಠೇವಣಿಗಳು, 251.39 ಕೋಟ ನೀಡಿದ ಸಾಲಗಳು, 14.26 ಕೋಟಿ ನಿಧಿಗಳು, 3.70 ಕೋಟಿ ಲಾಭವನ್ನು ಹೊಂದಿರುತ್ತದೆ. ಅದೇ ರೀತಿ ಜಿಲ್ಲೆಯಲ್ಲಿ ಪ್ರಸ್ತುತ 10 ಇ–ಸ್ಟಾಂಪಿಂಗ್ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ ಎಂದು ತಿಳಿಸಿದರು.

ಬೀದರ್ ಜಿಲ್ಲಾ ಒಕ್ಕೂಟದ ನಿರ್ದೇಕರಾದ ಸಂಜಯ ಖ್ಯಾಸಾ, ಶಿವಬಸಪ್ಪ ಚನ್ನಮಲ್ಲೆ, ವಿಭಾಗೀಯ ಅಧಿಕಾರಿ ಸೂರ್ಯಕಾಂತ ರ‍್ಯಾಕಲೆ, ಸಹಕಾರಿ ಸದಸ್ಯ ಮಾರೂತಿ

# ಗುರು –ಶಿಷ್ಯ ಪರಂಪರೆ ಭಾರತೀಯ ಸಂಸ್ಕೃತಿಯಾಗಿದೆ:ಅಭಿನವ ಶ್ರೀ



(ವರದಿ.ಡಿ.ಕೆ.ಪ್ರಹ್ಲಾದಕುಮಾರ.)

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: –ಭಾರತೀಯ ಸನಾತನಪರಂಪರೆಯಲ್ಲಿಗುರುವಿಗೆ ಅತ್ಯಂತ ಶ್ರೇಷ್ಠ ಸ್ಥಾನಮಾನವಿದೆ ಮನುಷ್ಯನ ಜೀವನದಲ್ಲಿ ಧರ್ಮ ದೇವರು ಮತ್ತು ಗುರುವನ್ನು ಎಂದಿಗೂ ಮರೆಯಬಾರದು ಎಂದು ಗವಿಮಠದ ಪೂಜ್ಯ ಶ್ರೀ ಡಾ. ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು ಅಭಿಪ್ರಾಯ ಪಟ್ಟರು. ಇಲ್ಲಿನ ತಿಪುರಾಂತಿನ ಶ್ರೀ ಘನಲಿಂಗ ರುದ್ರಮುನಿಶಿವಾಚಾರ್ಯಸಂಸ್ಥಾನ ಗವಿಮಠದಲ್ಲಿ ಶ್ರೀ ಘನಲಿಂಗ ರುದ್ರಮುನಿ ಶಿವಾಚಾರ್ಯ ಟ್ರಸ್ಟ್ ಹಾಗೂ ಬಸವಕಲ್ಯಾಣ ನಾಡು ಗ್ರಾಮಿಣ ಜನಪದ ಕಲಾ ಸಂಘ ಇವರ ಸಂಯುಕ್ತ ಆಶ್ರಯದಲ್ಲಿ ಗುರುಪೂರ್ಣಿಮೆ ನಿಮಿತ್ಯ ಪೂಜ್ಯಶ್ರೀ ಷ ಬ್ರ. ಡಾ ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರಿಗೆ ಹಮ್ಮಿಕೊಂಡ ಗುರುವಂದನಾ ಸಮಾರಂಭದಲ್ಲಿ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದ ಅವರು ಗುರುಗಳು ತಮ್ಮ ಭಕ್ತರಿಗೆ ಆಧ್ಯಾತ್ಮದ ಭೋದಾಮೃತವನ್ನು ನೀಡುತ್ತಿರುತ್ತಾರೆ. ಗುರುಗಳ ಋಣವನ್ನು ತೀರಿಸುವುದು ಅಸಾಧ್ಯ ಆದರೂ ಆ ಗುರುಗಳ ಬಗ್ಗೆ ಕೃತಜ್ಞತೆಯನ್ನು ವ್ಯಕ್ತಪಡಿಸುವುದೇ ಗುರುಪೂರ್ಣಿಮೆ ಆಚರಿಸುವುದರ ಹಿಂದಿನ ಉದ್ದೇಶವಾಗಿದೆ ಎಂದು ತಿಳಿಸಿದ ಮಡಕೆಯ ಮಾಡುವಡೆ ಮಣ್ಣೆ ಮೊದಲು ತೊಡಕೆಯ ಮಾಡುವಡೆ ಹೊನ್ನೆ ಮೊದಲು ಶಿವಪಥವನರಿವಡೆ ಗುರುಪಥವೆ ಮೊದಲು ಎನ್ನುವ ಹಾಗೆ ಗುರುವಿನ ನಿಜವಾದ ಶಿಷ್ಯನಾದರೆ ಮಾತ್ರ ಮೋಕ್ಷವನ್ನು ಪಡೆಯಬಹುದು ಒಬ್ಬ ವ್ಯಕ್ತಿಯು ಅನೇಕ ಶಾಸ್ತ್ರಗಳನ್ನು ಪುಸ್ತಕಗಳನ್ನು ಓದುತ್ತಿದ್ದರು ಸಹ ಆ ವ್ಯಕ್ತಿಯು ತನ್ನ ಗುರುಗಳಿಗೆ ತನ್ನನ್ನು ತಾನೇ ಒಪ್ಪಿಸದಿದ್ದರೆ ಅದು ಯಾವುದೇ ಪ್ರಯೋಜನವಿಲ್ಲ. ಒಬ್ಬ ವ್ಯಕ್ತಿಯು ಮೋಕ್ಷ,ಸುಖ,ಶಾಂತಿ,ಸಮೃದ್ಧಿಯನ್ನು ಪಡೆಯಲು ಗುರು ಭಕ್ತಿಯು ಸಹಾಯ ಮಾಡುತ್ತದೆ ಎಂದು ಹೇಳಿದರು. ಪತ್ರಕರ್ತ ಸಂಘದ ಮಾಜಿ ಅಧ್ಯಕ್ಷರಾದ ವೀರಶೆಟ್ಟಿ ಮಲಶೆಟ್ಟಿ ಮಾತನಾಡಿ ಒಬ್ಬ ಗುರುವಿನ ಕೃಪೆಯಿಂದ ಅವನ ಅನುಯಾಯಿ ಆಧ್ಯಾತ್ಮಿಕ ಜಾಗೃತಿ ಎಂಬುದಾಗಿದೆ ಎಂದು ತಿಳಿಸಿ ದೀಕ್ಷೆ ಒಬ್ಬ ಗುರುವಿನ ದೈವಿಕ ಶಕ್ತಿಗಳನ್ನು ಅವನ ಮೇಲೆ ಅನುಗ್ರಹಿಸುವ ಒಂದು ಪದ್ಧತಿ ಎಂಬುದಾಗಿ ಹೇಳಲಾಗಿದೆ ಆ ದೀಕ್ಷೆಯ ಮೂಲಕ ದೈವೀಕತೆಯ ಮಾರ್ಗದಲ್ಲಿ ನಿರಂತರವಾಗಿ ಪ್ರಗತಿಯನ್ನು ಶಿಷ್ಯರು ಹೊಂದುತ್ತಾರೆ ಅದಕ್ಕೆ ಶರಣರು ಹರ ಮುನಿದರೆ ಗುರು ಕಾಯುವನು ಗುರು ಮುನಿದರೆ ಹರ ಕಾಯಲಾರ ಎಂದು ತಿಳಿಸಿದರು. ಮುಖ್ಯ ಅತಿಥಿಗಳಾಗಿ ನಿವೃತ್ತ ಜಿಲ್ಲಾ ನ್ಯಾಯಾಧೀಶರಾದ ಸುಭಾಷ್ ಚಂದ್ರ ನಾಗರಾಳೆ ಮಾತನಾಡಿ ಗುರು ಸಾಧುವಿನ ಗುಣಗಳನ್ನು ಹೊಂದಿರುವ ಗೌರವಾನ್ವಿತರು ಅವರ ಅನುಯಾಯಿಗಳ ಮನಸ್ಸನ್ನು ಅರಳಿಸುವ ಶಕ್ತಿ ಗುರುವಿನಲ್ಲಿರುತ್ತದೆ ಎಂದು ತಿಳಿಸಿದರು. ನಗರ ಸಭೆಯ ಪೌರಾಯುಕ್ತರಾದ ರಾಜು ಡಿ ಬಣಕಾರ ಅವರು ಮಾತನಾಡಿ ಗುರು ಅಂಧಕಾರ ಕಳೆಯುವಂತಹ ವ್ಯಕ್ತಿಯಲ್ಲ ಅವರು ಸಮಾಜಕ್ಕೆ ಒಂದು ಶಕ್ತಿಯಾಗಿದ್ದಾರೆ ಎಂದರು. ತಹಶೀಲ್ದಾರ ದತ್ತಾತ್ರೇ ಗಾದಾ ಮಾತನಾಡಿ ಶರಣರ ಭೂಮಿ ಗವಿಮಠದಲ್ಲಿ ಗುರು ಸಾನಿಧ್ಯದಲ್ಲಿ ಗುರುಪೂರ್ಣಿಮಾ ಮಾಡುವಂತದ್ದು ಒಂದು ವಿಶೇಷ ಎಂದು ಬಣ್ಣಿಸಿದರು. ಸಿದ್ದು ಊಳ್ಳೆ ದಂಪತಿ ಅವರು ಗುರುಗಳ ಪಾದಪೂಜೆ ನೆರವೇರಿಸಿದರು. ವಿಧಿವತ್ತಾಗಿ ಶ್ರೀ ವೇ.ಪಂಚಯ್ಯಾ ಸ್ವಾಮಿ ಗೋರ್ಟಾ ಅವರು ಪೂಜೆ ನಡೆಸಿಕೊಟ್ಟರು.ಕಲ್ಯಾಣ ನಾಡು ಗ್ರಾಮೀಣ ಜನಪದ ಕಲಾ ಸಂಘದ ವತಿಯಿಂದ ವಿವಿಧ ರೀತಿಯ ಸಂಗೀತ ಸೇವೆ ಸಲ್ಲಿಸಿ,

ಕೊಲಾಟ, ಗುರುವಿನ ತತ್ವಪದ,ಭಜನೆ ಜರುಗಿದವು ಈ ಸಂದರ್ಭದಲ್ಲಿ ಬಸವಂತಪ್ಪ ಲವಾರೆ,ದಯಾನಂದ ಶೀಲವಂತ, ಮಲ್ಲಿಕಾರ್ಜುನ್ ಅಲಗುಡೆ, ಸೂರ್ಯಕಾಂತ ಬಿರಾದಾರ, ದಿಲೀಪ ದೇಸಾಯಿ, ಶರಣಪ್ಪ ಜಮಾದಾರ, ವಿಠ್ಠಲ್ ದೋಮೆ ಎಕಲೂರ, ಬಸವರಾಜ ಕಣಜೆ ಮುಡಬಿ,ರಾಜಪ್ಪಾಹಲಿಂಗೆಬೇಲೂರ, ಶಾಮಸುಂದರಗುಂಡೂರೆ,ಸುಭಾಷ ಮಂತಾಳೆ,ಸಿದ್ರಾಮಪ್ಪಬಿರಾದಾರ. ವೀರಶೆಟ್ಟಿಪಾಟೀಲ್.ಜಯರಾಜ್ ಕಮ್ಮಾ ಪ್ರೊ . ಸೂರ್ಯಕಾಂತ ಶೀಲವಂತ,ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ವಿಠ್ಠಲ ರೆಡ್ಡಿ ನಿರೂಪಿಸಿ ವಂದಿಸಿದರು.



ಬಸವಕಲ್ಯಾಣ :– ಇಲ್ಲಿನ ತಿಪುರಾಂತಿನ ಶ್ರೀ ಘನಲಿಂಗ ರುದ್ರಮುನಿ ಶಿವಾಚಾರ್ಯ ಸಂಸ್ಥಾನ ಗವಿಮಠದಲ್ಲಿ ಶ್ರೀ ಘನಲಿಂಗ ರುದ್ರಮುನಿ ಶಿವಾಚಾರ್ಯ ಟ್ರಸ್ಟ್ ಹಾಗೂ ಬಸವಕಲ್ಯಾಣ ನಾಡು ಗ್ರಾಮಿಣ ಜನಪದ ಕಲಾ ಸಂಘ ಇವರ ಸಂಯುಕ್ತ ಆಶ್ರಯದಲ್ಲಿ ಗುರು ಪೂರ್ಣಿಮೆ ನಿಮಿತ್ತ ಪೂಜ್ಯಶ್ರೀ ಷ ಬ್ರ. ಡಾ. ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರಿಗೆ ಹಮ್ಮಿಕೊಂಡ ಗುರುವಂದನಾ ಸಮಾರಂಭದಲ್ಲಿ ಹಣಮಂತವಾಡಿ (ಆರ್) ಶ್ರೀ ಮಹಾಲಕ್ಷ್ಮೀ ಮಹಿಳಾ ಭಜನೆ ಮತ್ತು ಸಾಂಸ್ಕೃತಿಕ ಸಂಘದ ಅಧ್ಯಕ್ಷರು ಹಾಗೂ ಸದಸ್ಯರಿಗೆ ಪೂಜ್ಯ ಶ್ರೀ ಡಾ. ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು ಸತ್ಕರಿಸಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಸಂಗೀತ ಕಲಾವಿದರಾದ ಸೂರ್ಯಕಾಂತ ಬಿರಾದಾರ. ಪತ್ರಕರ್ತರಾದ ವೀರಶೆಟ್ಟಿ ಮಲಶೆಟ್ಟಿ. ದೀಲಿಪ ಕುಮಾರ್ ದೇಸಾಯಿ ಗದಲೇಗಾಂವ. ಶರಣಪ್ಪಾ ಜಮಾದರ. ಸುಭಾಷ ಮಂತಾಳ. ಜಯರಾಜ್ ಕಮ್ಮಾ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ಕಟ್ಟಡ ಕಾರ್ಮಿಕರಿಗೆ ಕಿಟ್ ಬ್ಯಾಗ್ ವಿತರಣೆ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟೆ: ತಾಲೂಕಿನ ವಿವಿಧ ಗ್ರಾಮಗಳಲ್ಲಿ ಕಟ್ಟಡ ಕಾರ್ಮಿಕರಿಗೆ ಗೌಂಡಿ ಕೆಲಸ ಮಾಡುವ ವಿವಿಧ ಸಾಮಗ್ರಿಗಳ ವಿರುವ ಕಿಟ್ ಬ್ಯಾಗ ವಿತರಣೆಯನ್ನು ತಾಳಿಕೋಟೆ ಕಾರ್ಮಿಕ ಇಲಾಖೆ ಸಿಬ್ಬಂದಿ ಡಿ.ಬಿ. ಗುಳಬಾಳ ಇವರಿಂದ ಮಾಡಲಾಯಿತು. ಈ ಸಂದರ್ಭದಲ್ಲಿ ಅಖಿಲ ಕರ್ನಾಟಕ ಭೋವಿ ವಡ್ಡರ ಯುವ ವೇದಿಕೆ ರಾಜ್ಯ ಕಾರ್ಯದರ್ಶಿ ಹಣಮಂತ ಭೀ ಬೆಳಗಲ್ಲ ಬಳಗಾನೂರ ಗ್ರಾಮದ ಗೌಂಡಿ ಕಾರ್ಮಿಕ ರಮೇಶ ಗೌಂಡಿ ನಾಗೇಶ ಗೌಂಡಿ ನಾಗರಾಜ ಗೌಂಡಿ ಲಕ್ಷ್ಮಣ ಗೌಂಡಿ ಉಪಸ್ಥರಿದ್ದರು.

# ಹಡಪದ ಅಪ್ಪಣ್ಣನವರ ಆದರ್ಶ ಸ್ಫೂರ್ತಿದಾಯಕ:– ಬಗ್ದಲಕ್ಕರ್



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:–ಸಮಾಜದ ಏಳಿಗೆಗೆ ಶ್ರಮಿಸಿದ ಹಡಪದ ಅಪ್ಪಣ್ಣನವರ ಆದರ್ಶಗಳು ಪ್ರತಿಯೊಬ್ಬರಿಗೂ ಸ್ಫೂರ್ತಿದಾಯಕ ಎಂದು ಪುರಸಭೆ ಅಧ್ಯಕ್ಷ ದಿಲೀಪಕುಮಾರ್ ಬಗ್ದಲಕ್ಕರ್ ಪಟ್ಟಣದ ಪುರಸಭೆಯಲ್ಲಿ ಗುರುವಾರ ಹಡಪದ ಅಪ್ಪಣ್ಣನವರ 891ನೇ ಜಯಂತಿ ಕಾರ್ಯಕ್ರಮದಲ್ಲಿ ಅಪ್ಪಣ್ಣನವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡುತ್ತ ತಿಳಿಸಿದರು. ಶಿವಶರಣ ಹಡಪದ ಅಪ್ಪಣ್ಣನವರು 12ನೇ ಶತಮಾನದ ವಚನ ಚಳವಳಿ ಹಾಗೂ ಸಾಮಾಜಿಕ ಕ್ರಾಂತಿಯ ಹರಿಕಾರರಾಗಿದ್ದು,ಬಸವಣ್ಣನವರ ಆಪ್ತಸಹಾಯಕರಾಗಿದ್ದರು.ಅನುಭವ ಮಂಟಪದ ಕಾರ್ಯದರ್ಶಿಯಾಗಿ ಉತ್ತಮ ಸೇವೆ ಸಲ್ಲಿಸಿದ್ದಾರೆ.

ಜತೆಗೆ 251 ವಚನಗಳನ್ನು ರಚಿಸುವುದರ ಮೂಲಕ ಸಮಾಜಕ್ಕೆ ಕೊಡುಗೆ ನೀಡಿದ್ದಾರೆ. ಶರಣರಿಗಿರಬೇಕಾದ ಕಾಯಕ ನಿಷ್ಠೆ,ಭಕ್ತಿ,ಆಚಾರ–ವಿಚಾರಗಳನ್ನು ವಚನಗಳಲ್ಲಿ ಸಾಹಿತ್ಯೀಕರಿಸಿದ್ದು, ಸಮಾಜದಲ್ಲಿದ್ದ ಮೌಢ್ಯತೆ ಹೊಗಲಾಡಿಸಲು ಪಣತೊಟ್ಟಿದ್ದರು. ಆದ್ದರಿಂದ ಪ್ರತಿಯೊಬ್ಬರೂ ಇವರ ತತ್ವ,ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದರ ಮೂಲಕ ಕಾಯಕನಿಷ್ಠೆಮೆರೆಯಬೇಕು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಉಪಾಧ್ಯಕ್ಷ ಮಹ್ಮದನಸೀರ ಖಾನ್, ಪುರಸಭೆ ಸದಸ್ಯ ರಹೇಮಾನ ಪಾಶ, ಪ್ರಮುಖರಾದ ಶರಣು ಗಡಮಿ ಪುರಸಭೆ ಸಿಬ್ಬಂದಿಗಳಾದ ವಿಜಯಕುಮಾರ, ಚಿದಾನಂದ ಪತ್ರಿ,ಖಾಜಾಮಿಯಾ ರವಿಕುಮಾರ ಸ್ವಾಮಿ, ಕವಿತಾ , ಸರೋಜನಿ, ಆನಂದ, ರಾಜಕುಮಾರ, ಎಂ.ಡಿ. ತಾಹೇರ ಆನಂದ, ನಾಥನಿಯೇಲ್, ಸಚಿನ, ಅಶ್ವಿನಿ, ಮಂಜುಳಾ, ಇಲಾಹಿ, ರಾಜೇಶ ತೇಲಂಗ್, ರವಿದಾಸ ಭಯ್ಯಾ, ಭೀಮಶಾ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಬಕ್ಕಪ್ಪ ಅವರ ಹುಟ್ಟು ಹಬ್ಬ ಅಂಗವಾಗಿ ಸರ್ಕಾರಿ ಶಾಲಾ ಮಕ್ಕಳಿಗೆ ನೋಟ್ ಬುಕ್ ವಿತರಣೆ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:– ಹುಟ್ಟು ಹಬ್ಬಗಳನ್ನು ಅದ್ದೂರಿಯಾಗಿಯೇ ಆಚರಿಸಿಕೊಳ್ಳುವವರೆ ಜಾಸ್ತಿಯಾಗಿರುವಾಗ ಇಲ್ಲೊಬ್ಬ ಸಮಾಜ ಸೇವಕ ಬಕ್ಕಪ್ಪ ಮುಸ್ತರಿ ಅವರು 30ನೇ ವರ್ಷದ ಹುಟ್ಟು ಹಬ್ಬವನ್ನು ತಾಲೂಕಿನ ಸರ್ಕಾರಿ ಪ್ರಾಥಮಿಕ ಶಾಲೆ ಇಂದಿರಾನಗರ ಮತ್ತು ಶ್ರೀ ಮಾಣಿಕ ಪ್ರಭು ಅಂಧ ಮಕ್ಕಳ ವಸತಿಯುತ ಪಾಠ ಶಾಲೆ ಮಾಣಿಕನಗರಿನ ನೂರಾರು ವಿದ್ಯಾರ್ಥಿಗಳೊಂದಿಗೆ ಬೆರೆತು ಅವರಿಗೆ ನೋಟ್ ಬುಕ್, ಪೆನ್, ಹಾಗೂ ಸಿಹಿ ನೀಡುವ ಮೂಲಕ ಮಾದರಿ ಹುಟ್ಟು ಹಬ್ಬವನ್ನು ಆಚರಿಸಿಕೊಂಡರು. ಈ ಸಂದರ್ಭದಲ್ಲಿ ಇಂದಿರಾನಗರ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಮುಖ್ಯ ಶಿಕ್ಷಕ ರವಿ, ಮಲ್ಲಿಕಾರ್ಜುನ ಮಹಿಂದ್ರಕ್ಕರ್, ಅನೀಲ ದೊಡ್ಡಿ, ಆಕಾಶ, ಶರಣಬಸಪ್ಪ, ಪ್ರತೀಕ್, ನಾಗರಾಜ, ದಿನಕರ್, ರಾಜಶೇಖರ, ಶ್ರೀಮಂತ, ದತ್ತು, ಅಮರ್, ಶ್ರೀನಿವಾಸ ಸೇರಿದಂತೆ ಶಾಲೆಯ ಶಿಕ್ಷಕರು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಇಓ ನಾಯಕ ಅವರ ಹುಟ್ಟು ಹಬ್ಬಕ್ಕೆ ವಿಠಲ ಅವರಿಂದ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್:–ತಾಲೂಕಿನ ಶೇಡೋಳ ಗ್ರಾಮ್ ಪಂಚಾಯತ್ ಅಧ್ಯಕ್ಷ ವಿಠ್ಠಲ್ ಡೋಕರೆ ಅವರು ತಾಲೂಕ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ದೀಪಿಕಾ ನಾಯಕ ಅವರಿಗೆ ಹುಟ್ಟು ಹಬ್ಬದ ಅಂಗವಾಗಿ ಹೂಗುಚ್ಛ ನೀಡಿ ಶುಭ ಕೋರಿದರು.

## ಕಾನೂನು ಪದವೀಧರರಿಂದ ಶಿಷ್ಯ ವೇತನಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 10– ಇಲ್ಲಿನ ಸಮಾಜ ಕಲ್ಯಾಣ ಇಲಾಖೆ ವತಿಯಿಂದ 2024–25 ನೇ ಸಾಲಿನ ಪರಿಶಿಷ್ಟ ಜಾತಿಯ ಕಾನೂನು ಪದವೀಧರರನ್ನು ವೃತ್ತಿ ತರಬೇತಿಗೆ ಮಾಸಿಕ ಶಿಷ್ಯ ವೇತನಕ್ಕೆ ಆಯ್ಕೆ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಕಾನೂನು ಪದವೀಧರರಿಗೆ ಮಾಸಿಕ ಶಿಷ್ಯ ವೇತನಕ್ಕೆ ಅರ್ಜಿ ಸಲ್ಲಿಸಲು ವರ್ಷದ ಎಲ್ಲಾ ದಿನಗಳು (365 ದಿನಗಳು) ಅವಕಾಶ ಕಲ್ಪಿಸಲು ನಿಯಮಾನುಸಾರ ಅಗತ್ಯ ಕ್ರಮ ಕೈಗೊಳ್ಳಲಾಗಿದೆ. ಜುಲೈ 01ರಿಂದಲೇ ವರ್ಷದ ಎಲ್ಲಾ ದಿನಗಳು (365) ಆನ್‌ಲೈನ್ ಮೂಲಕ ಇಲಾಖೆಯ ವೆಬ್‌ಸೈಟ್ ವಿಳಾಸ: www.sw.kar.nic.in ನಲ್ಲಿ ಸಲ್ಲಿಸಬಹುದಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೀವ ಉಳಿಸಲು ರಕ್ತದಾನ ಮಾಡಿ:ಹಡಪದ



ಮಲ್ಲಮ್ಮ ನುಡಿ ವಾರ್ತೆ

ಬೀದರ್ :– ಜೀವ ಉಳಿಸಲು ಎಲ್ಲರೂ ರಕ್ತದಾನ ಮಾಡಬೇಕು ಎಂದು ಚಿಟಗುಪ್ಪ ತಾಲೂಕಿನ ಹಡಪದಸಮಾಜದಕಾರ್ಯದರ್ಶಿ ರಾಜಕುಮಾರ ಆರ್. ಹಡಪದ ಹೇಳಿದರು. ಅವಿರಳ ಜ್ಞಾನಿ ಶಿವ ಶರಣ ಹಡಪದ ಅಪ್ಪಣ್ಣನವರ 891ನೇ ಜಯಂತೋತ್ಸವ ನಿಮಿತ್ಯ ನಗರದ ಬ್ರಿಮ್ಸ್ ಆಸ್ಪತ್ರೆಯ ರಕ್ತ ನಿಧಿ ಕೇಂದ್ರದಲ್ಲಿ ರಕ್ತದಾನ ಮಾಡಿ ಮಾತನಾಡಿದರು. ದಾನಗಳಲ್ಲಿ ಅತೀ ಶ್ರೇಷ್ಠವಾದ ದಾನ ಎಂದರೆ ರಕ್ತದಾನ. ನೀವು ಸಕಾಲದಲ್ಲಿ ಮಾಡುವ ರಕ್ತದಾನದಿಂದ ನಾಲ್ಕು ಜೀವ ಉಳಿಸಬಹುದು. ಯಾವುದೇ ಫಲಾಪೇಕ್ಷೆ ಇಲ್ಲದೆ ಮಾಡುವ ರಕ್ತದಾನದಿಂದ ನಿಮಗೆ ದೊರಕುವ ಸಾರ್ಥಕತೆ ಇನ್ನಾವುದೇ ದಾನದಿಂದ ಸಿಗಲಾರದು. ನಿರಂತರವಾಗಿ ರಕ್ತದಾನ ಮಾಡುವುದರಿಂದ ಅಧಿಕ ರಕ್ತದೊತ್ತಡ, ಹೃದಯದ ಕಾಯಿಲೆ ಬರುವ ಸಾಧ್ಯತೆ ಕ್ಷೀಣಿಸುತ್ತದೆ. ಈ ನಿಟ್ಟಿನಲ್ಲಿ ಎಲ್ಲರೂ ನಿಯಮಿತವಾಗಿ ರಕ್ತದಾನ ಮಾಡುವುದರಿಂದ ರಕ್ತದ ಕೊರತೆ ನೀಗಿಸಬಹುದು. ರಕ್ತದಾನದಿಂದ ಆರೋಗ್ಯ ವೃದ್ಧಿಯಾಗುತ್ತದೆ. ತುರ್ತು ಸಂದರ್ಭ ಆಗತ್ಯ ಉಳ್ಳವರಿಗೆ ರಕ್ತ ದೊರೆಯಲಿದೆ. ಆದ್ದರಿಂದ ಯುವ ಜನತೆ ಉತ್ತಮ ಆಹಾರ ಸೇವನೆ, ಉತ್ತಮ ಹವ್ಯಾಸಗಳನ್ನು ಹೊಂದಿರಬೇಕು. ಉತ್ತಮ ಆರೋಗ್ಯ ಹೊಂದಿದಲ್ಲಿ ಮುಕ್ತವಾಗಿ ರಕ್ತದಾನದಲ್ಲಿ ಭಾಗವಹಿಸಿ ಅಮೂಲ್ಯ ಜೀವಗಳನ್ನು ಉಳಿಸಿದ ಹೆಮ್ಮೆ ಪಡೆಯಬಹುದಾಗಿದೆ" ಎಂದ ಅವರು, ಬದಲಾದ ದಿನದಲ್ಲಿ ಉತ್ತಮ ಆರೋಗ್ಯಕ್ಕಾಗಿ ಯುವ ಜನತೆ ಅನುಸರಿಸಬೇಕಾದ ಆಹಾರ ಪದ್ಧತಿಯ ಬಗ್ಗೆ ವಿವರಣೆ ನೀಡಿದರು. ಬಸವಣ್ಣನವರ ಆಪ್ತ ಕಾರ್ಯದರ್ಶಿಯಾಗಿದ್ದ ಶಿವ ಶರಣ ಹಡಪದ ಅಪ್ಪಣ್ಣನವರ ತತ್ವ ಆದರ್ಶಗಳನ್ನು ಪ್ರತಿಯೊಬ್ಬರು ಮೈಗೂಡಿಸಿಕೊಂಡು ಇಂದಿನ ನಾಗರಿಕ ಜಗತ್ತಿನಲ್ಲಿ ಉತ್ತಮ ಪ್ರಜೆಗಳಾಗುವ ಮೂಲಕ ಗುರು ಹಿರಿಯರನ್ನು ಗೌರವದಿಂದ ಕಾಣಬೇಕು ಎಂದು ಸಲಹೆ ನೀಡಿದರು. ಈ ಸಂದರ್ಭದಲ್ಲಿ ಯಾದಗಿರಿ ಎಕ್ಸ್‌ಪ್ರೇಸ್ ಪತ್ರಿಕೆಯ ಜಿಲ್ಲಾ ವರದಿಗಾರ ಸತೀಷಕುಮಾರ್ ತುಪ್ಪದ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಹಡಪದ ಅಪ್ಪಣ್ಣನವರ 891ನೇ ಜಯಂತಿ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:–12ನೇ ಶತಮಾನದ ವಚನ ಚಳವಳಿ ಮತ್ತು ಸಾಮಾಜಿಕ ಕ್ರಾಂತಿಯ ಹರಿಕಾರರಲ್ಲಿ ಒಬ್ಬರಾಗಿದ ಅವಿರಳ ಜ್ಞಾನಿ ಶಿವ ಶರಣ ಹಡಪದ ಅಪ್ಪಣ್ಣನವರು ಜಾತಿ, ಧರ್ಮ, ವರ್ಣ ಹಾಗೂ ವರ್ಗರಹಿತ ಸಮಾಜ ನಿರ್ಮಾಣಕ್ಕೆ ಶ್ರಮಿಸಿದ್ದಾರೆ ಎಂದು ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಹಡಪದ ಅಪ್ಪಣ್ಣನವರ 891ನೇ ಜಯಂತೋತ್ಸವದ ನಿಮಿತ್ಯ ಆಡಳಿತ ವೈದ್ಯಾಧಿಕಾರಿ ಡಾ. ವಿಜಯ್ ಹಿರಸ್ಕರ್ ಹಡಪದ ಅಪ್ಪಣ್ಣನವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಮಾತನಾಡುತ್ತ ತಿಳಿಸಿದರು. ಈ ಸಂದರ್ಭದಲ್ಲಿ ಡಾ. ನಾಜಿಮಾ, ಪಟೇಲ, ಡಾ. ಪ್ರಕಾಶ, ಸಿಬ್ಬಂದಿಗಳಾದ ಪ್ರಭು ಮುದ್ನಾಳಕರ್, ದೇವೇಂದ್ರ ನಾಗೇನಕೇರಾ, ಸಂತೋಷ ಗಾದ, ನಂದಕುಮಾರ್, ಗೀತಾ ತುಳಾಜೆ, ರೇಖಾ, ಸುಜಾತ, ಸುಮಾ ,ವಂದನಾ, ಫೌಜಿಯಾ, ಶಾಂತಮ್ಮ, ಹಲಿಮಾ, ಸುರೇಶ, ಸಿದ್ಧಲಿಂಗ, ವಿನೋದರೆಡ್ಡಿ, ಅನೀಲಕುಮಾರ, ಅರುಣ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಅನಧಿಕೃತವಾಗಿ ನಡೆಸುತ್ತಿರುವ ಅಂಗಡಿಗಳು ತೆರವುಗೊಳಿಸಲು ಆದೇಶ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ತಾಲೂಕಿನ ಮನ್ನಾಖೇಳ್ಳಿ ಸಮುದಾಯ ಆರೋಗ್ಯ ಕೇಂದ್ರದ ಎದುರುಗಡೆ ಇರುವ ಸರ್ಕಾರಿ ಸ್ಥಳದಲ್ಲಿ ಅನಧಿಕೃತ ಅಂಗಡಿಗಳನ್ನು ತೆರವುಗೊಳಿಸಬೇಕು ಎಂದು ಗ್ರಾಮ ಪಂಚಾಯತ್ ಸಾಮಾನ್ಯ ಸಭೆಯಲ್ಲಿ ಠರಾವುಗೊಳ್ಳಿಸಲಾಗಿದೆ. ಈ ಸರ್ಕಾರಿ ಜಮೀನಿನಲ್ಲಿ ಗ್ರಾಮ ಪಂಚಾಯತ್ ಮಳಿಗೆಗಳ ಸಂಕೀರ್ಣ ನಿರ್ಮಿಸಲಾಗುವುದು, ಅನಧಿಕೃತವಾಗಿ ಗ್ರಾಮ ಪಂಚಾಯತಗೆ ತೆರಿಗೆ ಪಾವತಿಸದೆ ಅಂಗಡಿಗಳು ನಡೆಸುತ್ತಿದ್ದಾರೆ. ಈ ಅಂಗಡಿಗಳು ಜುಲೈ 12ರಂದು ತೆರೆವುಗೊಳ್ಳಿಸುವ ಕಾರ್ಯಾಚರಣೆ ಹಮ್ಮಿಕೊಳ್ಳಲಾಗಿದೆ ಅದಕ್ಕಾಗಿ ಅನಧಿಕೃತವಾಗಿ ಅಂಗಡಿಗಳು ನಡೆಸುವವರು ತಮ್ಮ ಅಂಗಡಿಗಳು ತೆರೆವುಗೊಳಿಸಿಕೊಳ್ಳಲು ಗ್ರಾಮ ಪಂಚಾಯತ್ ಅಧ್ಯಕ್ಷ ರಾಜಕುಮಾರ ಅಗಸಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹಿರಿಯ ಅಧಿಕಾರಿಗಳಿಗೆ ಗೌರವ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಇಲ್ಲಿನ 108 ಅಡಿ ಎತ್ತರದ ಬಸವ ಪುತ್ಥಳಿ ಸ್ಮಾರಕ ಟ್ರಸ್ಟ್ ಪೂಜ್ಯರು ಕರ್ನಾಟಕ ರಾಜ್ಯ ಕಂದಾಯ ಇಲಾಖೆ ಪ್ರಧಾನ ಕಾರ್ಯದರ್ಶಿಗಳಾದ ಡಾ. ರಾಜೇಂದ್ರ ಕಟಾರಿಯ ಮತ್ತು ಜಿಲ್ಲಾಧಿಕಾರಿಗಳಾದ ಶ್ರೀಮತಿ ಶಿಲ್ಪಾಶರ್ಮ ಇವರನ್ನು ಪೂಜ್ಯ ಶ್ರೀ ಸಿದ್ದರಾಮೇಶ್ವರ ಸ್ವಾಮೀಜಿ ಹಾಗೂ ಪೂಜ್ಯ ಶ್ರೀ ಲಾವಣ್ಯಾದೇವಿ ಮಾತಾಜಿಯವರು ಗೌರವಪೂರ್ವಕವಾಗಿ ಸನ್ಮಾನ ಮಾಡಿ ಶುಭಹಾರೈಸಿದರು. ಈ ಸಂದರ್ಭದಲ್ಲಿ ಸಹಾಯಕ ಆಯುಕ್ತರಾದ ಮುಕುಲ್ ಜೈನ್, ಬಿಕೆಡಿಬಿ ಆಯುಕ್ತರಾದ ಜಗನ್ನಾಥ್ ರೆಡ್ಡಿ. ತಹಸೀಲ್ದಾರ್ ದತ್ತಾತ್ರೇಯ ಗಾದಾ. ನಿವೃತ್ತ ಮುಖ್ಯ ಅಭಿಯಂತರ ಜಗನ್ನಾಥ ಹಲಂಗೆ. ರಾಜಕೀಯ ಮುಖಂಡರಾದ ಶಿವರಾಜ್ ನರಶೆಟೆ. ಬಾಬುರಾವ್ ತುಂಬ, ಮತ್ತು ಬಸವ ಧರ್ಮ ಪೀಠದ ಹಿತೈಷಿಗಳು ಉಪಸ್ಥಿತರಿದ್ದರು.




ಬಸವಕಲ್ಯಾಣ :– ಇಲ್ಲಿನ ತಿಪುರಾಂತಿನ ಶ್ರೀ ಘನಲಿಂಗ ರುದ್ರಮುನಿ ಶಿವಾಚಾರ್ಯ ಸಂಸ್ಥಾನ ಗವಿಮಠದಲ್ಲಿ ಶ್ರೀ ಘನಲಿಂಗ ರುದ್ರಮುನಿ ಶಿವಾಚಾರ್ಯ ಟ್ರಸ್ಟ್ ಹಾಗೂ ಬಸವಕಲ್ಯಾಣ ನಾಡು ಗ್ರಾಮಿಣ ಜನಪದ ಕಲಾ ಸಂಘ ಇವರ ಸಂಯುಕ್ತ ಆಶ್ರಯದಲ್ಲಿ ಗುರು ಪೂರ್ಣಿಮೆ ನಿಮಿತ್ತ ಪೂಜ್ಯಶ್ರೀ ಷ ಬ್ರ. ಡಾ. ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರಿಗೆ ಹಮ್ಮಿಕೊಂಡ ಗುರುವಂದನಾ ಸಮಾರಂಭದಲ್ಲಿ ಪತ್ರಕರ್ತರಾದ ಡಿ. ಕೆ. ಪ್ರಹ್ಲಾದಕುಮಾರ. ನಾಗಪ್ಪಾ ನಿಣ್ಣೆ. ಯವರಿಗೆ ಪೂಜ್ಯರಿಂದ ಸನ್ಮಾನಿಸಲಾಯಿತು ಈ ಸಂದರ್ಭದಲ್ಲಿ ಸಂಗೀತ ಕಲಾವಿದರಾದ ಸೂರ್ಯಕಾಂತ ಬಿರಾದಾರ ಖಾನಾಪುರ ಪತ್ರಕರ್ತ ಸಂಘದ ಮಾಜಿ ಅಧ್ಯಕ್ಷ ವೀರಶೆಟ್ಟಿ ಮಲಶೆಟ್ಟಿ. ದೀಲಿಪ ಕುಮಾರ್ ದೇಸಾಯಿ. ಶರಣಪ್ಪಾ ಜಮಾದರ ಸುಂತಾಣ. ಸುಭಾಷ ಮಂತಾಳೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ನಾಣ್ಯಗಳಿಂದ ಶಿವಕುಮಾರ ಸ್ವಾಮೀಜಿ ತುಲಾಭಾರ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು. 10 : ಗುರು ಪೂರ್ಣಿಮೆ ನಿಮಿತ್ತ ಇಲ್ಲಿಯ ಸಿದ್ಧಾರೂಢಮಠದಲ್ಲಿಗುರುವಾರ ನಡೆದ ಕಾರ್ಯಕ್ರಮದಲ್ಲಿ ಭಕ್ತರು ನಾಣ್ಯಗಳಿಂದ ಮಠದ ಪೀಠಾಧಿಪತಿ ಡಾ. ಶಿವಕುಮಾರ ಸ್ವಾಮೀಜಿ ಅವರ ತುಲಾಭಾರ ಮಾಡಿದರು.

ಮಾತೆ ಆನಂದಮಯಿ, ಬಸವರಾಜ ಡಿಗ್ಗಿ, ಸಂಗೀತಾ ಚಂದ್ರಕಾಂತ ಝುರಕುಂಟೆ, ಶಿವರಾಜ ಮಾಳಶೆಟ್ಟಿ ಹಾಗೂ ಹಣಮಂತರಾಯ ಬಿರಾದಾರ ತುಲಾಭಾರ ಮಾಡಿ ಭಕ್ತಿ ಸಮರ್ಪಿಸಿದರು.

ಮಠದ ಸಾಧಕ-ಸಾಧಕಿಯರು ಷೋಡಶೋಪಚಾರ ಮೂಲಕ ಶ್ರೀಗಳ ಪಾದಪೂಜೆಗೈದರು.

ಕಾರ್ಯಕ್ರಮದ ಸಾನಿಧ್ಯ ವಹಿಸಿ ಮಾತನಾಡಿದ ಡಾ. ಶಿವಕುಮಾರ ಸ್ವಾಮೀಜಿ ಅವರು, ಜೀವನ ಸಾರ್ಥಕಕ್ಕೆ ಪ್ರತಿಯೊಬ್ಬರೂ ಸದ್ಗುರುವಿನ ಕೃಪೆಗೆ ಪಾತ್ರರಾಗಲು ಪ್ರಯತ್ನಿಸಬೇಕು. ಪಾಲಕರು, ಪರಮಾತ್ಮ ಹಾಗೂ ಮಹಾತ್ಮರನ್ನು ದೇವರೆಂದು ತಿಳಿಯಬೇಕು ಎಂದು ಹೇಳಿದರು.

ತಂದೆ-ತಾಯಿ ಜನ್ಮಕ್ಕೆ ಕಾರಣರಾದರೆ, ಅಜ್ಞಾನ ಕಳೆದು ಸುಜ್ಞಾನ ನೀಡುವವನು ಗುರು. ಹೀಗಾಗಿ ಗುರು ದೇವರಿಗಿಂತ ದೊಡ್ಡವನು. ಗುರುವೆಂದರೆ ಜ್ಞಾನ. ಗುರು ಪೂರ್ಣಿಮೆಯು ಸದ್ಗುರುವಿನ ಉಪಕಾರ ಪಡೆದ ಶಿಷ್ಯರು ಗುರುವಿನ ದರ್ಶನ, ಸ್ಮರಣೆ ಮಾಡಿ ಧನ್ಯರಾಗುವ ಪುಣ್ಯದ ದಿನ ಎಂದು ಬಣ್ಣಿಸಿದರು.

ಕಲಬುರಗಿಯ ಮಾತೆ ಲಕ್ಷ್ಮಿದೇವಿ ಮಾತನಾಡಿ, ಗುರು ಪೂರ್ಣಿಮೆ ಗುರು-ಶಿಷ್ಯರ ಅವಿನಾಭಾವ ಸಂಬಂಧದ ಸ್ಮರಣೆಯ ದಿನ ಎಂದು ಹೇಳಿದರು.

ಸಕಲ ಜೀವರಾಶಿಗಳಲ್ಲಿ ಮಾನವ ಶ್ರೇಷ್ಠ, ಮಾಯೆ, ಮೋಹದ ಬುದ್ಧಿಯಿಂದ ಕೂಡಿದ ಮನುಷ್ಯನಿಗೆ ವಿಶೇಷ ಜ್ಞಾನ ಅನುಗ್ರಹಕ್ಕಾಗಿ ಪರಮಾತ್ಮ ಸ್ವತಃ ಗುರುವಿನ ರೂಪದಲ್ಲಿ ಭುವಿಯಲ್ಲಿ ಅವತರಿಸಿದನು. ಸತ್ಯದ ಸಾಕ್ಷಾತ್ಕಾರ ಮಾಡಿಕೊಳ್ಳಲು ಗುರುವಿಗೆ ಶರಣು ಹೋಗಲೇಬೇಕು ಎಂದು ಗುರುದೇವಾಶ್ರಮದ ಗಣೇಶಾನಂದ ಮಹಾರಾಜ್ ಹೇಳಿದರು.

ನಾಸಿಕದ ಮಾತೆ ಮನಿಶಾ, ನಾಗಪುರದ ಮಾತೆ ಶೋಭನಾ, ಮುಳಸಾವಳಗಿ ದಯಾನಂದ ಸ್ವಾಮೀಜಿ, ಆಳೂರಿನ ಶಂಕರಾನಂದ ಸ್ವಾಮೀಜಿ, ಸೋಲಾಪುರದ ಜಡಿಸಿದ್ಧ ಸ್ವಾಮೀಜಿ, ಚಳಕಾಪುರದ ಶಿವಪ್ರಕಾಶನಂದಗಿರಿ ಸ್ವಾಮೀಜಿ, ಸ್ವಾತ್ಮಾನಂದ ಗಿರಿ ಸ್ವಾಮೀಜಿ, ಮಾತೆ ಸಿದ್ದೇಶ್ವರಿ, ಮಾತೆ ಸಂಗೀತಾ, ಬೆಳ್ಳೂರಿನ ಅಮೃತಾನಂದಮಯಿ, ಮಾತೆ ಶ್ರೀದೇವಿ ಮಾತನಾಡಿದರು.

ಚಿದಂಬರ ಶಿಕ್ಷಣ ಸಂಸ್ಥೆಯ ಆಡಳಿತ ಮಂಡಳಿ ಸದಸ್ಯರಾದ ಬಿ.ಜಿ ಶೆಟಕಾರ್, ಬಸವರಾಜ ಜಾಬಶೆಟ್ಟಿ, ಪ್ರಭುಶೆಟ್ಟಿ ಮುದ್ದಾ, ಶಿವಶರಣಪ್ಪ ಸಾವಳಗಿ, ಉದಯಭಾನು ಹಲವಾಯಿ, ಮಡಿವಾಳಪ್ಪ ಗಂಗಶೆಟ್ಟಿ, ಸಹಜಾನಂದ ಕಂದಗೂಳ, ಡಾ. ಆನಂದ ಜಾಬಶೆಟ್ಟಿ, ವೀರೇಖಾ ಪಾಟೀಲ, ಸುಭಾಷ್ ಉಪ್ಪೆ, ವಿನಾಯಕ ಮಹಾರಾಜ, ಆಡಳಿತಾಧಿಕಾರಿ ಡಾ. ಹಾವಗಿರಾವ್ ಮೈಲಾರೆ, ಭಾರತಿಬಾಯಿ ಕಣಜಿ, ಲಲಿತಾದೇವಿ ಶೆಟಕಾರ್, ಪ್ರಭು ಬೆಣ್ಣೆ, ವಿರೂಪಾಕ್ಷ ಗಾದಗಿ, ದೇವಪ್ಪ ಶಂಭು, ಗಣಪತಿ ಡಿ.ಕೆ, ಕಲ್ಯಾಣರಾವ್ ಬುಜುರಕೆ, ಶರಣಪ್ಪ ತಿರಲಾಪುರ, ಕರಬಸಪ್ಪ ಮುಸ್ತಾಪುರ, ಶಾಲಾ ಮುಖ್ಯಸ್ಥರಾದ ಡಾ. ಚಂದ್ರಕಾಂತ ಹಳ್ಳಿ, ನಾಗಪ್ಪ ಜಾನಕನೋರ, ಡಾ. ಚಂದ್ರಪ್ಪ ಭತಮುರ್ಗೆ, ಅಂಜು ಪ್ರಾಜೇಶ್, ಲಕ್ಷ್ಮಣ ಪೂಜಾರಿ, ಬಸವರಾಜ ಮ್ಯಾಗೆರಿ ಇದ್ದರು. ರಾಜ್ಯದ ವಿವಿಧ ಜಿಲ್ಲೆ, ಮಹಾರಾಷ್ಟ್ರ, ಗೋವಾ, ತೆಲಂಗಾಣ ರಾಜ್ಯಗಳ ಭಕ್ತರು ಅಪಾರ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.

# ಗುರುವಿಗೆ ತಮ್ಮ ರಕ್ತದಲ್ಲಿ ಬಿಡಿಸಿದ ಚಿತ್ರ ಸಮರ್ಪಿಸಿದ ಜಾನಸನ್ ಘೋಡೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು. 10 : ಕಾಂಗ್ರೆಸ್ ಕಾರ್ಮಿಕ ವಿಭಾಗದ ರಾಜ್ಯ ಕಾರ್ಯದರ್ಶಿ ಜಾನಸನ್ ಘೋಡೆ ಗುರು ಪೂರ್ಣಿಮೆ ಪ್ರಯುಕ್ತ ಮುಗಳಖೋಡ-ಜಿಡಗಾ ಮಠದ ಪೀಠಾಧಿಪತಿ ಮುರುಘರಾಜೇಂದ್ರಸ್ವಾಮೀಜಿ ಅವರಿಗೆ ತಮ್ಮ ರಕ್ತದಲ್ಲಿ ಬಿಡಿಸಿದ ಚಿತ್ರ ಸಮರ್ಪಿಸಿ ಗಮನ ಸೆಳೆದಿದ್ದಾರೆ.

ಜಿಡಗಾದಲ್ಲಿ ಗುರುವಾರ ಮುರುಘರಾಜೇಂದ್ರಶ್ರೀಗಳಿಗೆ ಅವರು ಚಿತ್ರ ಹಸ್ತಾಂತರಿಸಿದರು.

ಮುರುಘರಾಜೇಂದ್ರಸ್ವಾಮೀಜಿ ಅವರ ಮೇಲೆ ನನಗೆ ಅಪಾರ ಭಕ್ತಿ ಇದೆ. ಹೀಗಾಗಿ ಗುರು ಪೂರ್ಣಿಮೆ ಅಂಗವಾಗಿ ತಮ್ಮ ರಕ್ತದಲ್ಲಿ ಕಲಾವಿದರೊಬ್ಬರಿಂದ ಮುರುಘರಾಜೇಂದ್ರಸ್ವಾಮೀಜಿ ಅವರ ಸುಂದರ ಚಿತ್ರ ಬಿಡಿಸಿ ಅವರಿಗೆ ಕೊಟ್ಟಿರುವೆ ಎಂದು ಜಿಲ್ಲೆಯವರೇ ಆದ ಜಾನಸನ್ ಘೋಡೆ ತಿಳಿಸಿದರು.

# ಗುರು ನಾನಕ್ ಕಾಲೇಜು ವಿದ್ಯಾರ್ಥಿಗಳಿಂದ ಸಿ.ಎ. ಪರೀಕ್ಷೆಯಲ್ಲಿ ಅಪೂರ್ವ ಸಾಧನೆ





ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು. 10 : ಇಲ್ಲಿನ ಶ್ರೀ ನಾನಕ್ ಝಿರಾ ಸಾಹೇಬ್ ಫೌಂಡೇಶನ್‌ನ ಅಧಿನದಲ್ಲಿರುವ ಗುರು ನಾನಕ್ ಪ್ರಥಮ ದರ್ಜೆ ಮಹಾವಿದ್ಯಾಲಯದ ಬಿ.ಕಾಂ. 4ನೇ ಸೆಮಿಸ್ಟರ್‌ನ ವಿದ್ಯಾರ್ಥಿಗಳು ಇನ್‌ಸ್ಟಿಟ್ಯೂಟ್ ಆಫ್ ಚಾರ್ಟರ್ಡ್ ಅಕೌಂ-ಟೆಂಟ್ಸ್ ಆಫ್ ಇಂಡಿಂ-ಯಾ (ಐಅಂಐ) ನಡೆಸಿದ ಚಾರ್ಟರ್ಡ್ ಅಕೌಂಟೆಂಟ್ಸ್(ಅಂ) ಪರೀಕ್ಷೆಯಲ್ಲಿ ಅದ್ಭುತ ಯಶಸ್ಸು ಸಾಧಿಸಿ ಮಹಾವಿದ್ಯಾಲಯದ ಕೀರ್ತಿಗೆ ಹೊಸತಾದ ಮೆಟ್ಟಿಲು ಹಾಕಿದ್ದಾರೆ.

ಈ ಸಾಧನೆಗೆ ಕುಮಾರಿ. ಶ್ರಷ್ಟಿ ಇಂಟರ್ಮಿಡಿಯೇಟ್ ಸಿ.ಎ. ಪರೀಕ್ಷೆಯನ್ನು ಯಶಸ್ವಿಯಾಗಿ ಉತೀರ್ಣಳಾಗಿದ್ದಾಳೆ. ಕುಮಾರ. ಸುಧೀಪ್ ನರೋಟೆ ಮತ್ತು ಕುಮಾರ. ಆದಿತ್ಯ ಬಚ್ಚಾ ಅವರು ಫೌಂಡೇಶನ್ ಸಿ.ಎ. ಪರೀಕ್ಷೆಯನ್ನು ಉತ್ತೀರ್ಣರಾಗಿ ತಮ್ಮ ಪ್ರತಿಭೆಯನ್ನು ರಾಷ್ಟ್ರಮಟ್ಟದಲ್ಲಿ ಪ್ರದರ್ಶಿಸಿದ್ದಾರೆ.

ವಿದ್ಯಾರ್ಥಿಗಳ ಈ ಸಾಧನೆ ಅವರ ನಿರಂತರ ಪರಿಶ್ರಮ, ನಿಷ್ಠೆ, ಆತ್ಮವಿಶ್ವಾಸ ಮತ್ತು ಶಕ್ತಿಯುತ ಅಕಾಡೆಮಿಕ್ ಪೈಪೋಟಿಯ ಪ್ರತಿಬಿಂಬವಾಗಿದೆ. ಈ ಯಶಸ್ಸಿನ ಹಿನ್ನಲೆಯಲ್ಲಿ ಕಾಲೇಜು ನೀಡಿದ ಉತ್ತಮ ಮಾರ್ಗದರ್ಶನ, ತಂತ್ರಜ್ಞಾನ ಸುಧಾರಿತ ಪಾಠಣ ವಿಧಾನಗಳು ಮತ್ತು ಸ್ಫೂರ್ತಿದಾಯಕ ವಾತಾವರಣವೂ ಬಹುಮುಖ್ಯ ಪಾತ್ರವಹಿಸಿವೆ.

ಕಾಲೇಜಿನ ಆಡಳಿತ ಮಂಡಳಿ, ಪ್ರಾಂಶುಪಾಲರು ಹಾಗೂ ಎಲ್ಲಾ ಸಿಬ್ಬಂದಿ ಈ ಸಾಧನೆಗಾಗಿ ವಿದ್ಯಾರ್ಥಿಗಳನ್ನು ಹಾರ್ದಿಕವಾಗಿ ಅಭಿನಂದಿಸುತ್ತಾ, ಮುಂದಿನ ದಿನಗಳಲ್ಲಿ ಈ ಪ್ರತಿಭಾವಂತರಿಗೆ ಇನ್ನಷ್ಟು ಪ್ರಗತಿ, ಯಶಸ್ಸು ಹಾಗೂ ವೃತ್ತಿಜೀವನದಲ್ಲಿ ಉನ್ನತ ಸ್ಥಾನ ಸಿಗಲೆಂದು ಹಾರೈಸಿದ್ದಾರೆ.

ಈ ಸಾಧನೆಯಿಂದಾಗಿ ಕಾಲೇಜಿನ ಶೈಕ್ಷಣಿಕ ಗುಣಮಟ್ಟ ಮತ್ತು ಸೃಜನಶೀಲತೆಯನ್ನು ಮತ್ತಷ್ಟು ಉನ್ನತ ಮಟ್ಟಕ್ಕೆ ಹೆಚ್ಚಳವಾಗಲು ಯಾವುದೇ ಸಂದೇಹವಿಲ್ಲ.

# ಕೆಲಸದ ಅವಧಿ 8 ಗಂಟೆಗೆ ಇಳಿಸಲು ಆಗ್ರಹಿಸಿ ಪ್ರತಿಭಟನೆ



ಬೀದರ. ಜು. 10 : ಕೆಲಸದ ಅವಧಿ ಎಂಟು ಗಂಟೆಗೆ ಇಳಿಸುವುದು, ನಾಲ್ಕು ಕಾರ್ಮಿಕ ಸಂಹಿತೆಗಳನ್ನು ಹಿಂಪಡೆಯುವುದು ಸೇರಿದಂತೆ ಇತರೆ ಬೇಡಿಕೆಗಳನ್ನು ಈಡೇರಿಸಬೇಕೆಂದು ಆಗ್ರಹಿಸಿ ಕರೆ ಕೊಟ್ಟಿರುವ ರಾಷ್ಟ್ರವ್ಯಾಪ್ತಿ ಮುಷ್ಕರವನ್ನು ಬೆಂಬಲಿಸಿ ಕಾರ್ಮಿಕ ಸಂಘಟನೆಗಳ ಜಂಟಿ ಸಮಿತಿ, ಸಂಯುಕ್ತ ಕಿಸಾನ್ ಮೋರ್ಚಾ ಮತ್ತು ಅಖಿಲ ಭಾರತ ಕಿಸಾನ್ ಮೋರ್ಚಾದಿಂದ ನಗರದಲ್ಲಿ ಬುಧವಾರ ಪ್ರತಿಭಟನೆ ನಡೆಸಲಾಯಿತು.

ನಗರದ ಪ್ರವಾಸಿ ಮಂದಿರದಿಂದ ಆರಂಭಗೊಂಡ ಮೆರವಣಿಗೆಯು ಪ್ರಮುಖ ಮಾರ್ಗಗಳ ಮೂಲಕ ಹಾದು ಜಿಲ್ಲಾಧಿಕಾರಿ ಕಚೇರಿ ಎದುರು ಕೊನೆಗೊಂಡಿತು. ರ್‍ಯಾಲಿಯುದ್ದಕ್ಕೂ ಕೇಂದ್ರ ಹಾಗೂ ರಾಜ್ಯ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು. ಕಾರ್ಮಿಕ ಸಂಘಟನೆ, ಕಿಸಾನ್ ಮೋರ್ಚಾ, ಅಂಗನವಾಡಿ, ಆಶಾ ಕಾರ್ಯಕರ್ತೆಯರು, ಅಸಂಘಟಿತ ವಲಯದ ಕಾರ್ಮಿಕರು ರ್‍ಯಾಲಿಯಲ್ಲಿ ಪಾಲ್ಗೊಂಡಿದ್ದರು. ಆನಂತರ ಜಿಲ್ಲಾಧಿಕಾರಿಗೆ ಮನವಿ ಪತ್ರ ಸಲ್ಲಿಸಿದರು.

ಕೇಂದ್ರ ಸರ್ಕಾರವು ಬಂಡವಾಳಶಾಹಿ ಮತ್ತು ಕಾರ್ಪೊರೇಟ್‌ನವರ ಒತ್ತಡ-ಕ್ಕೆ ಮಣಿದು ಕಾರ್ಮಿಕ ವಿರೋಧಿಯಾಗಿರುವ ನಾಲ್ಕು ಕಾರ್ಮಿಕ ಸಂಹಿತೆಗಳನ್ನು ಜಾರಿಗೆ ತಂದಿದೆ. ಅನೇಕ ರಾಜ್ಯ ಸರ್ಕಾರಗಳು ಕೆಲಸದ ಅವಧಿಯನ್ನು 8 ಗಂಟೆಯ ಬದಲಾಗಿ 10 ಗಂಟೆಗೆ ಹೆಚ್ಚಿಸಿವೆ. ಕರ್ನಾಟಕ ಸರ್ಕಾರವು ಕೂಡ ಕೇಂದ್ರದ ಹಾದಿಯಲ್ಲಿಯೇ ಮುಂದುವರಿಯುತ್ತಿದೆ. ಈ ನಾಲ್ಕು ಸಂಹಿತೆಗಳನ್ನು ಹಿಂತೆಗೆದುಕೊಳ್ಳಬೇಕು ಎಂದು ಒತ್ತಾಯಿಸಿದರು.

ನೆಹರೂ ಅವರ ಕಾಲದ ಸಾರ್ವಜನಿಕ ವಲಯದ ಕೈಗಾರಿಕೆಗಳನ್ನು ಪ್ರಧಾನಿ ನರೇಂದ್ರ ಮೋದಿಯವರು ಮಾರಾಟ ಮಾಡುತ್ತಿದ್ದಾರೆ. ರೈಲ್ವೆ, ಎಲ್‌ಐಸಿ ಖಾಸಗೀಕರಣ ಮಾಡುತ್ತಿದ್ದಾರೆ. ರಾಷ್ಟ್ರೀಕೃತ ಬ್ಯಾಂಕುಗಳನ್ನು ವಿಲೀನ ಗೊಳಿಸುತ್ತಿದ್ದಾರೆ. ಸರ್ಕಾರದ ಆಸ್ತಿಯನ್ನು ನಗದೀಕರಣಗೊಳಿಸಲಾಗುತ್ತಿದೆ. ಕೂಡಲೇ ಕೇಂದ್ರ ಸರ್ಕಾರ ಇದರಿಂದ ಹಿಂದೆ ಸರಿಯಬೇಕು ಎಂದು ಆಗ್ರಹಿಸಿದರು.

ಕಾರ್ಮಿಕ ಹಕ್ಕುಗಳನ್ನು ರದ್ದು ಮಾಡುವುದರ ಮೂಲಕ ಕಾರ್ಮಿಕ ಚಳವಳಿಯನ್ನು ತಡೆಗಟ್ಟಲು ಸರ್ಕಾರ ಮುಂದಾಗಿದೆ. ಈ ಮೂಲಕ ಪ್ರಜಾಪ್ರಭುತ್ವದ ಹಕ್ಕು ಕಸಿದುಕೊಳ್ಳುತ್ತಿದೆ. ಅಂಗನವಾಡಿ ನೌಕರರು, ಆಶಾ ಕಾರ್ಯಕರ್ತೆಯರು ಹಾಗೂ ಬಿಸಿಯೂಟದ ನೌಕರರ ಸೇವೆ ಕಾಯಂಗೊಳಿಸುವಂತೆ ಹಲವು ಸಲ ಹೋರಾಟ ನಡೆಸಿದರೂ ಕಿವಿಗೆ ಹಾಕಿಕೊಂಡಿಲ್ಲ ಎಂದರು.

ಕಾರ್ಮಿಕ ಸಂಘಟನೆಗಳ ಜಂಟಿ ಸಮಿತಿಯ ಸಂಚಾಲಕ ಬಾಬುರಾವ್ ಹೊನ್ನಾ, ಸಹ ಸಂಚಾಲಕ ಆರ್.ಪಿ.ರಾಜಾ, ಸಂಯುಕ್ತ ಕಿಸಾನ್ ಮೋರ್ಚಾ ಸಂಚಾಲಕ ನಜೀರ್ ಅಹ್ಮದ್, ಮಹೇಶ ನಾಡಗೌಡ, ಎಂ.ಡಿ. ಶಫಾಯತ್ ಅಲಿ, ಬಿ.ವಿ. ಜಗದೀಶ್ವರ ಸೇರಿದಂತೆ ಮತ್ತಿತರರು ಪಾಲ್ಗೊಂಡಿದ್ದರು.

ಬ್ಯಾಂಕ್ ನೌಕರರಿಂದಲೂ ಮುಷ್ಕರ

ಕಾರ್ಮಿಕ ಸಂಘಗಳು ಕರೆ ನೀಡಿದ್ದ ಮುಷ್ಕರ ಬೆಂಬಲಿಸಿ ಕೆನರಾ ಬ್ಯಾಂಕ್, ಭಾರತೀಯ ಜೀವ ವಿಮಾ ನಿಗಮ ಕಚೇರಿ ಮತ್ತು ಬ್ಯಾಂಕ್ ಆಫ್ ಇಂಡಿಂ-ಯಾ ನೌಕರರು ಬೀದರ್‌ನ ಜನವಾಡ ರಸ್ತೆಯ ಕೆನರಾ ಬ್ಯಾಂಕ್ ಎದುರು ಸೇರಿ, ಮುಷ್ಕರ ನಡೆಸಿದರು.

ಪ್ರಮುಖರಾದ ಶಿವಾಜಿ ಮಾನೆ, ಬಸವರಾಜ ಮಾಳಗೆ, ಸಂತೋಷ್ ಕೋರೆ, ಮಿಲಿಂದ್ ಚಲ್ವಾ, ಸಚಿನ್, ಚೇತನ್ ಸಾಗರ್ ಮತ್ತಿತರರು ಪಾಲ್ಗೊಂಡಿದ್ದರು.

ಸಾಮಾಜಿಕ ಭದ್ರತೆಗೆ ಆಗ್ರಹ

ಅಸಂಘಟಿತ ಕಾರ್ಮಿಕರಾಗಿರುವ ಕಟ್ಟಡ ಕಾರ್ಮಿಕರು, ಗಿಗ್ ಕಾರ್ಮಿಕರಿಗೆ ಎಲ್ಲಾ ರೀತಿಯ ಸಾಮಾಜಿಕ ಭದ್ರತೆ ಕಲ್ಪಿಸಬೇಕು. ಕೃಷಿ ಕಾರ್ಮಿಕರಿಗಾಗಿ ಕಲ್ಯಾಣ ಮಂಡಳಿ ರಚಿಸಬೇಕು. ಬಗರ್ ಹುಕುಂ ಸಾಗುವಳಿದಾರರ ಮೇಲೆ ನಡೆಯುತ್ತಿರುವ ದೌರ್ಜನ್ಯ ತಡೆಯಬೇಕು. ಬಿಎಸ್‌ಎಸ್‌ಕೆ ಪುನಃ ಆರಂಭಿಸಬೇಕು. ಕಾರ್ಮಿಕರಿಗೆ ಕೊಡಬೇಕಾದ ಬಾಕಿ ಪಾವತಿಸಬೇಕು ಎಂದು ಆಗ್ರಹಿಸಿದರು.

# ಮಾದಿಗ ಸಮುದಾಯಕ್ಕೆ ಕಾಂಗ್ರೆಸ್ ಜಿಲ್ಲಾ ಅಧ್ಯಕ್ಷ ಸ್ಥಾನಕ್ಕೆ ಒತ್ತಾಯ



ಬೀದರ. ಜು. 10 : ಮಾದಿಗ ಸಮುದಾಯಕ್ಕೆ ಕಾಂಗ್ರೆಸ್ ಜಿಲ್ಲಾ ಘಟಕದ ಅಧ್ಯಕ್ಷ ಸ್ಥಾನ ಕೊಡಬೇಕು ಎಂದು ಕಾಂಗ್ರೆಸ್ ಹಿರಿಯ ಮುಖಂಡ ರೋಹಿದಾಸ್ ಘೋಡೆ ಒತ್ತಾಯಿಸಿದ್ದಾರೆ.

ಲಿಂಗಾಯತ, ಬ್ರಾಹ್ಮಣ, ಕುರುಬ, ಮುಸ್ಲಿಮ್ ಸೇರಿದಂತೆ ವಿವಿಧ ಸಮುದಾಯದವರು ಜಿಲ್ಲಾ ಘಟಕದ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸಿದ್ದಾರೆ. ಆದರೆ, ಮಾದಿಗ ಸಮುದಾಯಕ್ಕೆ ಈವರೆಗೆ ಆ ಹುದ್ದೆ ದೊರೆತಿಲ್ಲ ಎಂದು ಹೇಳಿದ್ದಾರೆ.

ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿಯವರು ಶೇ 24 ರಷ್ಟಿದ್ದು, ಇವರಲ್ಲಿ ಮಾದಿಗ ಸಮುದಾಯದವರ ಸಂಖ್ಯೆ ಹೆಚ್ಚಿದೆ. ಜನಸಂಖ್ಯೆ ಹಾಗೂ ಸಾಮಾಜಿಕ ನ್ಯಾಯದ ಆಧಾರದಲ್ಲಿ ಸಮುದಾಯಕ್ಕೆ ಜಿಲ್ಲಾ ಘಟಕದ ಅಧ್ಯಕ್ಷ ಸ್ಥಾನ ಕೊಡಬೇಕಿದೆ ಎಂದು ತಿಳಿಸಿದ್ದಾರೆ. ಪರಿಶಿಷ್ಟ ಜಾತಿಯ ಬಲಗೈ ಸಮುದಾಯದವರಿಗೆ ಹಿಂದೆ ವಿಧಾನ ಪರಿಷತ್ ಸದಸ್ಯ ಹುದ್ದೆ ಕೊಡಲಾಗಿತ್ತು. ಈಗ ಕೆಪಿಸಿಸಿಯಲ್ಲಿ ಇಬ್ಬರಿಗೆ ಹುದ್ದೆ ಕೊಡಲಾಗಿದೆ. ಅದಕ್ಕೆ ಯಾವುದೇ ಅಭ್ಯಂತರ ಇಲ್ಲ. ಮಾದಿಗ ಸಮುದಾಯಕ್ಕೂ ರಾಜಕೀಯ ಪ್ರಾತಿನಿಧ್ಯ ಕಲ್ಪಿಸಬೇಕು ಎಂಬುದು ತಮ್ಮ ಬೇಡಿಕೆಯಾಗಿದೆ ಎಂದು ಹೇಳಿದ್ದಾರೆ.

ಮಾದಿಗ ಸಮುದಾಯ ಸ್ವಾತಂತ್ರ್ಯ ನಂತರ ಸತತವಾಗಿ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸುತ್ತ ಬಂದಿದೆ. ತಾಲ್ಲೂಕು ಪಂಚಾಯಿತಿ, ಜಿಲ್ಲಾ ಪಂಚಾಯಿತಿ, ವಿಧಾನಸಭೆ, ಲೋಕಸಭೆ ಚುನಾವಣೆಗಳಲ್ಲಿ ಪಕ್ಷದ ಅಭ್ಯರ್ಥಿಗಳ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿದೆ ಎಂದು ತಿಳಿಸಿದ್ದಾರೆ.

ಕಲಬುರಗಿ ಜಿಲ್ಲೆಯಲ್ಲಿ ಈಗಾಗಲೇ ಮಾದಿಗ ಸಮುದಾಯಕ್ಕೆ ಜಿಲ್ಲಾ ಘಟಕದ ಅಧ್ಯಕ್ಷ ಸ್ಥಾನ ನೀಡಲಾಗಿದೆ. ಬಸವರಾಜ ಜಾಬಶೆಟ್ಟಿ ಅವರನ್ನು ಬೀದರ್ ಜಿಲ್ಲಾ ಘಟಕದ ಅಧ್ಯಕ್ಷರನ್ನಾಗಿ ನೇಮಕ ಮಾಡುವಾಗ ನಾನು ಸಹ ಆಕಾಂಕ್ಷಿಯಾಗಿದ್ದೆ. ಆಗ ಮಾಜಿ ಮುಖ್ಯಮಂತ್ರಿ ಎನ್. ಧರ್ಮಸಿಂಗ್ ಅವರು ಮುಂದೆ ಪರಿಗಣಿಸುವ ಭರವಸೆ ನೀಡಿದ್ದರು ಎಂದು ಹೇಳಿದ್ದಾರೆ.

ಜಿಲ್ಲಾ ಪಂಚಾಯಿತಿ ಸದಸ್ಯ ಹಾಗೂ ಪಕ್ಷದ ವಿವಿಧ ಹುದ್ದೆಗಳಲ್ಲಿ ಸಮರ್ಥವಾಗಿ ಕಾಯ ನಿರ್ವಹಿಸಿರುವ ನಾನೂ ಕಾಂಗ್ರೆಸ್ ಜಿಲ್ಲಾ ಘಟಕದ ಅಧ್ಯಕ್ಷ ಸ್ಥಾನದ ಆಕಾಂಕ್ಷಿಯಾಗಿದ್ದೇನೆ. ನನ್ನನ್ನು ಪರಿಗಣಿಸುವ ಮೂಲಕ ಮಾದಿಗ ಸಮುದಾಯಕ್ಕೆ ಪ್ರಾತಿನಿಧ್ಯ ಕಲ್ಪಿಸಬೇಕು ಎಂದು ಆಗ್ರಹಿಸಿದ್ದಾರೆ.

# ಕೆಪಿಸಿಸಿ ಸಹಕಾರ ವಿಭಾಗದ ಅಧ್ಯಕ್ಷ ಧನರಾಜ ತಾಳಂಪಳ್ಳಿಗೆ ಅದ್ದೂರಿ ಸನ್ಮಾನ



ಬೀದರ. ಜು. 10 : ಬಸವಕಲ್ಯಾಣದಲ್ಲಿ ಮಂಗಳವಾರ ಕೆಪಿಸಿಸಿ ಸಹಕಾರ ವಿಭಾಗದ ಅಧ್ಯಕ್ಷ ಧನರಾಜ

ತಾಳಂಪಳ್ಳಿ ಅವರನ್ನು ನಾಗರಿಕ ಸಮಿತಿ ವತಿಯಿಂದ ಅದ್ದೂ-ರಿಯಾಗಿ ಸನ್ಮಾನಿಸಲಾಯಿತು.

ಬೃಹತ್ ಹೂಮಾಲೆ ಹಾಕಿ, ಪೇಟ ತೊಡಿಸಿ, ಶಾಲು ಹೊದಿಸಿ ಅಭಿನಂದಿಸಲಾಯಿತು.

ಇದಕ್ಕೂ ಮುನ್ನ ಸಹಕಾರ ವಿಭಾಗದ ರಾಜ್ಯ ಅಧ್ಯಕ್ಷರಾದ ನಂತರ ಮೊದಲ ಬಾರಿಗೆ ಜಿಲ್ಲೆಗೆ ಆಗಮಿಸಿದ ಪ್ರಯುಕ್ತ ಬೀದರನ ವಿಮಾನ ನಿಲ್ದಾಣದಲ್ಲಿ ಪಕ್ಷದ ಮುಖಂಡರು ಹಾಗೂ

ಕಾರ್ಯಕರ್ತರು ಅವರನ್ನು ಆತ್ಮೀಯವಾಗಿ ಸ್ವಾಗತಿಸಿ ಬರಮಾಡಿಕೊಂಡರು. ಬಳಿಕ ಬಸವಕಲ್ಯಾಣದ ಮಹಾದ್ವಾರದಿಂದ ಬಿಕೆಡಿಬಿ ಸಭಾಂಗಣದ ವರೆಗೆ ಬೃಹತ್ ರ್‍ಯಾಲಿಯಲ್ಲಿ ಕರೆ ತರಲಾಯಿತು.

ಬಿಕೆಡಿಬಿ ಸಭಾಂಗಣದಲ್ಲಿ ಆಯೋಜಿಸಿದ್ದ ಸಮಾರಂಭದಲ್ಲಿ ಹೃದಯಸ್ಪರ್ಶಿಯಾಗಿ

ಸತ್ಕರಿಸಲಾಯಿತು. ಮಾಜಿ ಸಚಿವ ರಾಜಶೇಖರ ಪಾಟೀಲ, ವಿಧಾನ ಪರಿಷತ್ ಸದಸ್ಯ ಚಂದ್ರಶೇಖರ ಪಾಟೀಲ, ರಾಜ್ಯ

ಮೀನುಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಮಾಲಾ ನಾರಾಯಣರಾವ್, ವಿಧಾನ ಪರಿಷತ್ ಮಾಜಿ ಸದಸ್ಯರಾದ ಅರವಿಂದಕುಮಾರ ಅರಳಿ, ಕೆ. ಪುಂಡಲೀಕರಾವ್, ಜಿಲ್ಲಾ ಪಂಚಯಿತಿ ಮಾಜಿ ಸದಸ್ಯ ವೀರಣ್ಣ ಪಾಟೀಲ, ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಅಭಿಷೇಕ ಆರ್. ಪಾಟೀಲ, ಮುಖಂಡರಾದ ಅಬ್ದುಲ್ ಮನ್ನಾನ್ ಸೇಠ್, ಪಂಡಿತರಾವ್ ಚಿದ್ರಿ, ಗುಂಡುರೆಡ್ಡಿ ಕಮಲಾಪುರೆ, ಅರ್ಜುನ ಕನಕ, ಕೇಶಪ್ಪ ಬಿರಾದಾರ, ವೈಜಿನಾಥ ಎಲಗುಂದಿ, ಲಕ್ಷ್ಮಣರಾವ್ ಬುಳ್ಳಾ, ಕೇಶವರಾವ್

ತಳಘಟಕರ್, ಗೌತಮ ಬಿ. ನಾರಾಯಣರಾವ್, ಮನೋಹರ ಮೈಸೆ, ಮಲ್ಲಿಕಾರ್ಜುನ ಪ್ರಭಾ, ಬಂಡೆಪ್ಪ ಮೇತ್ರೆ, ಚಂದ್ರಕಾಂತ ಮೇತ್ರೆ, ರಾಜಣ್ಣ ಚೌಧರಿ, ಬಸವಣಪ್ಪ ನಿಲ್ಲೋಗಿ, ಗುರು ದುರ್ಗೆ, ಸದಾನಂದ ಹಳ್ಳಿ, ವೀರಣ್ಣ ಪಾಟೀಲ, ಜ್ಞಾನೇಶ್ವರ ಸಿಂಧೆ, ಅಬ್ದುಲ್ ವಾಹಿದ್, ಸಾಗರ್ ಕವಿರಾಜ, ಯಾಹಿಯಾ ಪಾಶಾ ಮತ್ತಿತರರು ಉಪಸ್ಥಿತರಿದ್ದರು.

# ಎಸ್‌ಡಿಎಂಸಿ ಅಧ್ಯಕ್ಷರಾಗಿ ಹುಲೇಪ್ಪ ಪುನರಾಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜು.10: ತಾಲೂಕಿನ ಹುಣಜಿ(ಕೆ) ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ(ಎಸ್‌ಡಿಎಂಸಿ)ಗೆ ಸತತ ಎರಡನೆಯ ಅವಧಿಗೆ ಅಧ್ಯಕ್ಷರಾಗಿ ಹುಲೇಪ್ಪ ಸಿದ್ರಾಮಪ್ಪ ಮಾನಕಾರ ಪುನರಾಯ್ಕೆ ಆಗಿದ್ದಾರೆ. ಮಹಾದೇವಿ ಸೋಪನ್ ಅವರು ಉಪಾಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ ಎಂದು ಶಾಲೆಯ ಮುಖ್ಯಗುರು ಶಾಂತಣ್ಣ ಬಿಲಗುಂದೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶಾಸಕರಾದ ಶರಣಗೌಡ ಕಂದಕೂರ ರವರ ಕರೆಗೆ ಹಾಸ್ಟೆಲ್ ಪರಿಶೀಲನೆಗೆ ಅಧಿಕಾರಿಗಳ ದೌಡು



ಮಲ್ಲಮ್ಮ ನುಡಿ ವಾರ್ತೆ

ಗುರುಮಠಕಲ್: ಜೂ, 10, ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಶಾಸಕರಾದ ಶರಣಗೌಡ ಕಂದಕೂರ್ ವಿದ್ಯಾರ್ಥಿಗಳೊಂದಿಗೆ 09-07-2025 ರಂದು ಸಂವಾದ ನಡೆಸಿದ್ದು ವಿದ್ಯಾರ್ಥಿಗಳು ತಮ್ಮ ತಮ್ಮ ಸಮಸ್ಸೆಗಳನ್ನು ಹಂಚಿಕೊಂಡಿದ್ದು, ಸ್ಥಳದಲ್ಲಿಯ ಶಾಸಕರು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು ಅದರ ಪರಿಣಾಮ ಮರುದಿನವೆ ಪಟ್ಟಣದ ಪದವಿ ವಿದ್ಯಾರ್ಥಿಗಳ ವಸತಿನಿಲಯಕ್ಕೆ ಲವಿಶ್ ಓರ್ಡಿಯಾ, ಐಎಎಸ್, ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಯಾದಗಿರಿ ಹಾಗೂ ಸಮಾಜ ಕಲ್ಯಾಣ ಇಲಾಖೆ, ತಾಲೂಕ ಪಂಚಾಯತ್ ಕಾರ್ಯ ನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿ, ಪುರಸಭೆ ಕಾರ್ಯಾಲಯದ ಮುಖ್ಯಾಧಿಕಾರಿಗಳ ತಂಡ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಪದವಿ ಹಾಗೂ ಸ್ನಾತಕೋತ್ತರ ವಿದ್ಯಾರ್ಥಿಗಳೊಂದಿಗೆ ಸಂವಾದ ಕಾರ್ಯಕ್ರಮದಲ್ಲಿ ಶಾಸಕ ಶರಣಗೌಡ ಕಂದಕೂರು ಅವರಿಗೆ ವಿದ್ಯಾರ್ಥಿಗಳು ವಸತಿನಿಲಯಗಳಲ್ಲಿನ ಸಮಸ್ಯೆಗಳನ್ನು ಹೇಳಿಕೊಂಡರು ಜಿಲ್ಲಾ ಮುಖ್ಯಧಿಕಾರಿಗಳಿಗೆ ಮಾತನಾಡಿ ವೀಕ್ಷಿಸಲು ತಿಳಿಸಿದರು ಮರು ದಿನ ತಕ್ಷಣ ಅಧಿಕಾರಿಗಳು ಭೇಟಿ ಪರಿಶೀಲಿಸಿದರು.

ಡಿ. ದೇವರಾಜ ಅರಸು ಮೆಟ್ರಿಕ್ ನಂತರದ ಬಾಲಕಿಯರ ವಸತಿ ನಿಲಯ, ಡಾ. ಬಿ. ಅರ್. ಅಂಬೇಡ್ಕರ್ ಮೆಟ್ರಿಕ್ ನಂತರದ ವಸತಿನಿಲಯದಲ್ಲಿ ಮೂಲಭೂತ ಸೌಕರ್ಯಗಳಾದ ಕುಡಿಯುವ ನೀರು, ಶೌಚಾಲಯ, ಊಟದ ವ್ಯವಸ್ಥೆ, ಗ್ರಂಥಾಲಯ, ವಿದ್ಯುತ್ ಸಮಸ್ಯೆ, ಸೋಲಾರ್ ಬಿಸಿ ನೀರಿನ ವ್ಯವಸ್ಥೆ, ಸಂಗ್ರಹವಿದ್ದ ಧವಸ, ಧಾನ್ಯ, ತರಕಾರಿಗಳ ಗುಣಮಟ್ಟ ವ್ಯವಸ್ಥೆಯನ್ನು ಸರಿಯಾಗಿ ನಿರ್ವಹಿಸಲಾಗುತ್ತದೆಯೇ ಎಂಬುದನ್ನು ಪರಿಶಿಲಿಸಿದರು. ಸರಿಯಾಗಿ ಆಹಾರ ನೀಡಲಾಗುತ್ತದೆಯೇ ಇಲ್ಲವೇ, ಇನ್ನೂ ಏನಾದರೂ ಸಮಸ್ಯೆ ಇದ್ದಲ್ಲಿ ನಿರ್ಭಯವಾಗಿ ತಮ್ಮ ಬಳಿ ಹೇಳಿ ಎಂದು ವಿದ್ಯಾರ್ಥಿಗಳಿಂದ ಮಾಹಿತಿ ಪಡೆದರು. ಸೋರುತ್ತಿರುವ ನೀರಿನ ಟ್ಯಾಂಕ್, ಹಾಸ್ಟೆಲ್ ಸೋಲಾರ್ ಪ್ಯಾನೆಲ್ ದುರಸ್ತಿಗೊಳಿಸುವಂತೆ ಹಾಗೂ ವಸತಿನಿಲಯದಲ್ಲಿ ಸುತ್ತ ಮುತ್ತಲು ಸ್ವಚ್ಛತೆ ಕಾಪಾಡಿಕೊಳ್ಳಲು ವಾರ್ಡನ್‌ಗೆ ಸೂಚಿಸಿದರು. ಪುರಸಭೆ ಕಾರ್ಯಾಲಯದ ಮುಖ್ಯಾಧಿಕಾರಿಗಳಿಗೆ ಹಾಸ್ಟೆಲ್ ಸುತ್ತಮುತ್ತಲಿನ ಪ್ರದೇಶ ಸ್ವಚ್ಛವಾಗಿಡಲು ಹಾಗೂ ತ್ವರಿತ ಗತಿಯಲ್ಲಿ ಕಾಂಪೌಂಡ್ ಗೋಡೆ ನಿರ್ಮಾಣ ಮಾಡಲು ಸೂಚನೆ ನೀಡಿದರು. ಈ ಸಂದರ್ಭದಲ್ಲಿ ತಾಲೂಕ ಪಂಚಾಯತ ಕಾರ್ಯನಿರ್ವಹಕ ಅಧಿಕಾರಿ ಅಂಬರೀಷ ಪಾಟೀಲ, ಪಿಡಿ. ಡಿಆರ್‌ಡಿಎ ಸಿ.ಬಿ. ದೇವರಮಣಿ, ಪುರಸಭೆ ಕಾರ್ಯಾಲಯದ ಮುಖ್ಯಾಧಿಕಾರಿ ಶ್ರೀ ಭಾರತಿ ದಂಡೋತಿ, ಹಿಂದುಳಿದ ವರ್ಗಗಳ ಉಪ ನಿರ್ದೇಶಕರು (ಡಿ ಓ ಬಿ ಸಿ) ಸದಾಶಿವ ನಾರಾಯಣಕರ, ತಾಲೂಕ ಹಿಂದುಳಿದ ವರ್ಗಗಳ ಅಧಿಕಾರಿ ಸಂತೋಷರೆಡ್ಡಿ, ಸಮಾಜ ಕಲ್ಯಾಣ ತಾಲೂಕಾಧಿಕಾರಿ ಬೆಬಿ, ಹಾಸ್ಟೆಲ್ ವಾರ್ಡನ್ ಶ್ರೀದೇವಿ ಹಾಜರಿದ್ದರು.

## ಅವಕಾಶಗಳನ್ನು ನಾವೇ ಸೃಷ್ಟಿಸಿಕೊಳ್ಳಬೇಕು – ಕಂದಕೂರು ಸಲಹೆ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ/ಗುರುಮಠಕಲ್: ಜುಲೈ 10-ಪಟ್ಟಣದ ಸರಕಾರಿ ಪ್ರಥಮ ದರ್ಜೆ ಕಾಲೇಜಿಗೆ ಶಾಸಕರು ಹಾಗೂ ಕಾಲೇಜಿನ ಅಭಿವೃದ್ಧಿ ಮಂಡಳಿಯ ಅಧ್ಯಕ್ಷರಾದ ಶರಣಗೌಡ ಕಂದಕೂರ ಭೇಟಿ ನೀಡಿ ವಿಧ್ಯಾರ್ಥಿಗಳೊಂದಿಗೆ ಸುಧೀರ್ಘ ಸಮಾಲೋಚನೆ ಮಾಡಿದರು.

ಶಾಸಕ ಶರಣಗೌಡ ಕಂದಕೂರ ಜೊತೆ ಸಂವಾದದಲ್ಲಿ ಪಾಲ್ಗೊಂಡ ವಿದ್ಯಾರ್ಥಿಗಳು ಗ್ರಂಥಾಲಯ ಸೇರಿದಂತೆ ಮೂಲಭೂತ ಸೌಕರ್ಯಕ್ಕೆ ಬೇಡಿಕೆ ಇಟ್ಟರು.

ಸಭೆಯಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳು ಸಮಸ್ಯೆಗಳ ಸರಮಾಲೆಯನ್ನೇ ತೆರೆದಿಟ್ಟರು. ಸುಮಾರು 700 ವಿದ್ಯಾರ್ಥಿಗಳು ಕಾಲೇಜಿನಲ್ಲಿ ಓದುತ್ತಿದ್ದು, ವಿಧ್ಯಾರ್ಥಿಗಳು ಹಾಗೂ ಉಪನ್ಯಾಸಕರು ಕಾಲೇಜಿನ ಫಲಿತಾಂಶ ಈ ಭಾರಿ ನಿರೀಕ್ಷೆಯಂತೆ ಉತ್ತಮವಾಗಿದ್ದು, ಕಾಲೇಜಿನ ಕೆಲ ಸಮಸ್ಯೆಗಳ ಕುರಿತು ಶಾಸಕರ ಗಮನಕ್ಕೆ ತಂದರು.

**ಅಲ್ಲೇ ಡ್ರಾ ಅಲ್ಲೇ ಬಹುಮಾನ:**

ಕಾಲೇಜು ಆವರಣದ ಮುಂಭಾಗದ ಖಾಲಿ ಸ್ಥಳದಲ್ಲಿ ಸಾಯಂಕಾಲ ಪ್ರವೇಶಿಸಿ ಮದ್ಯಪಾನ ಸೇರಿದಂತೆ ಪುಂಡಾಟ ಮಾಡುತ್ತಿರುವ ಕುರಿತು ಪೊಲೀಸ್ ಇಲಾಖೆಗೆ ಹೆಚ್ಚಿನ್ ಗಸ್ತು ವಹಿಸಲು ತಿಳಿಸಿದರು.

ವಿದ್ಯಾರ್ಥಿಗಳು ಕಾಲೇಜು, ವಸತಿ ನಿಲಯದಲ್ಲಿ ನೀರು ಮತ್ತು ಊಟದ ಕುರಿತು, ಕಾಲೇಜಿಗೆ ಕೋರಿಕೆಯ ಬಸ್ ನಿಲುಗಡೆ, ಹೈಟೆಕ್ ಗ್ರಂಥಾಲಯ, ಗ್ರಾಮೀಣ ಪ್ರದೇಶದಿಂದ ಬರುತ್ತಿರುವ ವಿಧ್ಯಾರ್ಥಿಗಳಿಗೆ ಸಮಯಕ್ಕೆ ಸರಿಯಾದ ಬಸ್, ಪುಸ್ತಕಗಳು, ವಿದ್ಯಾರ್ಥಿನಿಯರಿಗೆ ಪ್ರತ್ಯೇಕ ಕೊಠಡಿ, ಪೀಠೋಪಕರಣಗಳು, ಎಲ್‌ಇಡಿ ವಿದ್ಯುತ್ ದೀಪಗಳ ವ್ಯವಸ್ಥೆ, ಕ್ರೀಡಾಂಗಣ ಸೇರಿದಂತೆ ಹಲವು ಸಮಸ್ಯೆ ಹೇಳುತ್ತಿದ್ದಂತೆ ಆಯಾ ಇಲಾಖೆಯ ಅಧಿಕಾರಿಗಳಗೆ ಸೂಚನೆ ನೀಡಿ ತಕ್ಷಣಕ್ಕೆ ಭೇಟಿ ನೀಡಿ ಬಗೆಹರಿಸಲು ಶಾಸಕರು ತಿಳಿಸಿದರು.

1 ಕೋಟಿ 20 ಲಕ್ಷ ವೆಚ್ಚದ ಹೈಟೆಕ್ ಗ್ರಂಥಾಲಯ ಹಾಗೂ ಸುಮಾರು 5 ಎಕರೆ ಸ್ಥಳದಲ್ಲಿ ಕ್ರೀಡಾಂಗಣ ನಿರ್ಮಾಣ ಮಾಡುವ ತಮ್ಮ ಮುಂದಿನ ಕನಸಿನ ಪ್ರಾಜೆಕ್ಟ್ ಬಗ್ಗೆ ತಿಳಿಸಿದರು.

ಸರಕಾರದ ನಿರ್ಲಕ್ಷ್ಯಕ್ಕೆ ಒಳಗಾದ ಅಥಿತಿ ಉಪನ್ಯಾಸಕರ ಕುರಿತು ಅಧಿವೇಶನದಲ್ಲಿ ಪ್ರಸ್ತಾವನೆ ಮಾಡುವದಗಿ ಭರವಸೆ ನೀಡಿದರು.

ಪ್ರಮುಖವಾಗಿ ರಾಯಚೂರ ವಿಶ್ವ ವಿದ್ಯಾನಿಲಯದಿಂದ ವಿಧ್ಯಾರ್ಥಿಗಳಿಗೆ ಅಂಕಪಟ್ಟಿ ಸೇರಿದಂತೆ ವಿವಿಧ ಸಮಸ್ಯೆಗಳ ಕುರಿತು ಸುಧೀರ್ಘ ಚರ್ಚೆ ನಡೆಸಿದ ಶಾಸಕರು ತ್ವರಿತ ಗತಿಯಲ್ಲಿ ಈ ಕುರಿತು ಬಗೆಹರಿಸುವದಾಗಿ ತಿಳಿಸಿದರು.

ಕಾಲೇಜಿನ ಪ್ರಾಂಶುಪಾಲರು ಹಾಗೂ ಭೋದಕ ವರ್ಗದವರು ಸಮನ್ವಯ ಕಾಪಾಡಿಕೊಂಡು ಮಕ್ಕಳ ಫಲಿತಾಂಶ ವೃದ್ಧಿಗೆ ಶ್ರಮಿಸಿ ಎಂದು ತಿಳಿಸಿದರು.

ಸ್ಪರ್ಧಾತ್ಮಕ ಪ್ರಪಂಚದಲ್ಲಿ ತಾಳ್ಮೆ ಮತ್ತು ಸಹನೆಯಿಂದ ಇದ್ದಾಗ ಮಾತ್ರ ಉನ್ನತ ಸ್ಥಾನದಲ್ಲಿ ಬೆಳೆಯಲು ಸಾಧ್ಯ, ವಿದ್ಯಾರ್ಥಿಗಳು ಅಧ್ಯಯನಶೀಲರಾಗಿ ಸಾಧನೆ ಮಾಡಬೇಕಿದೆ. ವಿದ್ಯಾರ್ಥಿಗಳಿಗೆ ಅಗತ್ಯ ಸಹಕಾರ ನೀಡಲು ತಾವು ಯಾವಾಗಲೂ ಸಿದ್ಧ ಹಾಗೂ ತಮ್ಮ ಸ್ವಾಭಿಮಾನಕ್ಕೆ ಧಕ್ಕೆ ಆಗದಂತೆ ಅಣ್ಣನ ಸ್ಥಾನದಲ್ಲಿ ನಿಂತು ನಿಮಗೆ ತೊಂದರೆ ಆಗದಂತೆ ನೋಡಿಕೊಳ್ಳುತ್ತೇನೆ ಎಂದು ಆಶ್ವಾಸನೆ ಕೊಟ್ಟರು.

ಉಪನ್ಯಾಸಕರೊಂದಿಗೆ ಸಭೆ ನಡೆಸಿ, ಕಾಲೇಜಿಗೆ ಗ್ರಾಮೀಣ ಪ್ರದೇಶದಿಂದ ಹೆಚ್ಚು ವಿದ್ಯಾರ್ಥಿಗಳು ಬರುತ್ತಿದ್ದು, ವಿದ್ಯಾರ್ಥಿಗಳ ಸಮಸ್ಯೆ, ಮನಸ್ಥಿತಿ ಅರಿತು ಸ್ಪಂದಿಸಿ ಕಾರ್ಯನಿರ್ವಹಿಸಿ. ಶೈಕ್ಷಣಿಕ ಸಮಸ್ಯೆಗಳ ಬಗ್ಗೆ ಮುಕ್ತವಾಗಿ ಚರ್ಚಿಸಿ ಪರಿಹಾರ ಕಂಡುಕೊಳ್ಳಲು ಸಲಹೆ ನೀಡಿದರು.

ಪ್ರಾಂಶುಪಾಲರಾದಡಾ.ಜಿ.ವಿ.ಪುರುಷೋತ್ತಮ, ಪ್ರೊ. ಅಂಜನೇಯ, ಡಾ. ವೆಂಕಟೇಶ್, ಇಮ್ರಾನ್ ಖಾಸಿಂ, ಬಾಬು ದೊರೆ, ಜಗದೀಶ್ ಅವಂಟಿ, ಮಲ್ಲಮ್ಮ, ಗೋವಿಂದ ಮೆಂಗಜಿ, ದೀಪಕ್ ಬೆಳ್ಳಿ, ಉಪನ್ಯಾಸಕ ವರ್ಗ, ಕಾಲೇಜು ಅಭಿವೃದ್ಧಿ ಸಮಿತಿ ಸದಸ್ಯರು ಹಾಜರಿದ್ದರು.

## ಸಮಾಜದಲ್ಲಿ ಶಾಂತಿ, ಏಕತೆ ಹಾಗೂ ವಿಶ್ವಾಸ ಹೆಚ್ಚಿಸುವಲ್ಲಿ ಮಾಧ್ಯಮಗಳ ಪಾತ್ರ ಅಪಾರ: ಬಿ.ಕೆ ಪ್ರತಿಮಾ ಬಹೆನ್‌ಜಿ




ಮಲ್ಲಮ್ಮ ನುಡಿ ವಾರ್ತೆ

ಬೀದರ.ಜು.10:-ಸಮಾಜದಲ್ಲಿ ಶಾಂತಿ, ಏಕತೆ ಹಾಗೂ ವಿಶ್ವಾಸ ಹೆಚ್ಚಿಸುವಲ್ಲಿ ಮಾಧ್ಯಮಗಳ ಪಾತ್ರ ಬಹಳಷ್ಟಿದೆ ಎಂದು ಪ್ರಜಾಪಿತಾ ಬ್ರಹ್ಮಾಕುಮಾರೀಸ್ ಈಶ್ವರಿಯ ವಿಶ್ವವಿದ್ಯಾಲಯ ಪಾವನಧಾಮದ ಸಂಚಾಲಕಿ ಬಿ.ಕೆ ಪ್ರತಿಮಾ ಬಹೆನ್‌ಜಿ ನುಡಿದರು.

ಗುರುವಾರ ನಗರದ ಜನವಾಡ ರಸ್ತೆಯಲ್ಲಿರುವ ಬ್ರಹ್ಮಾಕುಮಾರೀಸ್ ಪಾವನಧಾಮ ಕೇಂದ್ರದ ಅವರಣದಲ್ಲಿ ಜರುಗಿದ ಪತ್ರಿಕಾ ದಿನಾಚರಣೆ ಕಾರ್ಯಕ್ರಮದಲ್ಲಿ ಸಾನಿಧ್ಯವಹಿಸಿ ಮಾತನಾಡಿದರು.

ಸಮಾಜದಲ್ಲಿ ಏಕತೆ, ವಿಶ್ವಾಸ, ಸುಖ ಸ್ಥಾಪನೆ ಮಾಡಬೇಕಿದೆ. ನಮ್ಮ ನೆರಳು ಯಾವ ರೀತಿ ನಮ್ಮನ್ನು ಹಿಂಬಾಲಿಸುತ್ತದೆಯೋ ಅದೇ ರೀತಿ ಸುಖ ಶಾಂತಿಯು ನಮ್ಮ ಹಿಂದೆ ಬರುತ್ತವೆ. ಆದರೆ ಅದು ನಮ್ಮನ್ನು ಹಿಂಬಾಲಿಸುವಂತಹ ಕಾರ್ಯವನ್ನು ನಾವು ಮಾಡಬೇಕು ಎಂದರು. ಒಬ್ಬನ ಬಳಿ ಸುಖ, ಶಾಂತಿ, ಆನಂದ, ಶಕ್ತಿ, ಪ್ರೇಮ, ಪವಿತ್ರತೆ, ವಿಶ್ವಾಸ ಹೀಗೆ ಸಪ್ತ ಸಕಾರಾತ್ಮಕ ಗುಣಗಳು ಅಡಗಿವೆ. ಆತನು ನಮ್ಮೊಳಗೆ ಬಂದು ನೆಲೆಸಿದರೆ ನಮ್ಮ ಜೀವನ ಶೈಲಿಯೆ ಬದಲಾಗಲಿದೆ. ನಮ್ಮೊಳಗೆ ಆತನ ವಾಸ ನಮ್ಮನ್ನು ಸತ್ಯದ ಕಡೆಗೆ ಕೊಂಡೊಯ್ಯುತ್ತದೆ. ಆತನೇ ಸರ್ವಶಕ್ತನಾದ ಸರ್ವೇಶ್ವರ. ಆತನಿಂದ ನಮಗೆ ಆದ ಆ ಅನುಭವ ಇತರರಿಗೆ ಹಂಚುವುದು ಮನುಷ್ಯನ ಸ್ವಭಾವ. ಹಾಗಾಗಿ ಎಲ್ಲೆಡೆ ಧನಾತ್ಮಕ ವಾತಾವರಣ ನಿರ್ಮಾಣವಾಗಿ ಸತ್ಯ ಸಮಾಜ ನಿರ್ಮಾಣ ಸಾಧ್ಯವಾಗಲಿದೆ ಇದು ಆತ್ಮವಿಶ್ವಾಸಕ್ಕೆ ದಾರಿ ಮಾಡುತ್ತದೆ. ಹಾಗಾಗಿ ಮಾಧ್ಯಮಗಳು ಪರಮಾತ್ಮನ ಮನೆಯಿಂದ ಸತ್ಯವನ್ನು ಅರಿತು ಅವನ್ನು ಜಗತ್ತಿನಲ್ಲಿ ಪ್ರಚುರಪಡಿಸಿದಲ್ಲಿ ವಿಶ್ವವೇ ಸತ್ಯದ ದಾರಿಯಲ್ಲಿ ಸಾಗಬಲ್ಲದೆಂದು ಕಿವಿ ಮಾತು ಹೇಳಿದರು.

ಕಾರ್ಯಕ್ರಮ ಉದ್ಘಾಟಿಸಿದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಉಪಾಧ್ಯಕ್ಷ ಭವಾನಿಸಿಂಗ ಠಾಕೂರ ಮಾತನಾಡಿ, ಪತ್ರಕರ್ತರು ನಿತ್ಯ ಒತ್ತಡದಲ್ಲಿ ಬದುಕುವಂತಾಗಿದೆ. ಆರೋಗ್ಯದ ಕಡೆ ಅವರ ನಿಗಾ ಇಲ್ಲದ ಕಾರಣ ಹೃದಯಘಾತದಂತಹ ಭೀಕರ ಕಾಯಿಲೆಗಳಿಗೆ ತುತ್ತಾಗುತ್ತಿರುವರು. ಕೆಲವು ಮಾಧ್ಯಮಗಳು ಸತ್ಯದ ಕಲ್ಪನೆಯಿಂದ ವಿಮುಖರಾಗಿ ಟಿ.ಆರ್.ಪಿ ಗೋಸ್ಕರ ಸುಳ್ಳು ಸುದ್ದಿಗಳು ಹರಡಿಸಿ ಸಮಾಜದಲ್ಲಿ ಅಶಾಂತಿ ವಾತಾವರಣ ನಿರ್ಮಾಣ ಮಾಡುತ್ತಿರುವರು. ಇದರಿಂದ ಎಲ್ಲ ಸಮಾಜಗಳು ಮಾಧ್ಯಮಗಳನ್ನು ನೋಡುವ ದೃಷ್ಟಿಕೋನ ಅನುಮಾನದಿಂದ ಕೂಡಿದೆ. ಕಳೆದು ಹೋಗುತ್ತಿರುವ ನಮ್ಮ ಮೌಲ್ಯಗಳು ಎತ್ತಿ ಹಿಡಿಯಲು ಸದಾ ವಿಶ್ವಕಲ್ಯಾಣ ಬಯಸುತ್ತಿರುವ ಬ್ರಹ್ಮಾಕುಮಾರೀಸ್ ಕೇಂದ್ರಗಳತ್ತ ಮುಖ ಮಾಡಬೇಕೆಂದು ಕರೆಕೊಟ್ಟರು.

ಹಿರಿಯ ಪತ್ರಕರ್ತ ಶಿವಶರಣಪ್ಪ ವಾಲಿ ಮಾತನಾಡಿ, 140 ದೇಶಗಳಲ್ಲಿ ಬ್ರಹ್ಮಕುಮಾರಿ ಸಂಸ್ಥೆ ಕಾರ್ಯನಿರ್ವಹಿಸುತ್ತಿದೆ. ಅಂತಹ ಸಂಸ್ಥೆ ನಮಗಾಗಿ ಪತ್ರಿಕಾ ದಿನಾಚರಣೆ ಮಾಡಲು ಕಾರಣ, ನಿತ್ಯ ಸುದ್ದಿಗಳ ಬೆನ್ನು ಬಿದ್ದು ಮಾನಸಿಕ ಆರೋಗ್ಯದ ಕಡೆ ಗಮನ ಹರಿಸಿದೆ ಹತ್ತಾರು ತಲೆ ನೋವುಗಳೊಂದಿಗೆ ಬದುಕುವ ನಮಗೆ ಮಾನಸಿಕ ಒತ್ತಡ ಕಡಿಮೆ ಮಾಡಲು ಧ್ಯಾನದ ಮಹತ್ವ ತಿಳಿಸಲು ಮತ್ತು ಸಮಾಜದ ಶಾಂತಿ, ಏಕತೆಗೆ ನಮ್ಮ ಪಾತ್ರ ಎಂತಹದ್ದು ಎಂದು ತಿಳಿಸಲು ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಕೇಂದ್ರದ ಹಿರಿಯ ರಾಜಯೋಗ ಶೀಕ್ಷಕಿ ಗುರುದೇವಿ ಅಕ್ಕನವರು, ಪತ್ರಕರ್ತರು ಸುದ್ದಿ ಕೊಡುವುದರೊಂದಿಗೆ ಮಾನವನ ಜೀವನಕ್ಕೆ ಒಳ್ಳೆಯ ಸಂದೇಶಗಳನ್ನು ಕೊಡುವ ಕೆಲಸ ಮಾಡಬೇಕು. ಮಾಧ್ಯಮ ಕ್ಷೇತ್ರ ಬಹು ಸುಂದರ ಹಾಗೂ ಪರಿವರ್ತನೆ ತರಬಲ್ಲ ಕ್ಷೇತ್ರ. ತಾವು ಆಧ್ಯಾತ್ಮದೊಂದಿಗೆ ಸಮಾಜದ ಶಾಂತಿಗಾಗಿ ಕಾರ್ಯನಿರ್ವಹಿಸಬೇಕು ಎಂದರು.

ಈ ವೇಳೆ ಕಾರ್ಯಕ್ರಮದಲ್ಲಿ ಭಾಗಿಯಾದ ಎಲ್ಲ ಪತ್ರಕರ್ತರಿಗೆ ಗೌರವ ಸನ್ಮಾನ ಮಾಡಲಾಯಿತು.

ಯೋಗದೊಂದಿಗೆ ಕಾರ್ಯಕ್ರಮ ಆರಂಭವಾಯಿತು. ಕಲಾವಿದೆ ಶೀತಲ ಪಾಂಚಾಳ ಸ್ವಾಗತ ಗೀತೆ ಪ್ರಸ್ತುತಪಡಿಸಿದರು. ಬಿ.ಕೆ ಮಹಾನಂದಾ ಅಕ್ಕನವರು ರಾಜಯೋಗ ಅಭ್ಯಾಸ ಮಾಡಿಸಿದರು. ಬಿ.ಕೆ ಭಾಗ್ಯಶ್ರೀ ಕಾರ್ಯಕ್ರಮ ನಿರೂಪಿಸಿದರೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶಿವಕುಮಾರ ಸ್ವಾಮಿ ವಂದಿಸಿದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ಮಂಜುನಾಥ ಸುಳ್ಳೊಳ್ಳಿ, ಕೇಂದ್ರದ ಎಲ್ಲ ಸಹೋದರ, ಸಹೋದರಿಯರು, 130ಕ್ಕೂ ಅಧಿಕ ಜಿಲ್ಲೆಯ ಪತ್ರಕರ್ತರು ಕಾರ್ಯಕ್ರಮದಲ್ಲಿದ್ದರು.

ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿ:9449732000

## ನಿವೃತ ನೌಕರರ ಬೇಡಿಕೆಗಳು ಇಡೇರಿಸುವಂತೆ ಪ್ರಧಾನ ಮಂತ್ರಿರವರಿಗೆ ಮನವಿ ಸಲ್ಲಿಕೆ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ: ತಾಲ್ಲೂಕಿನ ನಿವೃತ ಸರಕಾರಿ ನೌಕರರ ಸಂಘದ ತಾಲ್ಲೂಕಾ ಅಧ್ಯಕ್ಷ ರಾಜಣ್ಣಾ ಹುಡಗಿಕರ್ ಹಾಗೂ ರೇವಣಸಿದ್ಧಯ್ಯ ಮಠಪತಿ ಇವರ ನೇತೃತ್ವದಲ್ಲಿ ನಿವೃತ ನೌಕರರ ವಿವಿಧ ಬೇಡಿಕೆಗಳು ಈಡೇರಿಸುವಂತೆ ಪ್ರಧಾನ ಮಂತ್ರಿ ನರೇಂದ್ರ ಮೋದಿರವರಿಗೆ ಬರೆದ ಮನವಿ ಪತ್ರವನ್ನು ಗ್ರೇಡ್-2 ತಹಸೀಲ್ದಾರ ರವರಿಗೆ ಮನವಿ ಪತ್ರ ಸಲ್ಲಿಸಿದರು. ಈ ಕೆಳಕಂಡ ಬೇಡಿಕೆಗಳನ್ನು ಈ ರೀತಿ ಇವೆ. ಪಿಂಚಣಿ ಯೋಜನೆಯು ಪೂರೈಸಲು ಬಯಸುವ ಗುರಿಗಳೆಂದರೆ, ಪಿಂಚಣಿದಾರರು ಬಡತನದಿಂದ ಮುಕ್ತರಾಗಿ, ಸಭ್ಯತೆ, ಸ್ವಾತಂತ್ರ್ಯ ಮತ್ತು ಸ್ವಾಭಿಮಾನ ಮತ್ತು ನಿವೃತ್ತಿ ಪೂರ್ವ ಮಟ್ಟದಲ್ಲಿ ಪ್ರಮಾಣಿತ ಸಮಾನತೆಯೊಂದಿಗೆ ಬದುಕಲು ಸಾಧ್ಯವಾಗುತ್ತದೆ. ನಿರ್ದಿಷ್ಟ ದಿನಾಂಕದ ನಂತರ ನಿವೃತ್ತರಾದವರಿಗೆ ಮಾತ್ರ ಇದು (ಪರಿಷ್ಕೃತ ಪಿಂಚಣಿ ಯೋಜನೆ) ಸಾಕಾಗಿತ್ತು ಆದರೆ ಈಗಾಗಲೇ ನಿವೃತ್ತರಾದವರು ಬೆಲೆ ಏರಿಕೆ ಮತ್ತು ರೂಪಾಯಿಯ ಕುಸಿತದ ಕೊಳ್ಳುವ ಶಕ್ತಿಯ ನೋವನ್ನು ಅನುಭವಿಸಲಿಲ್ಲ ಎಂದು ಪ್ರತಿಪಾದಿಸಲು ಯಾರಾದರೂ ಧೈರ್ಯಶಾಲಿಯಾಗಬಹುದೇ? ಹಿಂದಿನ ಪಿಂಚಣಿದಾರರು ಮತ್ತು ಹೊಸ ಪಿಂಚಣಿದಾರರಿಗೆ ಸಂಬಂಧಿಸಿದಂತೆ ಪಿಂಚಣಿಯಲ್ಲಿ ಸಮಾನತೆಯನ್ನು ಮೇಲಿನ ತೀರ್ಪಿನ ಆಧಾರದ ಮೇಲೆ ನಿರ್ವಹಿಸಲಾಗುತ್ತದೆ.

01-01-2016 ಕ್ಕಿಂತ ಮೊದಲು ನಿವೃತ್ತರಾದ ಮತ್ತು 01-01-2016 ರಂದು ಅಥವಾ ನಂತರ ಇಂದಿನವರೆಗೆ ನಿವೃತ್ತರಾದ ಪಿಂಚಣಿದಾರರಲ್ಲಿ 7 ನೇ ಕೇಂದ್ರ ವೇತನ ಆಯೋಗವು ಈ ಸಮಾನತೆಯನ್ನು ಕಾಯ್ದುಕೊಂಡಿದೆ. ಯಾವುದೇ ತೀರ್ಪಿನಲ್ಲಿ ಯಾವುದೇ ದೋಷವು ಸ್ಪಷ್ಟವಾಗಿದ್ದರೆ, ಸಂಬಂಧಿತ ನ್ಯಾಯಾಲಯದ ಮುಂದೆ ನಿಗದಿತ ಪ್ರಕ್ರಿಯೆಯನ್ನು ಅಳವಡಿಸಿಕೊಳ್ಳುವ ಮೂಲಕ ಅದನ್ನು ಸರಿಪಡಿಸಬಹುದು ಆದರೆ ಸಂಸತ್ತಿನಲ್ಲಿ ಬಹುಮತವನ್ನು ಬಳಸಿಕೊಂಡು ಸ್ಥಾಪಿತ ನ್ಯಾಯವನ್ನು ನಿರಾಕರಿಸಲು ಸ್ಥಾಪಿತ ಕಾನೂನನ್ನು ತಿದ್ದುಪಡಿ ಮಾಡುವ ಮೂಲಕ ಅದು ಆರೋಗ್ಯಕರ ಪರಂಪರೆಯಾಗುವುದಿಲ್ಲ ಎಂದು ಇಲ್ಲಿ ಉಲ್ಲೇಖಿಸಬೇಕು. ಸಂಸತ್ತು ಸಾಮಾನ್ಯ ನಾಗರಿಕರಿಗೆ ಕಲ್ಯಾಣ ಕಾನೂನುಗಳನ್ನು ಮಾಡಲು ಹೆಸರುವಾಸಿಯಾಗಿದೆ, ಸ್ಥಾಪಿತ ಕಲ್ಯಾಣ ಕಾನೂನನ್ನು ನಿರಾಕರಿಸಲು ಅಲ್ಲ. ಈ ಸಂಪ್ರದಾಯವನ್ನು ಅಳವಡಿಸಿಕೊಂಡರೆ, ಮುಂಬರುವ ಪ್ರತಿಯೊಂದು ಸರ್ಕಾರವು ಈ ಪ್ರಕ್ರಿಯೆಯನ್ನು ಅಳವಡಿಸಿಕೊಳ್ಳಬಹುದು, ದುಡಿತ್ತಿರುವ ನೌಕರರಿಗೆ ನಿವೃತ್ತಿ ನಂತರ ಪಿಂಚಣಿ ಯೋಜನೆ ಪಡೆಯಲು ಹಕ್ಕಾಗಿರುವುದು. ಇದು ಭಿಕ್ಷೆಯಲ್ಲ ಪಿಂಚಣಿ ಪಡೆಯುವ ಛಲ ಶಿಕ್ಷಕರು ಕಾಯಕಯೋಗಿ ದೇಶದ ಏಳಿಗೆಗಾಗಿ ದುಡಿಯುವ ಮಾನವ ಸಂಪನ್ಮೂಲ. ರಾಜಕೀಯ ಕ್ಷೇತ್ರದಲ್ಲಿ ರಾಜಕಾರಣ ನಾಯಕರಿಗೆ ಮಾತ್ರ ಪಿಂಚಣಿ ಯೋಜನೆ ಇರುವುದು ಏಕೆ. ಇದು ಯಾವ ನ್ಯಾಯ ಇದನ್ನು ಸರಿಪಡಿಸಲು ಯಾವ ಕ್ರಮವನ್ನು ಜಾರಿಗೊಳಿಸಿ ಪಡೆಯಬೇಕು ? ಇದು ಹೀಗೇಕೆ ಕಾನೂನಲ್ಲಿರುವ ಹಕ್ಕುಗಳಲ್ಲಿ ತಾರತಮ್ಯ ಆಗಿದೆ. ದುಡಿಮೆ ಮಾಡುತ್ತಿರುವ ಅನುದಾನಿತ ಶಿಕ್ಷಕರು ಪಡೆಯುತ್ತಿರುವ ಸೌಲಭ್ಯಗಳು ಬೇರೆ ಯಾಕೆ ಆಗಿರುವುದು ಇದನ್ನು ಆದಷ್ಟು ಬೇಗನೆ ನ್ಯಾಯಯುತವಾಗಿ ಸರಿಪಡಿಸಬೇಕು ವಿನಂತಿಸಿದ್ದಾರೆ. ಈ ಸಂದರ್ಭದಲ್ಲಿ ಮುಖ್ಯ ಕಾರ್ಯದರ್ಶಿ ಲಕ್ಷ್ಮಣಸಿಂಗ್, ಖಾಜಾಂಚಿ ವಿಠಲ್‌ರಾವ್, ಶಾಮರಾವ್, ಝರೆಪ್ಪಾ ದಂಡಿನ್, ಅಮೃತ, ಮಾಣಿಕ ಜಾಜಿ, ಷಿಕೋದ್ದಿನ್, ದಿಗಂಬರ, ಶಂಕರ ನಿಲಮ್ಮನಳ್ಳಿ, ಶಿವಲಿಂಗಪ್ಪಾ, ಜಮೀರ, ಮಲ್ಲಿಕಾರ್ಜುನ ಸ್ವಾಮಿ, ಶಿವರಾಜ, ದತ್ತಾತ್ರೇ ಜಾಧವ ಉಪಸ್ಥಿತರಿದ್ದರು.

## ಅಖಂಡ ವೀಣಾ ಪಾರಾಯಣದಲ್ಲಿ ಪಾಲ್ಗೊಂಡಿದ್ದ ಭಕ್ತರು ಅದೃಷ್ಟವಂತರು : ಸುರೇಶ ಪಾಟೀಲ್ ಕರ್ಕಿಹಳ್ಳಿ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಇತಿಹಾಸ ಪ್ರಸಿದ್ಧ ತಾಲ್ಲೂಕಿನ ಕರ್ಕಿಹಳ್ಳಿಹಲ್ಲಿರುವ ಮೃತ್ಯುಂಜಯೇಶ್ವರ(ಶಿವಚಿದಂಬರೇಶ್ವರ) ಕ್ಷೇತ್ರದಲ್ಲಿ ಗುರುಪೂರ್ಣಿಮೆ ಅಂಗವಾಗಿ ಗುರುವಾರ 21ನೇ ವರ್ಷದ ಮಹಾರಥೋತ್ಸವ ಸಂಭ್ರಮದಿಂದ ನೆರವೇರಿತು. ಕರ್ನಾಟಕ ಹಾಗೂ ಮಹಾರಾಷ್ಟದ ಭಕ್ತರು ಪಾಲ್ಗೊಂಡಿದ್ದು ವಿಶೇಷವಾಗಿತ್ತು.

ರಥೋತ್ಸವಕ್ಕೂ ಮೊದಲು ನಡೆದ ಹೋಮದ ಪೂರ್ಣಾಹುತಿಯ ಬಳಿಕ ಆಶೀರ್ವಚನ ನಿಡಿದ ಕ್ಷೇತ್ರದ ಗುರುಗಳಾದ ಸುರೇಶ ಪಾಟೀಲ್ 'ಕರ್ಕಿಹಳ್ಳಿ ಸಿದ್ಧಿಕ್ಷೇತ್ರವಾಗಿದೆ. ಭಕ್ತರ ಇಷ್ಟಾರ್ಥಗಳನ್ನು ಈಡೇರಿಸುವ ಶಕ್ತಿಯಿದೆ. ಭಕ್ತರು ಪಾದಯತ್ರೆ ಮೂಲಕ ಬಂದಿದ್ದಾರೆ. ಅಖಂಡ ವೀಣಾ ಪಾರಾಯಣದಲ್ಲಿ ಪಾಲ್ಗೊಂಡಿದ್ದ ಭಕ್ತರು ಅದೃಷ್ಟವಂತರು' ಎಂದರು.

'ಭಗವಂತನ ಸೇವೆ ಮಾಡುವುದು ಎಲ್ಲರಿಗೂ ಲಭಿಸುವುದಿಲ್ಲ. ಕೆಲವರಿಗೆ ಮಾತ್ರ ಈ ಅವಕಾಶವಿರುತ್ತದೆ. ದೇವರ ನಾಮಸ್ಮರಣೆಯಿಂದ ಸಕಲ ಕಷ್ಟಗಳಿಗೂ ಪರಿಹಾರ ಲಭಿಸುತ್ತದೆ' ಎಂದು ಹೇಳಿದರು. ಶೇಷಾಚಲ ಭಟ್ ವಣಗೇರಿ ಅವರ ನೇತೃತ್ವದಲ್ಲಿ ಧಾರ್ಮಿಕ ಕಾರ್ಯಕ್ರಮಗಳು ಜರುಗಿದವು.

ರಥೋತ್ಸವಕ್ಕೂ ನಾಲ್ಕು ದಿನಗಳ ಮೊದಲು ಧಾರಣ ಸರಸ್ವತಿ ಹೋಮ, ಮಹಾಲಕ್ಷ್ಮಿ ಹೋಮ, ಆಷಾಢ ಏಕಾದಶಿಯ ಅಂಗವಾಗಿ ಕ್ಷೀರಾಭಿಷೇಕ, ತುಳಸಿ ಆರ್ಚನೆ, ಸತ್ಯನಾರಾಯಣ ವೃತ, ಮಹಾವಿಷ್ಣುಯಾಗ, ದತ್ತ ಮೂಲ ಮಂತ್ರದಿಂದ ದತ್ತಾತ್ರೇಯ ಹೋಮ, ಸಪ್ತಶತಿ ಪಾರಾಯಣ, ನವಚಂಡಿಹೋಮ ಮೃತ್ಯುಂಜೇಶ್ವರ ಕಿರಿಯ ಪ್ರಾಥಮಿಕ ಶಾಲೆಯ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ಅಖಂಡ ವೀಣಾಮಂಗಳ, ಮಹಾರಥೋತ್ಸವದ ರಥಾಂಗ ಹೋಮ, ಆರತಿ, ನೈವೇದ್ಯ, ಅನ್ನಸಂತರ್ಪಣೆ ಮತ್ತು ಸಿಡಿಮದ್ದಿನ ಚಿತ್ತಾರ ಸಂಭ್ರಮದಿಂದ ಜರುಗಿತು. ಶುಕ್ರವಾರ ಬುತ್ತಿಪೂಜೆ ಆಚರಣೆ ನಡೆಯಲಿದೆ.

ದೇವರಭೂಪುರ ಗ್ರಾಮಕ್ಕೆ ಹೆಚ್ಚುವರಿ ಬಸ್ ಬಿಡಲು ಕರ್ನಾಟಕ

## ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆ ತಾಲೂಕು ಅಧ್ಯಕ್ಷ ಜಿಲಾನಿಪಾಶ ಒತ್ತಾಯ.



ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು: ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆ ಲಿಂಗಸುಗೂರು ತಾಲೂಕು ಘಟಕದ ಅಧ್ಯಕ್ಷ ರಾದ ಜಿಲಾನಿ ಪಾಶ ನೇತೃತ್ವದಲ್ಲಿ ಲಿಂಗಸುಗೂರು ಸಾರಿಗೆ ಘಟಕದ ವ್ಯವಸ್ಥಾಪಕರಿಗೆ ದೇವರಭೂಪುರ ಗ್ರಾಮಕ್ಕೆ ಹೆಚ್ಚುವರಿ ಬಸ್ ಬಿಡಲು ಮನವಿಯನ್ನು ಸಲ್ಲಿಸಿದರು. ದೇವರಭೂಪುರ ಗ್ರಾಮಕ್ಕೆ ಸರಿಯಾದ ಸಮಯಕ್ಕೆ ಬಸ್‌ಗಳು ಬರುವುದಿಲ್ಲ ಇದರಿಂದಾಗಿ ಬಸ್‌ಗಳು ತುಂಬ ಬಾಗಿಲಲ್ಲಿ ನೇತಾಡಿಕೊಂಡು ಊರು ತಲುಪವ ಪರಿಸ್ಥಿತಿ ಇದೆ. ಅಲ್ಲದೇ ಶಾಲಾ ಮಕ್ಕಳು ಶಾಲೆಗೆ ತಲುಪಲು ವಿಳಂಭವಾಗುತ್ತಿರುವುದರಿಂದ ಅವರ ವಿದ್ಯಾಭ್ಯಾಸಕ್ಕೆ ತುಂಬ ತೊಂದರೆಯಾಗುತ್ತಿದೆ. ಇದರಿಂದಾಗಿ ಮಕ್ಕಳ ವಿದ್ಯಾಭ್ಯಾಸಕ್ಕೆ. ತುಂಬಾ ತೊಂದರೆಯಾಗುತ್ತಿದೆ ಶಾಲಾ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಬೈಯುತ್ತಿದ್ದಾರೆ. ಅಲ್ಲದೇ? ಹಾಜರಾತಿ ಇಲ್ಲದೇ ಇರುವುದರಿಂದ ಮಕ್ಕಳಿಗೆ ಊಟ ಸಹ ಶಾಲೆಯಲ್ಲಿ ಕೊಡುತ್ತಿಲ್ಲ. ಮಕ್ಕಳು ಉಪವಾಸದಲ್ಲಿಯೇ ವಿದ್ಯಾಭ್ಯಾಸ ಮಾಡುವಂತಹ ಪರಿಸ್ಥಿತಿ ಇದೆ. ಕೊಡಲೇ ದೇವರ ಭೂಪುರ ಗ್ರಾಮಕ್ಕೆ ಹೆಚ್ಚು ವರಿ ಬಸಗಳನ್ನು ಬಿಡಬೇಕು ಹಾಗೂ ಸರಿಯಾದ ಸಮಯಕ್ಕೆ ಬರುವಂತೆ ಮಾಡಬೇಕು ಎಂದು ಈ ಮನವಿಯ ಮೂಲಕ ಎಚ್ಚರಿಸುತ್ತೇವೆ. ಈ ಸಂದರ್ಭದಲ್ಲಿ ಕರವೇ ಸ್ವಾಭಿಮಾನಿ ಸೇನೆಯ ತಿಮ್ಮನಗೌಡ ಪೊಲೀಸ್ ಪಾಟೀಲ ಬಸನಗೌಡ ನನ್ನೆಸಬ ಪರಮಣ್ಣ. ಅಲ್ಲಾಭಕ್ಷ ಮಾನಿಯರ ಕಾರ್ಯಕರ್ತರು ಉಪಸ್ಥಿತರಿದ್ದರು.

### ಬಳ್ಳಾರಿಯಲ್ಲಿ ಸಂಭ್ರಮದ ಹಡಪದ ಅಪ್ಪಣ್ಣ ಜಯಂತ್ಯೋತ್ಸವ

# ವಚನಗಳ ಮೂಲಕ ಸಮಾಜದ ತಾರತಮ್ಯ ತೊಡೆದುಹಾಕಿದ ಶಿವಶರಣ ಹಡಪದ ಅಪ್ಪಣ್ಣ: ಕೆ.ಇ.ಚಿದಾನಂದಪ್ಪ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.10–ಹನ್ನೆರಡನೇ ಶತಮಾನದವಚನ ಚಳುವಳಿ ಮತ್ತು ಸಾಮಾಜಿಕಕ್ರಾಂತಿಯ ಹರಿಕಾರರಲ್ಲಿ ಒಬ್ಬರಾಗಿದ್ದ ಶಿವಶರಣ ಹಡಪದ ಅಪ್ಪಣ್ಣನವರು, ತಮ್ಮ ವಚನಗಳ ಮೂಲಕ ಸಮಾಜದ ತಾರತಮ್ಯ ಹೋಗಲಾಡಿಸಿದ್ದವರು ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಅವರು ಹೇಳಿದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮದಿರದಲ್ಲಿ ಏರ್ಪಡಿಸಿದ್ದ ಶಿವಶರಣ ಹಡಪದ ಅಪ್ಪಣ ಜಯಂತಿ ಕಾರ್ಯಕ್ರಮವನ್ನು ಹಡಪದ ಅಪ್ಪಣ ಅವರ ಭಾವಚಿತ್ರಕ್ಕೆಪುಷ್ಪಾರ್ಚನೆಮಾಡುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಹಡಪದ ಅಪ್ಪಣ್ಣನವರು ಬಸವಣ್ಣನವರ ಬಲಗೈ ಬಂಟನೆಂದೇಹೆಸರು ಪಡೆದಿದ್ದವರು. ಬಸವಣ್ಣನವರಿಗೆ ಅಪ್ಪಣ್ಣನವರು ಪ್ರಾಣವೇ ಆಗಿದ್ದರೆಂಬುದಕ್ಕೆ ಕಲ್ಯಾಣಕ್ರಾಂತಿಯ ಕೊನೆಯ ದಿನಗಳನ್ನು ತಿಳಿದುಕೊಂಡರೆ ಗೊತ್ತಾಗುತ್ತದೆ. "ಅಪ್ಪಣ್ಣ ಪ್ರಿಯ ಚನ್ನಬಸವಣ್ಣ" ಎಂಬ ಅಂಕಿತನಾಮದಿಂದ ಸುಮಾರು 250 ಕ್ಕೂ ಹೆಚ್ಚು ವಚನಗಳನ್ನು ರಚಿಸಿದ್ದಾರೆ ಎಂದು ತಿಳಿಸಿದರು.

12 ನೇ ಶತಮಾನದ ಕಾಲದಲ್ಲಿ ಮೂಢನಂಬಿಕೆಯನ್ನು ಹೋಗಲಾಡಿಸುವುದಕ್ಕಾಗಿಯೇ ಬಸವಣ್ಣನವರು ಯಾರೇ ಬಂದರೂ ಮೊದಲು ಹಡಪದ ಅಪ್ಪಣ್ಣನವರನ್ನು ನೋಡಿಕೊಂಡು ಬರಬೇಕೆಂಬ ನಿಯಮವನ್ನೇ ಮಾಡಿದ್ದರೆಂಬ ಪ್ರತೀತಿ ಇದೆ. ಇವರ ಧರ್ಮಪತ್ನಿ ಲಿಂಗಮ್ಮನವರೂ ಸಹ ಮಹಾನ್ ವಚನಗಾರ್ತಿಯಾಗಿದ್ದರು. ಇವರ ಊರು ವಿಜಯಪುರ ಜಿಲ್ಲೆಯ ತಂಗಡಗಿಯಾಗಿದ್ದು, ಅಲ್ಲಿಯೇ ಇವರ ಸಮಾಧಿಯೂ ಸಹ ಇದೆ. ಸಮಾಜದ ಅಸ್ಪೃಶ್ಯತೆ ಮತ್ತು ತಾರತಮ್ಯವನ್ನು ವಚನಗಳ ಮೂಲಕ ತೊಡೆದುಹಾಕಿದ ಮಹನೀಯರ ಆದರ್ಶ ತತ್ವಗಳನ್ನು ಪಾಲಿಸೋಣ ಎಂದು ಹೇಳಿದರು. ಬಳ್ಳಾರಿಯ ನಿವೃತ್ತಿ ಮುಖ್ಯಗುರುಗಳಾದ ಸಿ.ಕೊಟ್ರಪ್ಪ ಅವರು ವಿಶೇಷ ಉಪನ್ಯಾಸದಲ್ಲಿ ಮಾತನಾಡಿ, ಬಸವಣ್ಣನವರ ಬಾಲ್ಯದ ಒಡನಾಡಿಗಳಾಗಿದ್ದ ಅಪ್ಪಣ್ಣನವರು ವಿಶ್ವದ ಪ್ರಪ್ರಥಮ ಪ್ರಜಾಪ್ರಭುತ್ವದ ಸಂಸತ್ತು ಎಂದೇ ಹೆಸರಾದ "ಅನುಭವ ಮಂಟಪ"ದಲ್ಲಿ ಬಸವಣ್ಣನವರಿಗೆ ಪ್ರಧಾನ ಕಾರ್ಯದರ್ಶಿಗಳಾಗಿ, ಕಾರ್ಯನಿರ್ವಹಿಸುತ್ತಿದ್ದರು ಎಂದು ತಿಳಿಸಿದರು. ಹಡಪದ ಅಪ್ಪಣ್ಣನವರ ತಂದೆ ಚೆನ್ನವೀರಪ್ಪ ತಾಯಿ ದೇವಕಮ್ಮ ದಂಪತಿಗಳ ಮಗನಾಗಿ ವಿಜಯಪುರ ಜಿಲ್ಲೆಯ ಬಸವನಬಾಗೇವಾಡಿ ತಾಲ್ಲೂಕಿನ ಮಸಬಿನಾಳ ಗ್ರಾಮದಲ್ಲಿ ಜನಿಸಿದರು. ಇವರ ಕಾಲವನ್ನು ಕ್ರಿ.ಶ 1,160 ಎಂದು ಗುರುತಿಸಲಾಗುತ್ತದೆ. ಅನುಭವ ಮಂಟಪದ ಮಹಾನುಭಾವಿಯಾದ ಅಪ್ಪಣ್ಣನವರ ವಚನಗಳಲ್ಲಿ ಷಟಸ್ಥಲದ ವಿಷಯಗಳು ಪ್ರಮುಖವಾಗಿ ಪ್ರಸ್ತಾಪವಾಗಿವೆ. ಪ್ರಭುದೇವ, ಅಕ್ಕಮಹಾದೇವಿ ಇನ್ನಿತರ ಮಹಾನ್ ಶರಣ–ರಂತೆ ಅಪ್ಪಣ್ಣ ಸಹ ಬೆಡಗಿನ ವಚನಗಳನ್ನು ರಚಿಸಿದ್ದು, ಕಾಯಕನಿಷ್ಠೆ, ದಾಸೋಹನಿಷ್ಠೆ, ಭಕ್ತಿ, ವೈರಾಗ್ಯ, ಆಚಾರ–ವಿಚಾರಗಳನ್ನು ವೈಚಾರಿಕತೆಯ ನೆಲೆಯಲ್ಲಿ ವಿಡಂಬನಾತ್ಮಕವಾಗಿ ವಚನಗಳಲ್ಲಿ ರಚಿಸಿದ್ದಾರೆ. ಈ ವಚನಗಳು ಅಜ್ಞಾನಿಗಳಿಗೆ ಸನ್ಮಾರ್ಗವನ್ನು ತೋರಿಸುವ ದಾರಿದೀಪಗಳಾಗಿವೆ ಎಂದರು.

ಇದೇ ವೇಳೆ ಶ್ರೀ ಶಿವಲಿಂಗ ಶಿವಾಚಾರ್ಯ ಜಂಗಮ ಹೊಸಳ್ಳಿ ಅವರು ಕಾರ್ಯಕ್ರಮದ ದಿವ್ಯಸಾನಿಧ್ಯ ವಹಿಸಿ ಆರ್ಶೀವಚನ ನೀಡಿದರು.

ಕಾರ್ಯಕ್ರಮದಲ್ಲಿ ಸಿರುಗುಪ್ಪದ ವೀರೇಶ್ ದಳವಾಯಿ ಅವರ ತಂಡದಿಂದ ವಚನ ಸಂಗೀತ ಪ್ರಸ್ತುತ ಪಡಿಸಿದರು ಹಾಗೂ ಸಿಂಧುವಾಳದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಕೋಲಾಟ ಕಲೆಯ ಪ್ರದರ್ಶನ ನೀಡಿದ ಮಕ್ಕಳಿಗೆ ಗಣ್ಯರಿಂದ ಸನ್ಮಾನಿಸಿಲಾಯಿತು.

ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕನಿರ್ದೇಶಕಬಿ.ನಾಗರಾಜ, ಬಳ್ಳಾರಿ ಜಿಲ್ಲಾ ಹಡಪದ ಅಪ್ಪಣ್ಣ ಸೇವಾ ಸಮಿತಿ ಅಧ್ಯಕ್ಷ ಹೆಚ್. ರುದ್ರಪ್ಪ, ಕುರುಗೋಡು ತಾಲ್ಲೂಕು ಹಡಪದ ಅಪ್ಪಣ್ಣ ಸೇವಾ ಸಮಿತಿ ಅಧ್ಯಕ್ಷ ಹೆಚ್. ಮಂಜುನಾಥ, ಬಳ್ಳಾರಿ ತಾಲ್ಲೂಕು ಹಡಪದ ಅಪ್ಪಣ್ಣ ಸೇವಾ ಸಮಿತಿ ಅಧ್ಯಕ್ಷ ಸದಾಶಿವ ಸೇರಿದಂತೆ ಸಮಾಜದ ಮುಖಂಡರು, ಸಾರ್ವಜನಿಕರು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

**ಸಂಭ್ರಮದ ಮೆರವಣಿಗೆ:**

ಶಿವಶರಣ ಹಡಪದ ಅಪ್ಪಣ್ಣ ಅವರ ಜಯಂತ್ಯೋತ್ಸವದ ಅಂಗವಾಗಿ ನಗರದಲ್ಲಿ ಸಂಭ್ರಮದ ಮೆರವಣಿಗೆ ನಡೆಯಿತು. ಮೆರವಣಿಗೆಯಲ್ಲಿ ವಿವಿಧ ಸಾಂಸ್ಕೃತಿಕ ಕಲಾತಂಡಗಳು ಗಮನಸೆಳೆದವು. ಮೆರವಣಿಗೆಯು ನಗರದ ಜಿಲ್ಲಾಧಿಕಾರಿಗಳ ಕಚೇರಿ ಆವರಣದಿಂದ ಆರಂಭವಾಗಿ ಗಡಿಗಿ ಚೆನ್ನಪ್ಪ ವೃತ್ತ, ಬೆಂಗಳೂರು ರಸ್ತೆ, ಹಳೇ ಬ್ರೂಸ್‌ಪೇಟೆ ಪೊಲೀಸ್ ಠಾಣೆ ರಸ್ತೆ, ತೇರು ಬೀದಿ, ಹೆಚ್.ಆರ್.ಗವಿಯಪ್ಪ ವೃತದ ಮೂಲಕ ಡಾ.ಜೋಳದರಾಶಿ ದೊಡ್ಡನಗೌಡ ರಂಗಮದಿರದ ವೇದಿಕೆ ಸಭಾಂಗಣಕ್ಕೆ ತಲುಪಿ ಸಂಪನ್ನಗೊಂಡಿತು.

# ವ್ಯಕ್ತಿ ಕಾಣೆ; ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.10–ನಗರದ ಮಿಲ್ಲರ್ ಪೇಟೆಯ ಕೋರ್ಟ್ ಮೊಹಲ್ಲಾ ಹತ್ತಿರ ನಿವಾಸಿಯಾದ ಅಬ್ದುಲ್ ಖಾಲಿದ್ ಎನ್ನುವ 54 ವರ್ಷದ ವ್ಯಕ್ತಿಯು ಜು.05 ರಂದು ಕಾಣೆ–ಯಾಗಿದ್ದು, ಈ ಕುರಿತು ಬ್ರೂಸ್ ಪೇಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಾಣೆಯಾದ ವ್ಯಕ್ತಿಯ ಪತ್ತೆಗೆ ಸಹಕರಿಸಬೇಕು ಎಂದು ಠಾಣಾಧಿಕಾರಿ ಮನವಿ ಮಾಡಿದ್ದಾರೆ.

ಚಹರೆ: ಅಂದಾಜು 5.8 ಅಡಿ ಎತ್ತರ, ಕೋಲುಮುಖ, ಎಣ್ಣೆಗೆಂಪು ಮೈಬಣ್ಣ, ಬಲಕಣ್ಣಿನ ಹುಬ್ಬಿನ ಮೇಲೆ ಒಂದು ಪುಲ್‌ಪುರೆ ಇರುತ್ತದೆ. ಬಾಯಿಯಲ್ಲಿ ಕೋರೆಹಲ್ಲು ಬಿದ್ದಿದೆ. ಕಾಣೆಯಾದ ಸಂದರ್ಭದಲ್ಲಿ ಬಿಳಿಗೀರಿ ಇರುವ ಕಪ್ಪು ಬಣ್ಣದ ಅಂಗಿ, ಕಪ್ಪು ಬಣ್ಣದ ಪ್ಯಾಂಟ್ ಧರಿಸಿರುತ್ತಾನೆ. ಕನ್ನಡ, ತೆಲುಗು, ಹಿಂದಿ, ಉರ್ದು, ಇಂಗ್ಲೀಷ್ ಭಾಷೆ ಮಾತನಾಡುತ್ತಾನೆ.

ಮೇಲ್ಕಂಡ ಚಹರೆ ಗುರುತುಗಳುಳ್ಳ ವ್ಯಕ್ತಿಯ ಬಗ್ಗೆ ಮಾಹಿತಿ ಸಿಕ್ಕಲ್ಲಿ ಬ್ರೂಸ್‌ಪೇಟೆ ಪೊಲೀಸ್ ಠಾಣೆಯ ದೂ.08392–272022, ಪಿಐ ಮೊ. 9480803045 ಮತ್ತು ಬಳ್ಳಾರಿ ಪೊಲೀಸ್ ಕಂಟ್ರೋಲ್ ರೂಂ.08392–258100 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಹಿಳೆ ನಾಪತ್ತೆ: ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.10–ಕುರುಗೋಡು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಹನುಮಂತಮ್ಮ ಎನ್ನುವ 46 ವರ್ಷದ ಮಹಿಳೆಯು ಮಾರ್ಚ್ 20 ರಂದು ಕಾಣೆಯಾಗಿರುವ ಕುರಿತು ಪ್ರಕರಣ ದಾಖಲಾಗಿದ್ದು, ಪತ್ತೆಗೆ ಸಹಕರಿಸಬೇಕು ಎಂದು ಠಾಣಾಧಿಕಾರಿ ಮನವಿ ಮಾಡಿದ್ದಾರೆ.

ಚಹರೆ ಗುರುತು: ಎತ್ತರ 5 ಅಡಿ, ಕೋಲು ಮುಖ, ಗೋದಿ ಮೈಬಣ್ಣ, ತೆಳುವಾದ ಮೈಕಟ್ಟು ಹೊಂದಿದ್ದು, ಕಾಣೆಯಾದ ಸಂದರ್ಭದಲ್ಲಿ ನೀಲಿ ಬಣ್ಣದ ಸೀರೆ, ನೀಲಿ ಬಣ್ಣದ ಕುಪ್ಪಸ ಧರಿಸಿರುತ್ತಾಳೆ. ಕನ್ನಡ, ತೆಲುಗು ಭಾಷೆ ಮಾತನಾಡುತ್ತಾಳೆ.

ಕಾಣೆಯಾದ ಮಹಿಳೆಯ ಬಗ್ಗೆ ಸುಳಿವು ಸಿಕ್ಕಲ್ಲಿ ಕುರುಗೋಡು ಪೊಲೀಸ್ ಠಾಣೆಯ ಪಿಎಸ್‌ಐ ದೂ.08392–263433, ಮೊ.9480803051, ಸಿಪಿಐ ಮೊ.9480803039 ಮತ್ತು ಬಳ್ಳಾರಿ ಎಸ್‌ಪಿ ಕಚೇರಿ ದೂ.08392–258400 ಗೆ ಸಂಪರ್ಕಿಸಿ ಮಾಹಿತಿ ನೀಡಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪರಿಶಿಷ್ಟ ಜಾತಿಯ ಕಾನೂನು ಪದವಿಧರರಿಗೆ ವೃತ್ತಿ ತರಬೇತಿಗಾಗಿ ಅರ್ಜಿ ಆಹ್ವಾನ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಸಮಾಜ ಕಲ್ಯಾಣ ಇಲಾಖೆಯಿಂದ 2024–25 ಮತ್ತು 2025–26ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ ಕಾನೂನು ಪದವಿಧರರಿಗೆ ವೃತ್ತಿ ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. 2024–25 ಮತ್ತು 2025–26ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ ಕಾನೂನು ಪದವೀಧರರಿಗೆ ವೃತ್ತಿ ತರಬೇತಿ ನೀಡಲು ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಇವರ ಪತ್ರದನ್ವಯ ವರ್ಷದ ಎಲ್ಲಾ ದಿನಗಳು ಅಂದರೆ 365 ದಿನಗಳು ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಗಿದ್ದು, ಅರ್ಹ ಪರಿಶಿಷ್ಟ ಜಾತಿಯ ಅಭ್ಯರ್ಥಿಗಳು ಸಮಾಜ ಕಲ್ಯಾಣ ಇಲಾಖೆಯ ವೆಬ್‌ಸೈಟ್ https://swd.karnataka.gov.in ಮೂಲಕ ಅರ್ಜಿ ಸಲ್ಲಿಸಬಹುದು. ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ ನಂತರ ಆನ್‌ಲೈನ್ ಅರ್ಜಿ ಪ್ರತಿಯೊಂದಿಗೆ ಸೂಕ್ತ ದಾಖಲಾತಿಗಳನ್ನು ಸೆಪ್ಟೆಂಬರ್ 10ರೊಳಗೆ ತಮ್ಮ ತಾಲೂಕಿನ ಸಹಾಯಕ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ ಕಛೇರಿಗೆ ಕಡ್ಡಾಯವಾಗಿ ಸಲ್ಲಿಸಬೇಕು ಎಂದು ಕೊಪ್ಪಳ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಯಲಬುರ್ಗಾ ಗಣಿತಶಾಸ್ತ್ರದ ಸಹ ಪ್ರಾಧ್ಯಾಪಕಿ ನಂದಾಗೆ ಪಿಎಚ್‌ಡಿ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಯಲಬುರ್ಗಾದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಗಣಿತಶಾಸ್ತ್ರದ ಸಹ ಪ್ರಾಧ್ಯಾಪಕಿ ನಂದಾ ಅವರಿಗೆ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯವು ಪಿಎಚ್.ಡಿ ಪದವಿ ನೀಡಿದೆ.

ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಗಣಿತಶಾಸ್ತ್ರ ಅಧ್ಯಯನ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ.ಅಶ್ವಿನಕುಮಾರ ಅವರ ಮಾರ್ಗದರ್ಶನದಲ್ಲಿ, ಯಲಬುರ್ಗಾದ ಗಣಿತಶಾಸ್ತ್ರದ ಸಹ ಪ್ರಾಧ್ಯಾಪಕಿ ನಂದಾ ಅವರು ಮಂಡಿಸಿದ "ಸಮ್ ಸ್ಟಡೀಸ್ ಆನ್ ಹೀಟ್ ಆ್ಯಂಡ್ ಮಾಸ್ ಟ್ರಾನ್ಸರ್ ಕ್ಯಾರಕ್ಟರಿಸ್ಟಿಕ್ಸ್ ಆಫ್ ಮ್ಯಾಗ್ನೆಟೋಹೈಡ್ರೊಡೈನಮಿಕ್ ನಾನ್ ನ್ಯೂಟೋನಿಯನ್ ಫ್ಲೂಯಿಡ್ ಫ್ಲೂಸ್" ಎಂಬ ಮಹಾಪ್ರಬಂಧಕ್ಕೆ ಡಾಕ್ಟರೇಟ್ ಪದವಿಯನ್ನು ನೀಡಲಾಗಿರುತ್ತದೆ ಎಂದು ಬಳ್ಳಾರಿಯ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ತಿಳಿಸಿದೆ.

### ಜು.11 ರಂದು ವಿಶ್ವ ಜನಸಂಖ್ಯೆ ದಿನಾಚರಣೆ ಅಂಗವಾಗಿ ಜಾಗೃತಿ ಜಾಥಾ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.10–ವಿಶ್ವಜನಸಂಖ್ಯೆ ದಿನಾಚರಣೆ ಅಂಗವಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಜು.11 ರಂದು ಬೆಳಿಗ್ಗೆ 09.30 ಗಂಟೆಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ ಮುಂಭಾಗದಿಂದ ಜಿಲ್ಲಾ ಮಟ್ಟದ ಜಾಗೃತಿ ಜಾಥಾ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ತಿಳಿಸಿದ್ದಾರೆ.

### ಜು.16 ರಂದು ಜಿಲ್ಲಾ ಮಟ್ಟದ ಸಮನ್ವಯ ಮತ್ತು ಪರಿಶೀಲನಾ ಸಮಿತಿ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.10–ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವಿವಿಧಯೋಜನೆ ಮತ್ತು ಕಾಯ್ದೆಗಳ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿಯವರ ಅಧ್ಯಕ್ಷತೆಯಲ್ಲಿ ಜು.16 ರಂದು ಬೆಳಿಗ್ಗೆ 10.30 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಸಮನ್ವಯ ಮತ್ತು ಪರಿಶೀಲನಾ ಸಮಿತಿ ಸಭೆ ಏರ್ಪಡಿಸಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

# ಜು.12 ರಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.10–ಬಳ್ಳಾರಿನಗರಜೆಸ್ಕಾಂ ಉಪವಿಭಾಗ–2 ರ ವ್ಯಾಪ್ತಿಯಲ್ಲಿ ವಿದ್ಯುತ್ ಕಂಬಗಳ ಬದಲಾವಣೆ ಕಾರ್ಯ ಕೈಗೊಳ್ಳುತ್ತಿರುವುರಿಂದ ಜು.12 ರಂದು ಬೆಳಿಗ್ಗೆ 08 ಗಂಟೆಯಿಂದ 06 ಗಂಟೆಯವರೆಗೆ ಎಫ್–73 ಫೀಡರ್ ವ್ಯಾಪ್ತಿಯ ಬಸವನಕುಂಟೆ, ಕೋಟೆ ಪ್ರದೇಶ, ಮೇದಾರ್ ಓಣಿ ಸೇರಿದಂತೆ ಮುಂತಾದ ಪ್ರದೇಶದಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಮತ್ತು ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲಾಧ್ಯಕ್ಷರಾಗಿ ಅಳವಂಡಿಯ ಸುರೇಶ ದಾಸರೆಡ್ಡಿ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಬೆಂಗಳೂರಿನ ಕೆಪಿಸಿಸಿ ಕಚೇರಿಯಲ್ಲಿ ಕೆಪಿಸಿಸಿ ಅಧ್ಯಕ್ಷರಾದ ಶ್ರೀ ಡಿ ಕೆ ಶಿವಕುಮಾರ್ ಅವರ ಅನುಮೋದನೆ ಹಾಗು ಶಾಸಕರಾದ ಶ್ರೀ ಕೆ ರಾಘವೇಂದ್ರ ಹಿಟ್ನಾಳ ಮತ್ತು ಡಿಸಿಸಿ ಅಧ್ಯಕ್ಷರಾದ ಶ್ರೀ ಅಮರೇಗೌಡ ಪಾಟೀಲ್ ಬಯ್ಯಾಪುರ್ ಅವರ ಶಿಫಾರಸ್ಸಿನ ಮೇರೆಗೆ ಅಳವಂಡಿ ಗ್ರಾಮದ ಕಾಂಗ್ರೆಸ್ ಮುಖಂಡರಾದ ಸುರೇಶರಡ್ಡಿ ವಿ ದಾಸರಡ್ಡಿ ಅವರನ್ನು ರಾಜೀವ್ ಗಾಂಧಿ ಪಂಚಾಯತ್ ರಾಜ್ ಸಂಘಟನೆಯ (RGPRS) ಕೊಪ್ಪಳ ಜಿಲ್ಲಾ ಅಧ್ಯಕ್ಷರನ್ನಾಗಿ ನೇಮಕ ಮಾಡಿ ಖಉಕಖಖ ನ ರಾಜ್ಯಾಧ್ಯಕ್ಷರಾದ ಶ್ರೀ ವಿಜಯ್ ಸಿಂಗ್ ಅವರು ಆದೇಶ ಹೊರಡಿಸಿದ್ದಾರೆ.

ಪಕ್ಷದ ಸಂಘಟನೆಯ ದೃಷ್ಟಿಯಿಂದ ಹಾಗೂ ಪಂಚಾಯತ್ ರಾಜ್ ವ್ಯವಸ್ಥೆಗೆ ಕಾಂಗ್ರೆಸ್ ಪಕ್ಷದ ಕೊಡುಗೆಗಳನ್ನು ಜನತೆಗೆ ಮುಟ್ಟಿಸುವ ಹಾಗು ಜಾಗೃತಿ ಮೂಡಿಸುವ ಜವಾಬ್ದಾರಿ ಇವರ ಮೇಲೆ ಇದೆ ಪಕ್ಷದ ತತ್ವ ಸಿದ್ದಾಂತಗಳಿಗೆ ಬದ್ದರಾಗಿ ನಿಷ್ಠಾವಂತರಾಗಿ ಕಾರ್ಯನಿರ್ವಹಿಸುವ ದಾಸರಡ್ಡಿಯವರ ನೇಮಕ ಪಕ್ಷ ಸಂಘಟನೆಗೆ ಸಹಕಾರಿಯಾಗಲಿದೆ ಎಂದು ವಿಜಯಸಿಂಗ್ ತಿಳಿಸಿದ್ದಾರೆ.

# ಜು.12 ರಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.10–ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ–1ರ ವ್ಯಾಪ್ತಿಗೆ ಬರುವ 220/11ಕೆವಿ ಅಲ್ಲಿಪುರ ವಿದ್ಯುತ್ ವಿತರಣ ಕೇಂದ್ರದಿಂದ ವಿದ್ಯುತ್ ಸರಬರಾಜಾಗುವ ಬ್ಯಾಂಕ್–1, 2 ರ ಫೀಡರ್‌ಗಳಾದ ಎಫ್–34 ಹಾಗು ಎಫ್–72 ರ ತುರ್ತು ನಿರ್ವಹಣಾ ಕಾಮಗಾರಿ ಕೈಗೊಳ್ಳುತ್ತಿರುವುದರಿಂದ ಜು.12 ಬೆಳಿಗ್ಗೆ 10 ಗಂಟೆಯಿಂದ ಸಂಜೆ 06 ಗಂಟೆಯವರೆಗೆ ನಗರದ ವಿವಿಧೆಡೆ ವಿದ್ಯುತ್ ವ್ಯತ್ಯಯವಾಗಲಿದೆ.

**ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು:** ನಗರದ ಮೊದಲನೇ ರೈಲ್ವೇ ಗೇಟ್, ಕೊರಚ ಸ್ಟ್ರೀಟ್, ಉರ್ದು ಟ್ರೈನಿಂಗ್ ಸ್ಕೂಲ್, ಕಡಪಗೆರೆ, ಟೈಲರ್ ಸ್ಟ್ರೀಟ್, ನಂದಿ ಕಾಲೋನಿ, ಸೂರ್ಯ ಕಾಲೋನಿ, ರೆಹಮಬಾದ್ ಲೇಔಟ್, ವಡ್ಡೆ ನಾಗಪ್ಪ ಕಾಲೋನಿ, ಎಚ್. ಆರ್.ಜಿ. ಕಾಲೋನಿ, ತಿಲಕ್ ನಗರ್, ಕಾಂಟೋನ್‌ಮೆಂಟ್, ಸುಧಾ ಕ್ರಾಸ್, ಜಯ ನಗರ, ರಹಿಮಬಾದ್ ಕಾಲೋನಿ, ನಳಂದ ಕಾಲೇಜ್, ವಿಜಯನಗರ ಕಾಲೋನಿ, ಕೆ.ಹೆಚ್.ಬಿ ಕಾಲೋನಿ, ಜಗನ್ನಾಥ ಮಂದಿರ, ಭಾಸ್ಕರ ನಾಯ್ಡು, ಸೆಂಟ್ ಜೋಸೆಫ್ ಸ್ಕೂಲ್, ರೇಡಿಯೋ ಪಾರ್ಕ್, ತಿಲಕ್ ನಗರ ಸೇರಿದಂತೆ ಇನ್ನೂ ಮುಂತಾದ ಏರಿಯಾಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಹಾಗಾಗಿ ಸಾರ್ವಜನಿಕರು ಮತ್ತು ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಕಾರ್ಯನಿರ್ವಾಹಕ ಅಭಿಯಂತರರು ಸಹಕರಿಸಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜುಲೈ 11 ರಂದು ನೇರ ಸಂದರ್ಶನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 10– ಇಲ್ಲಿನ ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ವಿನಿಮಯ ಇಲಾಖೆ ಕಚೇರಿಯಲ್ಲಿ ಜುಲೈ 11ರ ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 2 ಗಂಟೆವರೆಗೆ ನೇರ ಸಂದರ್ಶನವನ್ನು ಆಯೋಜನೆ ಮಾಡಿಲಾಗಿದ್ದು, ಆಸಕ್ತ ಯುವಕ ಅಥವಾ ಯುವತಿಯರು ಭಾಗಹಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿಗಳು ತಿಳಿಸಿದ್ದಾರೆ. ನೇರ ಸಂದರ್ಶನದಲ್ಲಿ ಅನೇಕ ಖಾಸಗಿ ಸಂಸ್ಥೆಗಳು ಭಾಗಿಯಾಗುತ್ತಿದ್ದು, ತಮ್ಮ ಕಂಪನಿಯಲ್ಲಿ ಖಾಲಿ ಇರುವ ಹುದ್ದೆಗಳನ್ನು ನೇರವಾಗಿ ಭರ್ತಿ ಮಾಡಿಕೊಳ್ಳಲಿದ್ದಾರೆ.

18 ರಿಂದ 28 ವರ್ಷಗಳವರೆಗಿನ ಎಸ್.ಎಸ್.ಎಲ್.ಸಿ, ಪಿ.ಯು.ಸಿ ಹಾಗೂ ಎಲ್ಲಾ ಪದವೀಧರ ಅಭ್ಯರ್ಥಿಗಳು ಭಾಗವಹಿಸಬಹುದಾಗಿದೆ. ವಿದ್ಯಾರ್ಹತೆಯ ಅಂಕ ಪಟ್ಟಿಗಳ ಜೆರಾಕ್ಸ್ ಪ್ರತಿಗಳು ಮತ್ತು ಬಯೋಡಾಟಾ, ಆಧಾರ್ ಕಾರ್ಡ್ ಪ್ರತಿ ಹಾಗೂ ಭಾವಚಿತ್ರಗಳೊಂದಿಗೆ ಆಗಮಿಸಬೇಕು. ನೇರ ಸಂದರ್ಶನದಲ್ಲಿ ಭಾಗವಹಿಸಲು ಯಾವುದೇ ಶುಲ್ಕವಿರುವುದಿಲ್ಲ,

ಬದಲಾಗಿ ತಮ್ಮ ಸ್ವಂತ ಖರ್ಚಿನಲ್ಲಿ ಈ ಸಂದರ್ಶನಕ್ಕೆ ಹಾಜರಾಗಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ; 08532–231684, 9008211750, 8095125775ಗೆ ಸಂಪರ್ಕಿಸುವಂತೆ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ನವೀನ ಕುಮಾರ್ ಸಂಗೇಪಾಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕುಟುಂಬ ಕಲ್ಯಾಣ ವಿಧಾನಗಳ ಮೂಲಕ ಹೆರಿಗೆಗಳ ನಡುವೆ ಅಂತರ ಕಾಪಾಡಿಕೊಳ್ಳಿ – ಡಾ. ರವೀಂದ್ರನಾಥ್



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಪ್ರತಿಯೊಬ್ಬ ಹೆರಿಗೆಯಾದ ಹೆಣ್ಣುಮಕ್ಕಳು ಯಾವುದಾದರೂ ಒಂದು ಕುಟುಂಬ ಕಲ್ಯಾಣ ಯೋಜನೆಯ ವಿಧಾನಗಳನ್ನ ಬಳಸಿಕೊಂಡು ಹೆರಿಗೆಗಳ ನಡುವೆ ಅಂತರವನ್ನು ಕಾಪಾಡಿಕೊಳ್ಳಬೇಕು ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿ ಡಾ. ರವೀಂದ್ರನಾಥ್ ಎಂ.ಹೆಚ್ ಹೇಳಿದರು. ಅವರು ಬುಧವಾರ ತಾಲ್ಲೂಕಿನ ಕೂಕನಪಳ್ಳಿ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ತಾಲೂಕಾ ಆರೋಗ್ಯಾಧಿಕಾರಿಗಳ ಕಾರ್ಯಾಲಯ ಹಾಗೂ ಕೂಕನಪಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರದ ಸಂಯುಕ್ತಾಶ್ರಯದಲ್ಲಿ ವಿಶ್ವ ಜನಸಂಖ್ಯಾ ದಿನಾಚರಣೆ ಅಂಗವಾಗಿ "ದಂಪತಿ ಸಂಪರ್ಕ ಪಾಕ್ಷಿಕ" ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಪ್ರತಿ ವರ್ಷ ಜುಲೈ 11 ರಂದು "ವಿಶ್ವ ಜನಸಂಖ್ಯಾ ದಿನಾಚರಣೆ" ಕಾರ್ಯಕ್ರಮವನ್ನು ಆಚರಿಸಲಾಗುತ್ತದೆ. ಅದರ ಅಂಗವಾಗಿ ಜಿಲ್ಲೆಯಲ್ಲಿ 2025ರ ಜೂನ್ 27 ರಿಂದ ಜುಲೈ 10ರ ವರೆಗೆ ವಿವಿಧ ಆರೋಗ್ಯ ಸಂಸ್ಥೆಗಳಲ್ಲಿ "ದಂಪತಿ ಸಂಪರ್ಕ ಪಾಕ್ಷಿಕ" ಜಾಗೃತಿ ಕಾರ್ಯಕ್ರಮ ಆಚರಿಸಿ, ಕುಟುಂಬ ಕಲ್ಯಾಣ ಯೋಜನೆಯ ತಾತ್ಕಾಲಿಕ ಮತ್ತು ಶಾಶ್ವತ ವಿಧಾನಗಳ ಬಗ್ಗೆ ಅರ್ಹ ದಂಪತಿಗಳಿಗೆ ಅರಿವು ಮೂಡಿಸಿದೆ. ಒಂದು ಮಗುವಿನಿಂದ ಇನ್ನೊಂದು ಮಗುವಿಗೆ ಕನಿಷ್ಠ 3 ವರ್ಷ ಅಂತರ ಕಾಪಾಡಬೇಕು. ಈ ಅವಧಿಯಲ್ಲಿ ಕುಟುಂಬ ಕಲ್ಯಾಣ ಯೋಜನೆಯ ತಾತ್ಕಾಲಿಕ ವಿಧಾನಗಳಾದ ವಂಕಿ ಅಳವಡಿಸಿಕೊಳ್ಳುವುದು, 3 ತಿಂಗಳಿಗೊಂದು ಅಂತರ ಚುಚ್ಚುಮದ್ದು ಹಾಕಿಸಿಕೊಳ್ಳುವುದು, ನುಂಗುವ ಮಾತ್ರೆ ತೆಗೆದುಕೊಳ್ಳುವುದು, ಪುರುಷರು ನಿರೋಧ್ ಉಪಯೋಗಿಸಿ, ಹೆರಿಗೆಗಳ ನಡುವೆ ಅಂತರ ಕಾಪಾಡಬೇಕು. ಅಂತರ ಕಾಪಾಡುವುದರಿಂದ ತಾಯಿ ಮತ್ತು ಶಿಶುಗಳ ಆರೋಗ್ಯ ಸುರಕ್ಷಿತವಾಗಿಡಬಹುದು ಎಂದರು.

ಮೇಲಿಂದ ಮೇಲೆ ಹೆರಿಗೆಯಾಗುವುದರಿಂದ ತಾಯಿಗೆ ಗರ್ಭಕೋಶದ ತೊಂದರೆ ಹಾಗೂ ಇತರೆ ಸಮಸ್ಯೆಗಳು ಉಂಟಾಗುತ್ತದೆ. ಕುಟುಂಬ ಕಲ್ಯಾಣ ಯೋಜನೆಯ ವಿಧಾನಗಳನ್ನ ಬಳಸಿ, ಅಂತರ ಕಾಪಾಡಿಕೊಳ್ಳಬೇಕು.

"ಹೆಣ್ಣಿರಲಿ–ಗಂಡಿರಲಿ ಮಕ್ಕಳೆರಡೇ ಇರಲಿ" ಎರಡು ಮಕ್ಕಳ ನಂತರ ಶಾಶ್ವತ ವಿಧಾನಗಳಾದ ಮಹಿಳೆಯರಿಗೆ ಉದರದರ್ಶಕ ಶಸ್ತ್ರಚಿಕಿತ್ಸೆ ಹಾಗೂ ಪುರುಷರಿಗೆ ಎನ್.ಎಸ್.ವಿ ಶಸ್ತ್ರಚಿಕಿತ್ಸೆಯನ್ನು ಆಯ್ದ ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತವಾಗಿ ಮಾಡಲಾಗುತ್ತದೆ. ಪ್ರತಿ ಕುಟುಂಬಕ್ಕೆ ಹೆಣ್ಣಾಗಲಿ ಗಂಡಾಗಲಿ ಒಂದು ಅಥವಾ ಎರಡು ಮಕ್ಕಳು ಸಾಕು, ಚಿಕ್ಕ ಕುಟುಂಬ ಚೊಕ್ಕ ಕುಟುಂಬ, ಚಿಕ್ಕ ಕುಟುಂಬ ಸುಖೀ ಕುಟುಂಬ. ಇದರಿಂದ ಕುಟುಂಬದ ಆರ್ಥಿಕ ಸ್ಥಿತಿ ಉತ್ತಮವಾಗಿರುತ್ತದೆ. ಎಂಬುದನ್ನು ಅರಿತುಕೊಂಡು ಎಲ್ಲರೂ ಉತ್ತಮ ಜೀವನ ಕಟ್ಟಿಕೊಳ್ಳಲು ಸಾಧ್ಯವಾಗುತ್ತದೆ ಎಂದು ಹೇಳಿದರು. ಕೂಕನಪಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ. ಕರಿಯಮ್ಮ ಅವರು ಮಾತನಾಡಿ, ಪ್ರತಿ ತಿಂಗಳು 9 ನೇ ತಾರಿಖಿನಂದು ಪ್ರಧಾನಮಂತ್ರಿ ಮಾತೃತ್ವ ಸುರಕ್ಷಿತ ಅಭಿಯಾನ ಕಾರ್ಯಕ್ರಮದಡಿಯಲ್ಲಿ ತೊಡಕಿನ ಗರ್ಭಿಣಿಯರು, ಸಾಮಾನ್ಯ ಗರ್ಭಿಣಿಯರನ್ನು ತಪಾಸಣೆ ಮಾಡಿ, ಸಮಸ್ಯೆ ಕಂಡುಬಂದರೆ ತಕ್ಷಣ ಚಿಕಿತ್ಸೆ ಪಡೆದುಕೊಳ್ಳಬೇಕು. ಇದ–ರಿಂದ ತಾಯಿಮರಣ ಮತ್ತು ಶಿಶುಮರಣ ತಡೆಗಟ್ಟಲು ಸಾಧ್ಯವಾಗುತ್ತದೆ. ಕುಟುಂಬ ಕಲ್ಯಾಣ ಯೋಜನೆಯ ವಿಧಾನಗಳನ್ನು ಬಳಸುವುದರಿಂದ ಕುಟುಂಬದ ಆರ್ಥಿಕತೆ ಸುಧಾರಿಸುತ್ತದೆ. ಇದರಿಂದ ಉತ್ತಮ ಜೀವನ ಸಾಗಿಸಬಹುದು. ಕುಟುಂಬ ಕಲ್ಯಾಣ ಯೋಜನೆಗಳ ಬಳಕೆಯ ಬಗ್ಗೆ ಇರುವ ಮೂಢನಂಬಿಕೆ ಬಿಟ್ಟು ಅಳವಡಿಸಿಕೊಂಡು ಸುರಕ್ಷಿತವಾಗಿರಲು ತಿಳಿಸಿದರು.

ಜಿಲ್ಲಾ ಅರೋಗ್ಯ ಶಿಕ್ಷಣಾಧಿಕಾರಿ ಶಿವಾನಂದ ವಿ.ಪಿ. ಅವರು ಗರ್ಭಪೂರ್ವ ಮತ್ತು ಪ್ರಸವಪೂರ್ವ ಬ್ರೂಣಲಿಂಗ ಪತ್ತೆ ಮತ್ತು ಹತ್ಯೆ ಶಿಕ್ಷಾರ್ಹ ಅಪರಾದ ಕುರಿತು ವಿವರವಾಗಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಕ್ಷೇತ್ರ ಆರೋಗ್ಯಶಿಕ್ಷಣಾಧಿಕಾರಿ ಗಂಗಮ್ಮ, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಸಾವಿತ್ರಿ, ಶ್ರೀಮತಿ ಫಾಮಿದ, ಆರೋಗ್ಯನಿರೀಕ್ಷಣಾಧಿಕಾರಿಗಳಾದ ಶಬ್ಬಿರ್, ರಮೇಶ ಸೇರಿದಂತೆ ಇತರೆ ಸಿಬ್ಬಂದಿ ವರ್ಗದವರು ಮತ್ತು ಆಶಾ ಕಾರ್ಯಕರ್ತೆಯರು, ಗರ್ಭಿಣಿಯರು, ಬಾಣಂತಿಯರು, ತಾಯಂದಿರು ಹಾಗೂ ದಂಪತಿಗಳು ಉಪಸ್ಥಿತರಿದ್ದರು.

# ಬಿಜೆಪಿಯಿಂದ ಗುರುಪೂರ್ಣಿಮೆ–ಗುರುಪಾದ ಶ್ರೀಗಳ ನುಡಿ
# ವ್ಯಕ್ತಿಯ ಬದುಕು ಅರಳಿಸಬಲ್ಲ ಶಕ್ತಿ ಗುರು ಪರಂಪರೆಗಿದೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.10–ಮನದ ಕಲ್ಮಶಗಳನ್ನು ಹೋಗಲಾಡಿಸಿ ಉತ್ತಮ ಮೌಲ್ಯಗಳನ್ನು ತುಂಬಿ ಶ್ರೇಷ್ಠ ವ್ಯಕ್ತಿಯನ್ನಾಗಿಸಿ ಬದುಕನ್ನು ಅರಳಿಸುವ ಶಕ್ತಿ ಗುರು ಪರಂಪರೆಗೆ ಇದೆ ಎಂದು ಬಿಳಗಿಯ ಕಲ್ಮಠದ ಪೂಜ್ಯ ಗುರುಪಾದ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು.

ನಗರದ ಶಿವಾನಂದ ಜಿನ್‌ನಲ್ಲಿರುವ ಬಿಜೆಪಿ ಕಾರ್ಯಾಲದಲ್ಲಿ ಗುರುವಾರ ಬಾಗಲಕೋಟೆ ಮತಕ್ಷೇತ್ರದಿಂದ ಹಮ್ಮಿಕೊಂಡ ಶಿವಶರಣ ಹಡಪದ ಅಪ್ಪಣ್ಣ ಜಯಂತಿ ಹಾಗೂ ಗುರು ಪೂರ್ಣಿಮೆ ಕಾರ್ಯಕ್ರಮದ ದಿವ್ಯಸಾನಿದ್ಯ ವಹಿಸಿ ಮಾತನಾಡಿದ ಪೂಜ್ಯರು, 12 ನೇ ಶತಮಾನದಲ್ಲಿ ಹಡಪದ ಅಪ್ಪಣ್ಣನವರು ಜನರ ಮನಸ್ಸಿನಲ್ಲಿರುವ ಕಲ್ಮಶಗಳನ್ನು ತೆಗೆದುಹಾಕುವಲ್ಲಿ ಮಹತ್ತರ ಕಾರ್ಯವನ್ನು ಮಾಡಿದ ಬಹು ದೊಡ್ಡ ಶರಣರಾಗಿದ್ದರು ಎಂದರು.

ವ್ಯಾಸ ಮಹರ್ಷಿಗಳ ಜನ್ಮ ದಿನವನ್ನು ಗುರು ಪೂರ್ಣಿಮೆಯನ್ನಾಗಿ ಆಚರಿಸುತ್ತ ಬರಲಾಗುತ್ತಿದ್ದು, ಭಾರತದಲ್ಲಿ ಗುರುವಿಗೆ ಅತ್ಯುನ್ನತ ಸ್ಥಾನವಿದೆ. ಗುರುವಿನ ಸ್ಮರಣೆಯಿಂದ ಮನದ ಕಲ್ಮಶಗಳು ನಾಶವಾಗುತ್ತವೆ. ಇಂದಿನ ಯುವ ಜನಾಂಗಕ್ಕೆ ಗುರುವಿನ ಮಹತ್ವ ಭಾರತೀಯ ಗುರು ಪರಂಪರೆಯನ್ನು ತಿಳಿಸುವ ಅಗತ್ಯತೆ ಇದೆ ಎಂದು ಶ್ರೀಗಳು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಮಾಜಿ ಶಾಸಕ ವೀರಣ್ಣ ಚರಂತಿಮಠ ಮಾತನಾಡಿ, 12 ನೇ ಶತಮಾನದಲ್ಲಿ ಹಡಪದ ಅಪ್ಪಣ್ಣ ಮಹಾಶರಣರಾಗಿದ್ದರು. ಆ ಕಾಲದಲ್ಲಿ ಶರಣರು ಅನುಭವ ಮಂಟಪದ ಮೂಲಕ ಜಾತಿ ರಹಿತ ಸಮಾಜ ಕಟ್ಟಬೇಕು, ಜಾತ್ಯಾತೀತ ಸಮಾಜ ನಿರ್ಮಾಣವಾಗಬೇಕು, ಮೇಲು ಕೀಳು ಹೋಗಬೇಕು ಎಂಬ ಆಶಯ ಹೊಂದಿದ್ದರು. ಕಾಯಕದಲ್ಲಿ ಗೌರವವಿದ್ದಾಗ ಮನುಷ್ಯ ಮನುಷ್ಯನಾಗಿರಲು ಸಾಧ್ಯ, ನಮ್ಮ ಬದುಕಿಗೆ ಜ್ಞಾನ ನೀಡುವ ಗುರುವಿನ ಅವಶ್ಯವಿದೆ ಎಂದರು.

ಕಾರ್ಯಕ್ರಮಕ್ಕೂ ಮೊದಲು ಗುರುಪಾದ ಶಿವಾಚಾರ್ಯ ಮಹಾಸ್ವಾಮಿಗಳ ಪಾದಪೂಜೆ ನೆರವೇರಿಸಿ ಗುರುವಂದನೆ ಸಲ್ಲಿಸಲಾಯಿತು, ಮುಖಂಡರಾದ ಜಿ.ಎನ್.ಪಾಟೀಲ, ಡಾ.ಎಂ.ಎಸ್.ದಡ್ಡೆನ್ನವರ, ಗುಂಡುರಾವ ಶಿಂಧೆ, ರಾಜು ನಾಯ್ಕರ, ಬಸವರಾಜ ಯಂಕಂಚಿ, ಸತ್ಯನಾರಾಯಣ ಹೇಮಾದ್ರಿ, ಬಿಜೆಪಿ ಜಿಲ್ಲಾ ಉಪಾಧ್ಯಕ್ಷೆ ಭಾಗೀರಥಿ ಪಾಟೀಲ, ನಗರಸಭೆ ಅಧ್ಯಕ್ಷೆ ಸವಿತಾ ಲೆಂಕೆನ್ನವರ, ಉಪಾಧ್ಯಕ್ಷೆ ಶೋಭಾ ರಾವ್, ಯಲ್ಲಪ್ಪ ನಾರಾಯಣಿ, ಬಿಜೆಪಿ ನಗರಮಂಡಲ ಅಧ್ಯಕ್ಷ ಬಸವರಾಜ ಹುನಗುಂದ, ಶ್ರೀಧರ ನಾಗರಬೆಟ್ಟ, ಉಮೇಶ ಹಂಚಿನಾಳ, ನಗರಸಭೆ ಸದಸ್ಯರಾದ ಶಶಿಕಲಾ ಮಜ್ಜಗಿ, ರೇಖಾ ಕಲಬುರಗಿ, ಸುಜಾತಾ ಶಿಂಧೆ, ಸ್ಮಿತಾ ಪವಾರ, ನಾಗಪ್ಪ ಹಡಪದ, ಸಂಗಮೇಶ ಹನಮಸಾಗರ ಸೇರಿದಂತೆ ಪ್ರಮುಖರು, ಕಾರ್ಯಕರ್ತರು ಭಾಗವಹಿಸಿದ್ದರು.

# ಗುರುಪೂರ್ಣಿಮೆ ಪೂಜ್ಯನೀಯ ದಿನ–ನ್ಯಾ.ರಾಜಶೇಖರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.10–ಗುರು ಪೂರ್ಣಿಮೆ ಆಚರಣೆ ಪ್ರತಿಯೊಬ್ಬ ನಾಗರಿಕರಿಗೆ ಪೂಜ್ಯನೀಯ ದಿನವಾಗಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶ ರಾಜಶೇಖರ ತಿಳಗಂಜಿ ಹೇಳಿದರು. ನವನಗರದ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರಿಯ ವಿಶ್ವವಿದ್ಯಾಲಯದಲ್ಲಿ ಗುರುವಾರ ಏರ್ಪಡಿಸಲಾದ ಗುರು ಪೂರ್ಣಿಮಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಮಹಾಭಾರತದ ಕರ್ತೃ ವೇದವ್ಯಾಸರ ಜನ್ಮದಿನ ನಿಮಿತ್ಯ ಪ್ರತಿ ವರ್ಷ ಆಷಾಢ ಮಾಸದ ಹುಣ್ಣಿಮೆ ದಿನ ಗುರು ಪೂರ್ಣಿಮೆ ಆಚರಿಸಲಾಗುತ್ತಿದೆ ಎಂದರು.

ಏಕಲವ್ಯ ದ್ರೋಣಾಚಾರ್ಯರಿಗೆ ಗುರು ಕಾಣಿಕೆಯಾಗಿ ತನ್ನ ಹೆಬ್ಬೆರಳನ್ನು ನೀಡಿದ ಪ್ರತೀಕವಾಗಿರುವ ಗುರುಪೂರ್ಣಿಮೆ, ಬುದ್ಧ ಮತ್ತು ಮಹಾವೀರರು ಸಹ ತಮ್ಮ ಧರ್ಮ ಭೋದನೆ ಮಾಡಿದ್ದು ಸಹ ಇದೇ ದಿನ ಎಂದು ತಿಳಗಂಜಿ ತಿಳಿಸಿದರು.

ಮುಖ್ಯ ಅತಿಥಿಯಾಗಿದ್ದ ನಿವೃತ್ತ ಜಿಲ್ಲಾ ನ್ಯಾಯಾಧೀಶರು ಹಾಗೂ ಬಾಗಲಕೋಟೆ ಜಿಲ್ಲಾಧಿಕಾರಿಗಳ ಕಾನೂನು ಸಲಹೆಗಾರ ಡಿ.ವಾಯ್.ಬಸಾಪೂರ ಮಾತನಾಡಿ, ಗುರುಗಳು ಎಂದರೆ ಕೇವಲ ಶಾಲೆಯ ಶಿಕ್ಷಕರು, ಉಪನ್ಯಾಸಕರು ಮಾತ್ರವಲ್ಲ. ವರ್ಣಮಾತ್ರಂ ಕಲಿಸಿದಾತ ಕೂಡ ಗುರುಗಳು ಎಂಬಂತೆ ಜೀವನದ ಮೌಲ್ಯ ತಿಳಿಸಿ, ಮಾರ್ಗದರ್ಶನ ಮಾಡಿದ ಎಲ್ಲ ಹಿರಿಯರು ಸಹ ಗುರುಗಳು ಎಂದು ಹೇಳಿದರಲ್ಲದೇ, ಮನೆಯೇ ಮೊದಲ ಪಾಠ ಶಾಲೆ, ತಾಯಿಯೇ ಮೊದಲ ಗುರು ಎನ್ನುವಂತೆ ಸಮಾಜದಲ್ಲಿ ಪ್ರತಿಯೊಂದು ಸಮಸ್ಯೆಗೆ ಪರಿಹಾರ ನೀಡುವವರು ಸಹ ಗುರುಗಳೇ ಆಗಿರುತ್ತಾರೆ ಎಂದರು.

ಇನ್ನೋರ್ವ ಮುಖ್ಯ ಅತಿಥಿ ನಿವೃತ್ತ ಜಿಲ್ಲಾ ನ್ಯಾಯಾಧೀಶೆ ವನಮಾಲಾ ಯಾದವ, ಪುರಾತನ ಕಾಲದಿಂದಲೂ ಗುರು ಪೂರ್ಣಿಮೆ ಆಚರಣೆ ಪವಿತ್ರ ದಿನವಾಗಿದೆ. ಬ್ರಹ್ಮಕುಮಾರಿ ಈಶ್ವರಿ ವಿಶ್ವವಿದ್ಯಾಲಯದಲ್ಲಿ ಆತ್ಮ, ಪರಮಾತ್ಮನ ಪರಿಚಯ ನೀಡಿ, ಆಧ್ಯಾತ್ಮಿಕ ಜೀವನ ಅಳವಡಿಸಿಕೊಳ್ಳಲು ಶಿಕ್ಷಣ ನೀಡುತ್ತಿರುವದು ಶ್ಲಾಘನೀಯ ಎಂದರು. ದಿವ್ಯ ಸಾನಿಧ್ಯ ವಹಿಸಿದ್ದ ಈಶ್ವರಿ ವಿಶ್ವವಿದ್ಯಾಲಯದ ಮುಖ್ಯ ಸಂಚಾಲಕಿ ಬಿ.ಕೆ.ನಾಗರತ್ನ ಗುರು ಪೂರ್ಣಿಮೆಯ ಮಹತ್ವ ಹಾಗೂ ಬ್ರಹ್ಮಕುಮಾರಿ ಈಶ್ವರಿ ಸಂದೇಶವನ್ನು ನೀಡುತ್ತ, ಆಧ್ಯಾತ್ಮಿಕ ಜೀವನದಲ್ಲಿ ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಂಡಾಗ ಸಮಾಜದಲ್ಲಿ ಶಾಂತಿ, ನೆಮ್ಮದಿ ನೆಲೆಸಲು ಸಾಧ್ಯವೆಂದರು.

ಬಿ.ಕೆ. ಮಾಲಕ್ಕ, ಬಿ.ಕೆ.ದೀಪಕ ಉಪಸ್ಥಿತರಿದ್ದರು. ನಿವೃತ್ತ ಪ್ರಾಚಾರ್ಯೆ ಶ್ರೀಮತಿ ವಿಜು ಮಠದ ಸ್ವಾಗತಿಸಿ ವಂದಿಸಿದರು. ಕೋರಿ, ಬಿ.ಕೆ. ಪವಿತ್ರ ನಿರೂಪಿಸಿದರು.

ಬಿಎ, ಬಿಕಾಂ 6 ನೇ ಸೆಮಿಸ್ಟರ್ ಪರೀಕ್ಷೆ

# ಕಾಳಿದಾಸ ಕಾಲೇಜಿನ ವಿದ್ಯಾರ್ಥಿಗಳ ಸಾಧನೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.10–ನಗರದ ಕಾಳಿದಾಸ ಶಿಕ್ಷಣ ಸಂಸ್ಥೆಯ ಎವಿ್.ಎಚ್.ಂಬುವುನಾಳ ಕಲಾ, ಜಿ.ಶಂಕರಗೌಡ ಮತ್ತು ಜಿ.ಸರೋಜಮ್ಮ ವಾಣಿಜ್ಯ ಪದವಿ ಮಹಾವಿದ್ಯಾಲಯದ 6ನೇಯ ಸೆಮಿಸ್ಟರ್‌ನ ಬಿಎ ಮತ್ತು ಬಿ.ಕಾಂ ಪದವಿ ಪರೀಕ್ಷೆಗಳಲ್ಲಿ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡಿದ್ದಾರೆ.

ಬಿಎ ವಿಭಾಗದಲ್ಲಿ ಶೇ.96.15 ಫಲಿತಾಂಶ ಬಂದಿದ್ದು, ಈ ವಿಭಾಗದಲ್ಲಿ ಜಯಲಕ್ಷ್ಮೀ ಗಡಗಡಿ ಶೇ.93.08 ಅಂಕ ಪಡೆದು ಪ್ರಥಮ, ಸೋಮನಾಥ ಹಳ್ಳಿ ಶೇ.92.03 ಅಂಕ ಗಳಿಸಿ ದ್ವಿತೀಯ, ಹಾಗೂ ರೇಖಾ ಮಾದರ ಮತ್ತು ಸುಧಾ ವಡ್ಡರ ಶೇ.91.05 ಅಂಕ ಪಡೆದು ತೃತೀಯ ಸ್ಥಾನವನ್ನು ಪಡೆದುಕೊಂಡಿದ್ದಾರೆ.

ಬಿಕಾಂ ವಿಭಾಗದಲ್ಲಿ ಶೇ.94.28 ರಷ್ಟು ಫಲಿತಾಂಶ ಬಂದಿದ್ದು, ಅಕ್ಷತಾ ಜೋಷಿ ಶೇ.97.05 ಅಂಕ ಪಡೆದು ಪ್ರಥಮ, ತಂಜಿಲ್ಲಾ ಹಿಪ್ಪರಗಿ ಶೇ.93.05 ಅಂಕ ಗಳಿಸಿ ದ್ವಿತೀಯ ಹಾಗೂ ನಂದಿನಿ ಸೂಳಿಕೇರಿ ಶೇ.91.09 ಅಂಕ ಪಡೆದು ತೃತೀಯ ಸ್ಥಾನ ಪಡೆದುಕೊಂಡಿದ್ದಾರೆ ಎಂದು ಸಂಸ್ಥೆಯ ಅಧ್ಯಕ್ಷ ಜಿ.ಎಸ್.ಪಾಟೀಲ, ಕಾಲೇಜಿನ ಪ್ರಾಚಾರ್ಯ ಡಾ.ಎಸ್.ಎನ್.ಪಟ್ಟಣಶೆಟ್ಟಿ ತಿಳಿಸಿದ್ದಾರೆ.

ಜು.13 ಬಂಜಾರಾ ಸಾಹಿತ್ಯ ಪರಿಷತ್ ಜಿಲ್ಲಾ ಘಟಕದ ಉದ್ಘಾಟನೆ

# ಬಂಜಾರಾ ಭಾಷೆ, ಸಂಸ್ಕೃತಿ ಉಳಿಸುವ ಉದ್ದೇಶ–ರಾಠೋಡ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.10–ಕರ್ನಾಟಕ ಬಂಜಾರಾ ಸಾಹಿತ್ಯ ಪರಿಷತ್ತಿನ ಬಾಗಲಕೋಟೆ ಜಿಲ್ಲಾ ಘಟಕದ ಉದ್ಘಾಟನೆ ಮತ್ತು ಪದಾಧಿಕಾರಿಗಳ ಪದಗ್ರಹಣ ಸಮಾರಂಭ ಜುಲೈ 13 ರವಿವಾರ ಬೆಳಿಗ್ಗೆ 10 ಗಂಟೆಗೆ ನವನಗರದ ಅಂಬೇಡ್ಕರ್ ಭವನದಲ್ಲಿ ನಡೆಯಲಿದೆ ಎಂದು ಪರಿಷತ್ತಿನ ನೂತನ ಜಿಲ್ಲಾ ಅಧ್ಯಕ್ಷ ರವಿ ರಾಠೋಡ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸನಾತನ ಹಾಗೂ ಹರಪ್ಪ ಮತ್ತು ಮೆಹೆಂಜೋದಾರ ಸಂಸ್ಕೃತಿಯ ಕಾಲದಿಂದಲೂ ಬಂಜಾರಾ ಸಮಾಜ ಶ್ರೇಷ್ಠ ಸಂಸ್ಕೃತಿಯುಳ್ಳ ಸಮಾಜವಾಗಿದೆ. ನಗರೀಕರಣ, ಮಾಧ್ಯಮದ ಭರಾಟೆಯ ನಡುವೆಯೂ ಈ ಸಮುದಾಯ ವಿಶಿಷ್ಟ ಭಾಷೆ, ವೇಷಭೂಷಣ, ಸಂಸ್ಕೃತಿ ಹೊಂದಿದೆ. ಆದರೆ ಈಗ ಅದು ಅಳಿವಿನ ಅಂಚಿಗೆ ತಲುಪಿದೆ. ಬಂಜಾರಾ ಭಾಷೆಗೆ ಲಿಪಿಯಿಲ್ಲದಿರುವುದರಿಂದ ಅದನ್ನು ಉಳಿಸಿ ಬೆಳೆಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಬಂಜಾರಾ ಸಾಹಿತ್ಯ ಪರಿಷತ್ತಿನ ಸ್ಥಾಪನೆಯ ಉದ್ದೇಶ ಬಂಜಾರಾ ಭಾಷೆ ಮತ್ತು ಸಂಸ್ಕೃತಿಗೆ ಸಾಹಿತ್ಯದ ಮೂಲಕ ನೆಲೆ ನೀಡುವುದು,

ಹೊಸ ಪೀಳಿಗೆಗೆ ಮಾರ್ಗದರ್ಶನ ಮಾಡುವುದಾಗಿದೆ ಎಂದ ರಾಠೋಡ, ಜಿಲ್ಲೆಯಲ್ಲಿ ಸುಮಾರು 72 ತಾಂಡಗಳಿವೆ. ಈ ಸಮುದಾಯದವರು ಆರೋಗ್ಯ, ಶಿಕ್ಷಣ ಸೇರಿದಂತೆ ಹಲವು ಹಕ್ಕುಗಳಿಂದ ವಂಚಿತರಾಗಿದ್ದಾರೆ. ಪರಿಷತ್ತಿನ ಮೂಲಕ ಇವರಿಗೆ ಸಹಾಯ ಮಾಡುವ ಉದ್ದೇಶವಿದೆ ಎಂದರು.

ಪ್ರಧಾನ ಕಾರ್ಯದರ್ಶಿ ಶ್ರೀಮತಿ ಜ್ಯೋತಿ ಕೃಷ್ಣಾ ನಾಯಕ ಮಾತನಾಡಿ, ಲಂಬಾಣಿ ಸಮಾಜವು ಹುಟ್ಟಿನಿಂದಲೂ ಕಲಾತ್ಮಕವಾಗಿದ್ದು, ಪ್ರತಿ ತಾಂಡದಲ್ಲಿ ವಿಭಿನ್ನ ವೇಷಭೂಷಣ, ಸಂಸ್ಕೃತಿಯಿದೆ. ಇವತ್ತು ಅವುಗಳನ್ನು ಲಿಖಿತ ರೂಪದಲ್ಲಿ ದಾಖಲಿಸಿ, ಸಾಹಿತ್ಯ ರೂಪದಲ್ಲಿ ಉಳಿಸಬೇಕಿದೆ ಎಂದು ಹೇಳಿ, ಜು.13 ರಂದು ನಡೆಯುವ ಕಾರ್ಯಕ್ರಮದಲ್ಲಿ ವಿವಿಧ ಮಠಾಧೀಶರು, ಜನಪ್ರತಿನಿಧಿಗಳು ಹಾಗೂ ಹೆಸರಾಂತ ಸಾಹಿತಿಗಳು ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಉಪಾಧ್ಯಕ್ಷೆ ಲಕ್ಷ್ಮೀ ಕೇಶವ ಪವಾರ, ಕಾರ್ಯಾಧ್ಯಕ್ಷ ನೀಲಪ್ಪ ರಾಠೋಡ, ಖಜಾಂಚಿ ಶ್ರೀಮತಿ ಅನಿತಾ ನಾಯಕ, ಸಾಂಸ್ಕೃತಿಕ ಕಾರ್ಯದರ್ಶಿ ಪುಂಡಲಿಕ ಲಮಾಣಿ ಹಾಗೂ ಸಹ ಕಾರ್ಯದರ್ಶಿ ಸಿಂಧೂರ ಕುರಿಗಾರ ಉಪಸ್ಥಿತರಿದ್ದರು.

## ಈಚನಾಳ ಕ್ರಾಸ್ : ಸರ್ಕಾರಿ ಶಾಲಾ ಮಕ್ಕಳಿಗೆ ನಿಂಗಪ್ಪ ಪೂಜಾರ್ ಅವರಿಂದ ಟೈ ಬೆಲ್ಟ್ ನೋಟ್ ಬುಕ್ ದೇಣಿಗೆ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸಗೂರು. ಜು. 10.– ತಾಲೂಕಿನ ಈಚನಾಳ ಕ್ರಾಸ್ ನಲ್ಲಿರುವ ಸರಕಾರಿ ಕಿರಿಯ ಪ್ರಾಥಮಿಕ ಶಾಲೆಯ ಸುಮಾರು ಐವತ್ತಕ್ಕೂ ಅಧಿಕ ವಿದ್ಯಾರ್ಥಿಗಳಿಗೆ ಶಾಲಾ ಮೇಲುಸ್ತುವಾರಿ ಸಮಿತಿಯ ಸದಸ್ಯರಾದ ನಿಂಗಪ್ಪ ಬಿ ಪೂಜಾರ್ ರವರು ತಮ್ಮ ಹುಟ್ಟು ಹಬ್ಬದ ಅಂಗವಾಗಿ ಶಾಲಾ ವಿದ್ಯಾರ್ಥಿಗಳಿಗೆ ತಮ್ಮ ಕೈಲಾದ ಕೊಡುಗೆಯಾಗಿ ಪೆನ್ನು, ಟೈ, ಬೆಲ್ಟ್ ನೋಟ್ ಬುಕ್ ಗಳನ್ನು ವಿತರಣೆ ಮಾಡಿ ವಿಭಿನ್ನವಾದ ರೀತಿಯಲ್ಲಿ ತಮ್ಮ ಹುಟ್ಟು ಹಬ್ಬವನ್ನು ಶಾಲಾ ಮಕ್ಕಳೊಂದಿಗೆ ಆಚರಣೆ ಮಾಡಿಕೊಂಡು ಪಾಲಕರ ಹಾಗೂ ಗ್ರಾಮಸ್ಥರ ಮೆಚ್ಚುಗೆಗೆ ಪಾತ್ರರಾಗಿದ್ದಾರೆ.

ಪ್ರತಿಯೊಬ್ಬರೂ ತಮ್ಮ ಹುಟ್ಟು ಹಬ್ಬವನ್ನು ಅದ್ದೂರಿಯಾಗಿ ಆಚರಣೆ ಮಾಡಿಕೊಳ್ಳುತ್ತಿರುವ ಇಂಥ ಸಂದರ್ಭದಲ್ಲಿ ವಿಶಿಷ್ಟವಾಗಿ ಆಡಂಬರಕ್ಕೆ ಆಸ್ಪದ ನೀಡದೆ ವಿನಾಕಾರಣ ಖರ್ಚಿಗೆ ದಾರಿ ಮಾಡಿಕೊಡದೆ ವಿಭಿನ್ನವಾಗಿ ಏನಾದರೂ ಒಂದು ವಿಶೇಷತೆಯಿಂದ ನನ್ನ ಹುಟ್ಟುಹಬ್ಬ ಆಚರಣೆ ಮಾಡಿಕೊಳ್ಳಬೇಕೆಂಬ ನಿರ್ಧಾರದಿಂದಾಗಿ ಸರ್ವರ ಮಕ್ಕಳು ವಿದ್ಯಾಭ್ಯಾಸ ಮಾಡುವ ಶಾಲಾ ಮಕ್ಕಳಿಗೆ ಏನಾದರೊಂದು ನನ್ನ ಕೈಲಾದಷ್ಟು ಸಹಾಯ ಮಾಡಬೇಕೆಂಬ ಆಲೋಚನೆ ನನಗೆ ಮೊದಲಿನಿಂದಲೂ ಇತ್ತು ಆದರೆ ಇಂದು ಆ ದೇವರ ಕೃಪೆಯಿಂದಾಗಿ ನನ್ನ ಹುಟ್ಟುಹಬ್ಬಕ್ಕೆ ಕೂಡಿಟ್ಟ ಹಣ ವ್ಯರ್ಥ ಮಾಡದೇ ಮುಂದಿನ ಭವ್ಯ ಭಾರತ ದೇಶದ ಪ್ರಜೆಗಳಾಗಲಿರುವ ನಮ್ಮ ಶಾಲೆಯ ವಿದ್ಯಾರ್ಥಿಗಳಿಗೆ ಈ ಒಂದು ನನ್ನ ಕಿರು ದೇಣಿಗೆಯನ್ನು ನೀಡಿದ್ದೇನೆ. ಮಕ್ಕಳೊಂದಿಗೆ ಹಂಚಿಕೊಂಡ ಆ ಒಂದು ಸಂತೋಷದ ಕ್ಷಣ ನನ್ನ ಜೀವನದಲ್ಲಿ ಮರೆಯಲು ಸಾಧ್ಯವಿಲ್ಲ ಎಂದು ದೇಣಿಗೆ ನೀಡಿದ ನಿಂಗಪ್ಪ ಬಿ ಪೂಜಾರ್ ಅವರು ಪತ್ರಿಕೆಯೊಂದಿಗೆ ಮಾತನಾಡುತ್ತಾ ಹೇಳಿದರು. ಈ ಸಂದರ್ಭದಲ್ಲಿ ಶಿಕ್ಷಕರಾದ ಬಸವರಾಜ್ ಹಿರೇಮಠ, ರಾಮನಗೌಡ, ಶಾಲಾ ಮೇಲುಸ್ತುವಾರಿ ಸಮಿತಿಯ ಸದಸ್ಯರಾದ ಮಹಾಂತೇಶ್ ಕುಂಬಾರ್, ಎಸ್ ಡಿ ಎಂ ಸಿ ಮಾಜಿ ಅಧ್ಯಕ್ಷರಾದ ಚೌಡಪ್ಪ ನಂದವಾಡಗಿ, ಬಸವರಾಜ್ ನವಲಿ, ನಿಂಗನಗೌಡ ಪೊಲೀಸ್ ಪಾಟೀಲ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ನಗರ ಕೇಂದ್ರ ಗ್ರಂಥಾಲಯದ ಸೇವೆ ತಾತ್ಕಾಲಿಕವಾಗಿ ಸ್ಥಗಿತ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 10–ಇಲ್ಲಿನ ಸ್ಟೇಷನ್ ರೋಡ್, ನಗರ ಉದ್ಯಾನವನ ಪಕ್ಕದ ನಗರ ಕೇಂದ್ರ ಗ್ರಂಥಾಲಯ ಕಟ್ಟಡವನ್ನು ಜುಲೈ 07 ರಿಂದ ಆಧುನೀಕರಣ, ನವೀಕರಣ ಕಾರ್ಯಕೈಗೊಂಡ ಪ್ರಯುಕ್ತ ಗ್ರಂಥಾಲಯದ ಸೇವೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ ಎಂದು ನಗರ ಕೇಂದ್ರ ಗ್ರಂಥಾಲಯದ ಮುಖ್ಯ ಗ್ರಂಥಾಲಯಾಧಿಕಾರಿ ನಿರ್ಮಲಾ ಹೆಚ್ ಹೊಸೂರು ಅವರು ತಿಳಿಸಿದ್ದಾರೆ.

ಇತ್ತೀಚೆಗೆ ರಾಯಚೂರು ಸಹಾಯಕ ಆಯುಕ್ತರು ಗ್ರಂಥಾಲಯಕ್ಕೆ ಭೇಟಿ ನೀಡಿ ಮೌಖಿಕ ಆದೇಶದ ಮೇರೆಗೆ ಗ್ರಂಥಾಲಯವನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ. ಈ ಸೇವೆಯನ್ನು ಜಿಲ್ಲಾ ಕೇಂದ್ರ ಗ್ರಂಥಾಲಯ ಹಾಗೂ ರಾಯಚೂರು ನಗರದಲ್ಲಿ ಇರುವ ಶಾಖಾ ಗ್ರಂಥಾಲಯದಲ್ಲಿ ಸೇವೆಯನ್ನು ಪಡೆದುಕೊಳ್ಳುವಂತೆ ನಗರ ಕೇಂದ್ರ ಗ್ರಂಥಾಲಯದ ಮುಖ್ಯ ಗ್ರಂಥಾಲಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಂತೆ ಮಾರುಕಟ್ಟೆ–ವಾಣಿಜ್ಯ ಮಳಿಗೆ ಕಟ್ಟಡಕ್ಕೆ ಶಾಸಕ ರಾಜುಗೌಡ ಶಂಕುಸ್ಥಾಪನೆ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟೆ: ಗ್ರಾಮದ ಸುಧಾರಣೆಯಿಂದ ಜನರ ಅಭಿವೃದ್ಧಿಗೆ ಅನುಕೂಲವಾಗುತ್ತದೆ. ಬಹುದಿನಗಳಿಂದ ನೆನೆಗುದಿಗೆ ಬಿದ್ದಿದ್ದ ಗ್ರಾಮೀಣ ಸಂತೆ ಮಾರುಕಟ್ಟೆ ನಿರ್ಮಾಣಕ್ಕೆ ಶಂಕು ಸ್ಥಾಪನೆ ಮಾಡಿದ್ದೇನೆ ಇದು ಮಾದರಿಯಾಗಿ ಕೆಲಸವಾಗಬೇಕು. ಗ್ರಾಮದ ಅಭಿವೃದ್ಧಿಗೆ ನೆರವಾಗಬೇಕು ಎಂದು ದೇವರಹಿಪ್ಪರಗಿ ಮತಕ್ಷೇತ್ರದ ಶಾಸಕ ಬೀಮನಗೌಡ (ರಾಜುಗೌಡ) ಬ.ಪಾಟೀಲ ಹೇಳಿದರು. ಅವರು ತಾಲ್ಲೂಕಿನ ಕಲಕೇರಿ ಗ್ರಾಮದ ಮುಖ್ಯಬಜಾರದಲ್ಲಿ 40ಲಕ್ಷ ವೆಚ್ಚದಲ್ಲಿ ಗ್ರಾಮೀಣ ಸಂತೆ ಮಾರುಕಟ್ಟೆ ಹಾಗೂ ವಾಣಿಜ್ಯ ಮಳಿಗೆಗಳ ನೂತನ ಕಟ್ಟಡ ನಿರ್ಮಾಣದ ಶಂಕು ಸ್ಥಾಪನೆ ನೆರವೇರಿಸಿ ಬುಧವಾರ ಮಾತನಾಡಿದರು.

ಈ ಹಿಂದೆ ಇಲ್ಲಿ ಅಂಗಡಿ ನಿರ್ಮಿಸಿಕೊಂಡಿದ್ದವರಿಗೆ ನೂತನ ಮಾರುಕಟ್ಟೆಯಲ್ಲಿ ಮೊದಲ ಅದ್ಯತೆ ನೀಡಬೇಕು. ಯಾರಿಗೂ ಅನ್ಯಾಯವಾಗಬಾರದು. ಸಾಮಾಜಿಕ ನ್ಯಾಯ ಸಿಗುವಂತೆ ಎಲ್ಲರೂ ಹೆಮ್ಮೆಪಡುವಂತೆ ಕೆಲಸ ಮಾಡಿ ಎಂದು ಸಲಹೆ ನೀಡಿದರು. ಇದೇ ಡಿಸೆಂಬರ್ ಗೆ ಗ್ರಾಮ ಪಂಚಾಯಿತಿ ಅವಧಿ ಮುಕ್ತಾಯವಾಗಲಿದೆ ಅವಧಿಯೊಳಗೆ ಈ ಕೆಲಸ ಮಾಡಿ, ಶಾಸಕನಾಗಿ ನನ್ನ ಶಕ್ತಿಮೀರಿ ಸಹಕಾರ ನೀಡುವೆನೆಂದು ಭರವಸೆ ನೀಡಿದರು.

ಕೆಪಿಸಿಸಿ ರಾಜ್ಯ ಪ್ರಧಾನ ಕಾರ್ಯದರ್ಶಿ ಡಾ.ಪ್ರಭುಗೌಡ ಲಿಂಗದಳ್ಳಿ(ಚಬನೂರ), ಮಾತನಾಡಿ, ಗ್ರಾಮದ ಅಭಿವೃದ್ಧಿಗೆ ವಿವಿಧ ಪಕ್ಷದವರಾಗಿದ್ದರೂ ಗ್ರಾಮ ಪಂಚಾಯಿತಿ ಸದಸ್ಯರೆಲ್ಲ ಒಗ್ಗಟ್ಟಾಗಿ ನಿಂತಿರುವುದನ್ನು ನಾನು ಕಲಕೇರಿಯಲ್ಲಿ ನೋಡುತ್ತಿರುವೆ. ರಾಜ್ಯ ಸರ್ಕಾರದಿಂದ ಸಾಧ್ಯವಾದಷ್ಟು ಅನುದಾನವನ್ನು ಒದಗಿಸುವ ಕೆಲಸ ಮಾಡುವೆ. ತಾವುಗಳು ಕೇಂದ್ರದಿಂದ ಅನುದಾನಕ್ಕೆ ಸಂಸದರನ್ನೂ ಭೇಟಿಯಾಗುವಂತೆ ತಿಳಿಸಿದರು.

ಸಾನ್ನಿಧ್ಯ ವಹಿಸಿದ್ದ ಕಲಕೇರಿ ಗುರುಮರುಳಾರಾಧ್ಯ ಸಂಸ್ಥಾನ ಹಿರೇಮಠದ ಸಿದ್ಧರಾಮ ಶಿವಾಚಾರ್ಯರು ಮಾತನಾಡಿ, ಗ್ರಾಮದ ಅಭಿವೃದ್ಧಿ ಕಾರ್ಯಕ್ಕೆ ಸದಸ್ಯರೆಲ್ಲ ಒಗ್ಗಟ್ಟಾಗಿ ನಿಂತಿರುವುದು ಸಂತಸ, ಹೆಮ್ಮೆ ತಂದಿದೆ ಎಂದರು.

ಕಲಕೇರಿ ಪಂಚರಂಗ ಸಂಸ್ಥಾನ ಗದ್ದುಗೆ ಮಠದ ಮಡಿವಾಳೇಶ್ವರ ಶಿವಾಚಾರ್ಯರು ಮಾತನಾಡಿ ಕಲಕೇರಿಯಲ್ಲಿ ಮಡಿವಾಳೇಶ್ವರ ದೊಡ್ಡ ಜಾತ್ರೆ ನಡೆಯುತ್ತದೆ . ಲಕ್ಷಾಂತರ ಜನ ಸೇರುತ್ತಾರೆ. ಬರಹೋಗುವವರಿಗೆ ಅನುಕೂಲವಾಗುವಂತೆ ಮುಖ್ಯ ರಸ್ತೆಯನ್ನು ಇನ್ನಷ್ಟು ವಿಸ್ತರಿಸಬೇಕು ಎಂದರು. ಗ್ರಾ.ಪಂ ಸದಸ್ಯ ನಬಿಲಾಲ ನಾಯ್ಕೊಡಿ ಮಾತನಾಡಿದರು.

ಸಾನ್ನಿಧ್ಯ ವಹಿಸಿದ್ದ ಮೌಲಾನಾ ನಾಸೀರ ಉಮ್ರಿ ಇನಾಮದಾರ, ಅಧ್ಯಕ್ಷತೆಯನ್ನು ವಹಿಸಿದ್ದ ಗ್ರಾಮ ಪಂಚಾಯಿತಿ ಅಧ್ಯಕ್ಷ ರಾಜಅಹ್ಮದ ಸಿರಸಗಿ, ತಾಲ್ಲೂಕು ಪಂಚಾಯಿತಿ ಇ.ಓ ನಿಂಗಪ್ಪ ಮಸಳಿ, ಗ್ರಾ.ಪಂ.ಪಿಡಿಓ ಬಿ.ಎಂ.ಸಾಗರ, ಗ್ರಾಮದ ಮುಖಂಡರುಗಳಾದ ರಾಮರಾವ ದೇಶಮುಖ, ದಾವಲಸಾಬ ನಾಯ್ಕೊಡಿ, ಜಹಾಂಗೀರಭಾಷಾ ಸಿರಸಗಿ, ಖಾದರಬಾಶಾ ಇನಾಮದಾರ, ವೀರೇಶ ನಾಡಗೌಡ, ಕಿರಣಕುಮಾರ ದೇಸಾಯಿ, ರಮೇಶ ಹೊಸಮನಿ, ಲಕ್ಕಪ್ಪ ಬಡಿಗೇರ, ಹಣಮಂತ ವಡ್ಡರ, ಪುಂಡಲೀಕ ಚವಾಣ, ಮಾಬುಪಟೇಲ ಮೋಪಗಾರ, ದೇವೀಂದ್ರ ಕಡಕೋಳ, ದೇವೀಂದ್ರ ಜಂಬಗಿ, ಮೇಗು ರಾಠೋಡ, ಮಲಕಾಜಪ್ಪ ಭಜಂತ್ರಿ, ಗ್ರಾಮ ಪಂಚಾಯಿತಿ ಸದಸ್ಯರು ಗ್ರಾಮದ ಪ್ರಮುಖರು ಉಪಸ್ಥಿತರಿದ್ದರು. ಈರಗಂಟೆಪ್ಪ ಸ್ವಾಗತಿಸಿ ನಿರ್ವಹಿಸಿದರು.

ಗುರುಪೂರ್ಣಿಮೆ–ಉಚಿತ ಬ್ಯಾಗ ವಿತರಣೆ

# ಭಾರತೀಯ ಗುರು ಪರಂಪರೆ ಜಗತ್ತಿಗೆ ಶ್ರೇಷ್ಠ : ಚರಂತಿಮಠ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.10–ಭಾರತೀಯ ಗುರುಪರಂಪರೆ ಜಗತ್ತಿಗೆ ಶ್ರೇಷ್ಠವಾಗಿದೆ ಎಂದು ಮಾಜಿ ಶಾಸಕ ವೀರಣ್ಣ ಚರಂತಿಮಠ ಹೇಳಿದರು.

ನಗರದ ಬಿವಿವಿ ಸಂಘದ ಶಾಲಾ ಆವರಣದಲ್ಲಿ ಮೋಟಗಿ ಬಸವೇಶ್ವರ ಪ್ರಾಥಮಿಕ ಶಾಲಾ ವಿದ್ಯಾರ್ಥಿಗಳಿಗೆ ಉಚಿತವಾಗಿ ಶಾಲಾ ಬ್ಯಾಗ್ ವಿತರಿಸಿ ಮಾತನಾಡಿದ ಅವರು, ಗುರು ಶಿಷ್ಯ ಪರಂಪರೆ ಪ್ರಾಚೀನ ಕಾಲದಿಂದಲೂ ಭಾರತದಲ್ಲಿ ಅಸ್ತಿತ್ವದಲ್ಲಿದೆ. ಗುರು ಜ್ಞಾನದ ಮೂಲವಾಗಿದ್ದು ಶಿಷ್ಯನಿಗೆ ಮಾರ್ಗದರ್ಶನ ನೀಡುತ್ತಾನೆ. ಗುರು ವಿದ್ಯೆಯನ್ನು ಮಾತ್ರವಲ್ಲದೆ ಜೀವನದ ಮೌಲ್ಯಗಳು ಮತ್ತು ನೈತಿಕಕತೆಯನ್ನು ಸಹ ಕಲಿಸುತ್ತಾನೆ. ಭಾರತೀಯ ಗುರು–ಶಿಷ್ಯ ಪರಂಪರೆ ಸಂಸ್ಕೃತಿಯ ಅವಿಭಾಜ್ಯ ಅಂಗವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಶಾಲಾ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಮಹಾಂತೇಶ ಶೆಟ್ಟರ, ಹಾನಗಲ್ ಕುಮಾರೇಶ್ವರ ಔಷದ ಹಾಗೂ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯಗಳ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಮಲ್ಲಿಕಾರ್ಜುನ ಸಾಸನೂರ, ಪದನಿಮಿತ್ಯ ಕಾರ್ಯದರ್ಶಿ ಕೆ.ಎಚ್.ಹೊಸುರು ಮತ್ತು ಶಾಲೆಯ ಮುಖ್ಯೋಪಾಧ್ಯಯರು, ಸಿಬ್ಬಂದಿವರ್ಗ ಉಪಸ್ಥಿತರಿದ್ದರು.

# ಬಾಳಿಗೆ ಬೆಳಕಾಗುವ ಗುರುವಿನ ಸ್ಮರಣೆ ಅಗತ್ಯ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.10–ಜ್ಞಾನವೆಂಬ ದೀಪದಿಂದ ಅಜ್ಞಾನದ ಕತ್ತಲೆಯನ್ನು ನಿವಾರಿಸಿ ಬಾಳಿಗೆ ಬೆಳಕಾಗುವ ಗುರುವಿನ ಸ್ಮರಣೆ ಮಾಡುವುದು ಎಲ್ಲರ ಕರ್ತವ್ಯವಾಗಿದೆ ಎಂದು ಪ್ರಾಚಾರ್ಯ ಶ್ರೀನಿವಾಸ ನರಗುಂದ ಹೇಳಿದರು. ನಗರದ ವಿದ್ಯಾ ಪ್ರಸಾರಕ ಮಂಡಳದ ಎಸ್.ಆರ್.ನರಸಾಪೂರ ಕಲಾ ಹಾಗೂ ಎಂ.ಬಿ.ಶಿರೂರ ವಾಣಿಜ್ಯ ಮಹಾವಿದ್ಯಾಲಯದ ಐಕ್ಯೂಎಸಿ ಮತ್ತು ಸಾಂಸ್ಕೃತಿಕ ಚಟುವಟಿಕೆ ವಿಭಾಗ ಗುರುವಾರ ಆಯೋಜಿಸಿದ್ದ ಗುರುಪೂರ್ಣಿಮೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ವ್ಯಕ್ತಿಯ ಸರ್ವತೋಮುಖ ಬೆಳವಣಿಗೆಯಲ್ಲಿ ಗುರುವಿನ ಪಾತ್ರ ದೊಡ್ಡದಾಗಿದ್ದು, ಗುರುವಿನ ಆ ಕೊಡುಗೆಯನ್ನು ಕೃತಜ್ಞತೆಯಿಂದ ಸ್ಮರಿಸಿ ವಂದನೆಯನ್ನು ಸಮರ್ಪಿಸುವುದಕ್ಕಾಗಿ ಗುರುಪೂರ್ಣಿಮೆ ಆಚರಿಸಲಾಗುತ್ತಿದೆ. ಗುರುವಿನ ನಡೆ–ನುಡಿ, ಆಚಾರ–ವಿಚಾರ ವ್ಯಕ್ತಿಗಳ ಮೇಲೆ ಪೂರಕ ಪ್ರಭಾವ ಬೀರುತ್ತದೆ. ತನ್ನ ಜ್ಞಾನ ತೇಜಸ್ಸಿನಿಂದ ಶಿಷ್ಯನ ಅಜ್ಞಾನ ಕಳೆದು ಒಳ್ಳೆಯ ದಾರಿ ತೋರುವವನೇ ಗುರು ಆಗಿದ್ದಾನೆ ಎಂದು ಅವರು ಹೇಳಿದರು. ಮಹಾಭಾರತ ಬರೆದ ವೇದವ್ಯಾಸರ ಜಯಂತಿಯ ಕಾರಣಕ್ಕೆ ಗುರುಪೂರ್ಣಿಮೆಗೆ ವ್ಯಾಸ ಪೂರ್ಣಿಮೆ ಎಂದೂ ಕರೆಯಲಾಗುತ್ತಿದೆ. ಸಾಹಿತ್ಯ ಮತ್ತು ಸಂಸ್ಕೃತಿಗೆ ಅವರು ನೀಡಿದ ಕೊಡುಗೆಯನ್ನು ಹಾಗೂ ನಾಡಿನ ಜ್ಞಾನ ಸಂಪತ್ತಾಗಿರುವ ಅವರ ಹಲವು ರಚನೆಗಳನ್ನು ಯುವಕರು ಅಧ್ಯಯನ ಮಾಡಬೇಕಿದೆ ಎಂದು ನರಗುಂದ ಹೇಳಿದರು.

ಉಪನ್ಯಾಸಕಿ ಶ್ವೇತಾ ಕುಲಕರ್ಣಿ ಪ್ರಾರ್ಥಿಸಿದರು. ಸಂಯೋಜಕ ಡಾ.ಎಸ್.ಎಸ್.ಹಂಗರಗಿ ಸ್ವಾಗತಿಸಿದರು. ಎಚ್.ಎಸ್.ಗಿಡಗಂಟಿ ವಂದಿಸಿದರು. ಉಪನ್ಯಾಸಕಿ ಕೀರ್ತಿ ದಾಸರ ನಿರೂಪಿಸಿದರು.

# ಪಂಚ ಗ್ಯಾರಂಟಿ ಯೋಜನೆಗಳಿಂದ ಜನರು ಆರ್ಥಿಕವಾಗಿ ಸಬಲರಾಗಿದ್ದಾರೆ:ಅಮೃತರಾವ ಚಿಮಕೋಡೆ

ಮಲ್ಲಮ್ಮ ನುಡಿ ವಾರ್ತೆ

ಬೀದರ.ಜು.10:ಪಂಚಗ್ಯಾರಂಟಿ ಯೋಜನೆಗಳಿಂದಜನರಿಗೆಆರ್ಥಿಕವಾಗಿ ಸಬಲರಾಗಲು ಅನುಕೂಲವಾಗಿದೆ ಎಂದು ಪಂಚ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಅಮೃತರಾವ ಚಿಮಕೊಡೆ ಹೇಳಿದರು.

ಅವರು ಗುರುವಾರ ಬೀದರ ನಗರದ ಕೇಂದ್ರ ಬಸ್ ನಿಲ್ದಾಣದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಜುಲೈ.10 ರಿಂದ 12 ರವರೆಗೆ ಮೂರು ದಿನಗಳ ಕಾಲ ಏರ್ಪಡಿಸಿರುವ ರಾಜ್ಯ ಸರ್ಕಾರದ ಎರಡು ವರ್ಷಗಳ ಸಾಧನೆ ಬಿಂಬಿಸುವ ವಸ್ತು ಪ್ರದರ್ಶನ ಕಾರ್ಯಕ್ರಮಕ್ಕೆ ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ಅವರೊಂದಿಗೆ ಜಂಟಿಯಾಗಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ರಾಜ್ಯದಲ್ಲಿ ಸಾಕಷ್ಟು ಅಭಿವೃದ್ಧಿಯಾಗಿದ್ದು, ರಾಜ್ಯ ಸರ್ಕಾರದ ಮಹತ್ವದ ಪಂಚ ಗ್ಯಾರಂಟಿ ಯೋಜನೆಗಳಾದ ಗೃಹಲಕ್ಷ್ಮಿ ??ೀ, ಗೃಹಜ್ಯೋತಿ, ಯುವನಿಧಿ, ಅನ್ನಭಾಗ್ಯ ಮತ್ತು ಶಕ್ತಿ ಯೋಜನೆ ಸೇರಿದಂತೆ ಸರ್ಕಾರದ ಎಲ್ಲಾ ಯೋಜನೆಗಳು ಜಿಲ್ಲೆಯಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನ ಮಾಡಲಾಗುತ್ತಿದ್ದು, ಪಂಚ ಗ್ಯಾರಂಟಿ ಯೋಜನೆಗಳಿಂದ ವಿಶೇಷವಾಗಿ ಕಡುಬಡವರು, ಕೂಲಿ ಕಾರ್ಮಿಕರಿಗೆ ಸಾಕಷ್ಟು ಅನುಕೂಲವಾಗಿದೆ. ಉಚಿತ ಬಸ್ ಪ್ರಯಾಣದಿಂದ ಮಹಿಳೆಯರು ಧಾರ್ಮಿಕ ಸ್ಥಳಗಳಿಗೆ ಮತ್ತು ಪ್ರವಾಸಿತಾಣಗಳಿಗೆ ಭೇಟಿ ನೀಡುತ್ತಿದ್ದಾರೆ. ಮಹಿಳೆಯರಿಗೆ ಕುಟುಂಬ ನಿರ್ವಹಣೆ ತುಂಬಾ ಅನುಕೂಲವಾಗಿದೆ ಎಂದರು.



ಶಕ್ತಿ ಯೋಜನೆಯಡಿ: ದಿನಾಂಕ: 11–06–2023 ರಿಂದ 09–07–2025 ರವರೆಗೆ 8 ಕೋಟಿ 64 ಲಕ್ಷ ಮಹಿಳೆಯರು ಜಿಲ್ಲೆಯಲ್ಲಿ ಇದರ ಲಾಭ ಪಡೆದಿದ್ದಾರೆ. ಇದರಿಂದ 248 ಕೋಟಿ 79 ಲಕ್ಷ ಮೊತ್ತ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಗೆ ಮೊತ್ತ ಸಂದಾಯವಾಗಿದೆ.

ಅನ್ನಭಾಗ್ಯ ಯೋಜನೆಯಡಿ: ಜನೇವರಿ–2025 ರವರೆಗೆ ಪ್ರತಿ ಫಲಾನುಭವಿಗಳಿಗೆ 5 ಕೆ.ಜಿ. ಅಕ್ಕಿ ವಿತರಿಸಲಾಗಿದ್ದು, 5 ಕೆ.ಜಿ. ಮೊತ್ತವನ್ನು ಫಲಾನುಭವಿಗಳಿಗೆ ನೇರ ನಗದು ವರ್ಗಾವಣೆ ಮಾಡಲಾಗಿದೆ. ಫೆಬ್ರುವರಿ–2025 ರಿಂದ ಪ್ರತಿ ಫಲಾನುಭವಿಗಳಿಗೆ 10 ಕೆ.ಜಿ. ಅಕ್ಕಿ ವಿತರಿಸಲಾಗುತ್ತಿದೆ.

ಯುವನಿಧಿ ಯೋಜನೆಯಡಿ: ಇಲ್ಲಿಯವರೆಗೆ ಡಿಪ್ಲೋಮಾ ಹಾಗೂ ಪದವೀದರ ನಿರುದ್ಯೋಗ ಯುವಕರಿಗೆ 20 ಕೋಟಿ 97 ಲಕ್ಷ ಹಣ ಪಾವತಿಸಲಾಗಿದೆ.

ಗೃಹಜ್ಯೋತಿ ಯೋಜನೆಯಡಿ: ಪ್ರತಿ ಮನೆಗೆ 200 ಯುನಿಟವರೆಗೆ ಉಚಿತ ವಿದ್ಯುತ್ ನೀಡಲಾಗುತ್ತಿದ್ದು, ಜಿಲ್ಲೆಯಲ್ಲಿ ಒಟ್ಟು 35 ಲಕ್ಷ 4 ಸಾವಿರದ 79 ಫಲಾನುಭವಿಗಳು ಉಚಿತ ವಿದ್ಯುತ್ ಸೌಲಭ್ಯ ಪಡೆಯುತ್ತಿದ್ದು ಒಟ್ಟು 341 ಕೋಟಿ 46 ಲಕ್ಷ ಹಣ ಜೇಸ್ಕಾಂಗೆ ಸಂದಾಯವಾಗಿರುತ್ತದೆ.

ಗೃಹಲಕ್ಷ್ಮಿ ??ೀ ಯೋಜನೆಯಡಿ: ಜಿಲ್ಲೆಯಲ್ಲಿ 3 ಲಕ್ಷ 60 ಸಾವಿರ ಮಹಿಳೆಯರು ಇದರ ಲಾಭ ಪಡೆ–ಯುತ್ತಿದ್ದು ಮೇ.2025 ಅಂತ್ಯದವರೆಗೆ 1268 ಕೋಟಿ ರೂ. ಹಣ ಡಿಬಿಟಿ ಮೂಲಕ ಫಲಾನುಭವಿಗಳ ಖಾತೆಗೆ ಹಣ ವರ್ಗಾವಣೆ ಮಾಡಲಾಗಿದೆ ಎಂದರು. ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ಅವರು ಮಾತನಾಡಿ, ರಾಜ್ಯ ಸರ್ಕಾರವು ಎರಡು ವರ್ಷ ಪೂರೈಸಿರುವ ಹಿನ್ನೆಲೆಯಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಹಮ್ಮಿಕೊಂಡಿರುವ ಸರ್ಕಾರದ ಎರಡು ವರ್ಷಗಳ ಸಾಧನೆ ಬಿಂಬಿಸುವ ವಸ್ತು ಪ್ರದರ್ಶನವನ್ನು ಸಾರ್ವಜನಿಕರು ವೀಕ್ಷಿಸಿ ಅವುಗಳು ಮಾಹಿತಿ ಪಡೆಯಬಹುದು ಎಂದರು.

ಇದೇ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ಅವರು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ವತಿಯಿಂದ ನಿರ್ಮಿಸಿದ ಹೆಣ್ಣು ಮಕ್ಕಳ ವಿಶ್ರಾಂತಿ ಕೋಣೆ ಹಾಗೂ ಮಗುವಿಗೆ ಹಾಲುಣಿಸುವ ಕೋಣೆ ಉದ್ಘಾಟಿಸಿದರು.

ಈ ಕಾರ್ಯಕ್ರಮದಲ್ಲಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವಿಭಾಗೀಯ ನಿಯಂತ್ರಣಾಧಿಕಾರಿ ಚಂದ್ರಕಾಂತ ಫುಲೇಕರ, ವಿಭಾಗೀಯ ಸಂಚಾರಿ ಅಧಿಕಾರಿ ಇಂದ್ರಸೇನ ಎಂ.ಬಿರಾದಾರ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕರಾದ ಶ್ರೀಧರ, ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆಯ ಉಪನಿರ್ದೇಶಕರು ಪ್ರವೀಣ ಬರಗಲ, ಜೇಸ್ಕಾಂ ಕಾರ್ಯಪಾಲಕ ಅಭಿಯಂತರರಾದ ರಮೇಶ ಪಾಟೀಲ, ಉದ್ಯೋಗ ವಿನಿಮಿಯ ಇಲಾಖೆಯ ಅಧಿಕಾರಿಗಳು ಸೇರಿದಂತೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರಾದ ಮಂಜುನಾಥ ಸುಳ್ಳೊಳ್ಳಿ, ವಿಜಯಕೃಷ್ಣ ಸೋಲಪೂರ, ನರೇಶಕುಮಾರ, ಆಶೀಷ, ತನ್ವೀರ ಇಕ್ಬಾಲ್, ನಾಗಶೆಟ್ಟಿ ಸಾರಿಗೆ ಇಲಾಖೆಯ ಅಧಿಕಾರಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

## ಮೂರು ಜನ ಸಾವು ಕಲುಷಿತ ನೀರಿನಿಂದಲ್ಲ ಆರೋಗ್ಯ ಇಲಾಖೆ ವರದಿ : ಜಿ.ಪಂ. ಸಿಇಒ ಲವೀಶ್ ಒರಡಿಯಾ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜು 10 : ಯಾದಗಿರಿ ಜಿಲ್ಲೆಯ ಸುರಪುರ ತಾಲ್ಲೂಕಿನ ಮಾಲಗತ್ತಿ ಗ್ರಾಮ ಪಂಚಾಯತಿ ವ್ಯಾಪ್ತಿಯ ತಿಪ್ಪನಟಗಿ ಗ್ರಾಮದಲ್ಲಿ ಕಲುಷಿತ ಕುಡಿಯುವ ನೀರಿನ ಸೇವನೆಯಿಂದ 3 ಜನ ಮೃತಪಟ್ಟಿದ್ದಾರೆಂದು ಮಧ್ಯಮಗಳಲ್ಲಿ ವರದಿಯಾಗಿದೆ ಈ ಬಗ್ಗೆ ಕೈಗೊಂಡ ಪರಿಶೀಲನೆಯಲ್ಲಿ ಮೂರು ಜನರಿಗೆ ತೀವ್ರತರಹದ ಅನಾರೋಗ್ಯದಿಂದ ಬಳಲುತ್ತಿದ್ದರು, ಅವರ ಸಾವಿಗೆ ಕಲುಷಿತ ನೀರು ಕಾರಣವಲ್ಲ ಎಂಬುದು ಆರೋಗ್ಯ ಇಲಾಖೆ ವರದಿಯಿಂದ ತಿಳಿದುಬಂದಿದೆ ಎಂದು ಯಾದಗಿರಿ ಜಿಲ್ಲಾ ಪಂಚಾಯತ ಮುಖ್ಯಕಾರ್ಯನಿರ್ವಹಣಾಧಿಕಾರಿ ಶ್ರೀ ಲವೀಶ್ ಒರಡಿಯಾ ಅವರು ಸ್ಪಷ್ಟಪಡಿಸಿದ್ದಾರೆ. ಈ ಪ್ರಕರಣಗಳ ಬಗ್ಗೆ ಕೈಗೊಂಡ ಪರಿಶೀಲನೆಯಲ್ಲಿ ಮೃತಪಟ್ಟ 3 ಜನ ಈ ಮೊದಲೇ ತೀವ್ರತರಹದ ಅನಾರೋಗ್ಯದಿಂದ ಬಳಲುತ್ತಿದ್ದು, ಅವರ ಸಾವಿಗೆ ಕಲುಷಿತ ನೀರು ಕಾರಣ ಅಲ್ಲ ಎಂಬುವುದು ಆರೋಗ್ಯ ಇಲಾಖೆಯ ವರದಿಯಿಂದ ತಿಳಿದುಬಂದಿದೆ. ಅಲ್ಲದೆ ಈ ಕುಟುಂಬದ ಇತರೆ ಸದಸ್ಯರಿಗೆ ಕುಡಿಯುವ ನೀರಿನಿಂದ ಉಂಟಾಗುವ ಯಾವುದೇ ರೀತಿಯ ಅನಾರೋಗ್ಯ ಸಮಸ್ಯೆಗಳು ಕಂಡುಬಂದಿರುವುದಿಲ್ಲ. ಪ್ರಸ್ತುತ ತಿಪ್ಪನಟಗಿ ಗ್ರಾಮಕ್ಕೆ ಪೂರೈಕೆ ಮಾಡುತ್ತಿರುವ ಎಲ್ಲಾ ಜಲಮೂಲಗಳ ಕುಡಿಯುವ ನೀರಿನ ಮಾದರಿಗಳನ್ನು ಭೌತಿಕ, ಜೈವಿಕ, ಹಾಗೂ ರಾಸಾಯನಿಕ ಪರೀಕ್ಷೆಗೆ ಒಳಪಡಿಸಿದ್ದು, ನೀರು ಕುಡಿಯಲು ಯೋಗ್ಯವಿರುವುದಾಗಿ ವರದಿ ಬಂದಿರುತ್ತದೆ. ಪ್ರಸ್ತುತ ತಿಪ್ಪನಟಗಿ ಗ್ರಾಮದಲ್ಲಿ ಆರೋಗ್ಯ ಕ್ಯಾಂಪ್ ವ್ಯವಸ್ಥೆಯೊಂದಿಗೆ ಮುನ್ನೆಚ್ಚರಿಕೆಯ ಎಲ್ಲಾ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



## ಪ್ರೇಕ್ಷಕರ ರಂಜಿಸಿದ ಭಸ್ಮಾಸುರ-ಮೋಹಿನಿ!



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು. 10 : ದಕ್ಷಿಣ ಕರಾವಳಿ ಕನ್ನಡ ಸಂಘವು ಇಲ್ಲಿಯ ಪೂಜ್ಯ ಚನ್ನಬಸವ ಪಟ್ಟದ್ದೇವರು ರಂಗ ಮಂದಿರದಲ್ಲಿ ಬುಧವಾರ ಆಯೋಜಿಸಿದ್ದ ಯಕ್ಷಗಾನ ಪ್ರದರ್ಶನವು ಪ್ರೇಕ್ಷಕರ ಮನ ರಂಜಿಸಿತು.

ಯಕ್ಷಗಾನದ ಮೂಲಕ ಪ್ರದರ್ಶಿಸಿದ ಪೌರಾಣಿಕ ಭಸ್ಮಾಸುರ–ಮೋಹಿನಿ ಕಥಾ ಪ್ರಸಂಗವು ಮೂರು ಗಂಟೆ ಪ್ರೇಕ್ಷಕರನ್ನು ಪುರಾಣ ಲೋಕಕ್ಕೆ ಕರೆದೊಯ್ದಿತು.

ಭಸ್ಮಾಸುರ, ಮೋಹಿನಿ ಹಾಗೂ ಇತರ ಪಾತ್ರಧಾರಿಗಳು ಮನೋಜ್ಞ ಅಭಿಯನದೊಂದಿಗೆ ಕರತಾಡನಕ್ಕೆ ಪಾತ್ರರಾದರು.

ಕಲಾವಿದರ ವೇಷ ಭೂಷಣ, ಗೆಜ್ಜೆ ಶಬ್ದ, ಸಂಭಾಷಣೆಗಳು ಮನಸೂರೆಗೊಂಡವು.

ಉಡುಪಿ ಜಿಲ್ಲೆಯ ಮಂದರ್ತಿಯ ಶ್ರೀ ಮಹಾ ಗಣಪತಿ ಯಕ್ಷಗಾನ ಮಂಡಳಿಯ ಕಲಾವಿದರು ಹಾಸ್ಯದ ಜತೆ ಭಸ್ಮಾಸುರ–ಮೋಹಿನಿ ಕಥಾ ಪ್ರಸಂಗ ಪ್ರದರ್ಶಿಸಿದರು.

ದಿನಕರ ಕುಂದರ್ ನಡೂರು, ನಾಗರಾಜ ಪೂಜಾರಿ ದೇವಲ್ಕುಂದ, ರಾಜೇಶ ಶೆಟ್ಟಿ ಮೇಗರವಳ್ಳಿ ಸ್ತ್ರೀ ಪಾತ್ರ, ಚಿಟ್ಪಾಣಿ ನರಸಿಂಹ ಹೆಗಡೆ, ವಿಶ್ವನಾಥ ಪೂಜಾರಿ, ಹರೀಶ್ ಚಂದ್, ನಂದೀಶಕುಮಾರ, ಪ್ರಮೋದ್ ಪೂಜಾರಿ, ರಜಿತಕುಮಾರ ಪುರುಷ ಪಾತ್ರ, ಸತೀಶಕುಮಾರ ಹಾಲಾಡಿ ಹಾಸ್ಯ ಪಾತ್ರ, ನಾಟ್ಯಶ್ರೀ ನೃತ್ಯಾಲಯದ ಅಧ್ಯಕ್ಷೆ ರಾಣಿ ಸತ್ಯಮೂರ್ತಿ ಬ್ರಹ್ಮ ದೇವರ ಪಾತ್ರ ನಿರ್ವಹಿಸಿದರು. ಕೊಕ್ಕರ್ಣೆ ಸದಾಶಿವ ಅಮೀನ್, ಗಣೇಶ ಆಚಾರ್ಯ ಬಿಲ್ಲಾಡಿ ಗಾಯನ ಪ್ರಸ್ತುತಪಡಿಸಿದರೆ, ಭಾಸ್ಕರ ದೇವಾಡಿಗ ಭಟ್ಕಳ, ಕುಮಾರ ಅಮೀನ್ ಕೊಕ್ಕರ್ಣೆ ಮೃದಂಗ ನುಡಿದರು. ದಿನೇಶ್ ಪೂಜಾರಿ ವೇಷ ಭೂಷಣ, ಕೃಷ್ಣಶೆಟ್ಟಿ ಶಿವಪುರ ಧ್ವನಿವರ್ಧಕ ಸೇವೆ ಒದಗಿಸಿದರು.

ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಘಟಕದ ಮಾಜಿ ಅಧ್ಯಕ್ಷ ಪ್ರೊ. ಸಿದ್ರಾಮಪ್ಪ ಮಾಸಿಮಾಡೆ ಯಕ್ಷಗಾನ ಪ್ರದರ್ಶನಕ್ಕೆ ಚಾಲನೆ ನೀಡಿದರು.

ವಿಶ್ವಹಿಂದೂ ಪರಿಷತ್ತಿನ ರಾಮಕೃಷ್ಣ ಸಾಳೆ, ದಕ್ಷಿಣ ಕರಾವಳಿ ಕನ್ನಡ ಸಂಘದ ಅಧ್ಯಕ್ಷ ಕೆ. ಸತ್ಯಮೂರ್ತಿ, ಪ್ರಮುಖರಾದ ದಯಾನಂದ ಶೆಟ್ಟಿ, ವೀರಶೆಟ್ಟಿ ಖ್ಯಾಮಾ, ಎ.ಎಸ್. ಪ್ರಭಾಕರ, ರಾಘವೇಂದ್ರ ಅಡಿಗ, ಶಂಭುಲಿಂಗ ವಾಲ್ದೊಡ್ಡಿ, ರಾಜೇಶ್ ಕೆ. ರಾವ್, ರಘುರಾಮ ಉಪಾಧ್ಯಾಯ, ಉಮೇಶ ನಾಯಕ್, ಸತೀಶ್ ಕೋಟ್ಯಾನ್, ಶ್ರೀನಿವಾಸ್, ರವಿಚಂದ್ರ ಮೂರ್ತಿ, ಬಾಲಕೃಷ್ಣ ಶೆಟ್ಟಿ, ರೇಖಾ ಸೌದಿ, ಭಾನುಪ್ರಿಯ ಅರಳಿ, ನಾಗರಾಜ ನಾಯ್ಕ, ಕಿರಣ ಮೂರ್ತಿ, ಶಾರದ ಶೆಟ್ಟಿ, ಭಾಗ್ಯಲಕ್ಷ್ಮಿ, ಉದಯಶೆಟ್ಟಿ, ಸುರೇಶ್ ಆಚಾರ್ಯ, ಬಸವರಾಜ ಮೂಲಗೆ ಮತ್ತಿತರರು ಇದ್ದರು.

## ಅನುಭವ ಮಂಟಪಕ್ಕೆ ಅಗತ್ಯ ಹಣ ಬಿಡುಗಡೆ: ರಾಜೇಂದ್ರಕುಮಾರ ಕಠಾರಿಯಾ ಭರವಸೆ



ಬಸವಕಲ್ಯಾಣದಲ್ಲಿ ಬುಧವಾರ ಕಂದಾಯ ಇಲಾಖೆ ಮುಖ್ಯಕಾರ್ಯದರ್ಶಿ ರಾಜೇಂದ್ರಕುಮಾರ ಕಠಾರಿಯಾ ಅವರು ತಹಶೀಲ್ದಾರ್ ಕಚೇರಿಯಲ್ಲಿನ ವ್ಯವಸ್ಥೆ ಪರಿಶೀಲಿಸಿದರು. ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಉಪ ವಿಭಾಗಾಧಿಕಾರಿ ಮುಕುಲ್ ಜೈನ್ ಪಾಲ್ಗೊಂಡಿದ್ದರು



ಬೀದರ.ಜು.10: ಬಸವಕಲ್ಯಾಣ 'ನಗರದಲ್ಲಿನ ಅನುಭವ ಮಂಟಪ ನಿರ್ಮಾಣಕ್ಕೆ ಹಣದ ಕೊರತೆ ಆಗುವುದಿಲ್ಲ. ಹಂತಹಂತವಾಗಿ ಅನುದಾನ ನೀಡಲಾಗುತ್ತದೆ' ಎಂದು ಕಂದಾಯ ಇಲಾಖೆ ಮುಖ್ಯ ಕಾರ್ಯದರ್ಶಿ ರಾಜೇಂದ್ರಕುಮಾರ ಕಠಾರಿಯಾ ಭರವಸೆ ನೀಡಿದ್ದಾರೆ.

ಬಸವಕಲ್ಯಾಣ ಅಭಿವೃದ್ಧಿ ಮಂಡಳಿಯ ಸಭಾಂಗಣದಲ್ಲಿ ಬುಧವಾರ ಆಯೋಜಿಸಿದ್ದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿದರು.

'ಮಂಟಪದ ಕಾಮಗಾರಿಗೆ ಮೊದಲು ?612 ಕೋಟಿ ಅನುದಾನವಿತ್ತು. ರಾಜ್ಯ ಸರ್ಕಾರ ಈಚೆಗೆ ಮತ್ತೆ ?132 ಕೋಟಿ ಹೆಚ್ಚಿಸಿ ?742 ಕೋಟಿಯ ಪರಿಷ್ಕೃತ ಪಟ್ಟಿಗೆ ಅನುಮೋದನೆ ನೀಡಿದೆ. ಸಂಬಂಧಿತರು ಗುಣಮಟ್ಟದ ಕಾರ್ಯ ಕೈಗೊಳ್ಳಬೇಕು. ನಿಗದಿತ ಅವಧಿಯಲ್ಲಿ ಕೆಲಸ ಪೂರ್ಣಗೊಳಿಸಬೇಕು' ಎಂದರು. ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಅಭಿವೃದ್ಧಿ ಮಂಡಳಿ ಆಯುಕ್ತ ಜಗನ್ನಾಥರೆಡ್ಡಿ, ಉಪ ವಿಭಾಗಾಧಿಕಾರಿ ಮುಕುಲ್ ಜೈನ್, ತಹಶೀಲ್ದಾರ್ ದತ್ತಾತ್ರೇಯ ಗಾದಾ ಮತ್ತಿತರರು ಉಪಸ್ಥಿತರಿದ್ದರು. ಸಭೆ ಬಳಿಕ ಮುಖ್ಯಕಾರ್ಯದರ್ಶಿಯವರು ಅನುಭವ ಮಂಟಪದ ಸ್ಥಳಕ್ಕೂ ಭೇಟಿ ನೀಡಿ ಪರಿಶೀಲಿಸಿದರು.

ಲ್ಯಾಪ್ ಟಾಪ್ ವಿತರಣೆ ಕಂದಾಯ ಇಲಾಖೆ ಮುಖ್ಯ ಕಾರ್ಯದರ್ಶಿ ರಾಜೇಂದ್ರಕುಮಾರ ಕಠಾರಿಯಾ ಅವರು ತಹಶೀಲ್ದಾರ್ ಕಚೇರಿಯಲ್ಲಿ ಹಮ್ಮಿಕೊಂಡಿದ್ದ ಸಭೆಯಲ್ಲಿ ಗ್ರಾಮ ಆಡಳಿತ ಅಧಿಕಾರಿಗಳಿಗೆ ಲ್ಯಾಪ್ ಟಾಪ್ ವಿತರಿಸಿದರು. ಅಭಿಲೇಖಾಲಯಕ್ಕೆ ಭೇಟಿ ನೀಡಿ ಕಂಪ್ಯೂಟರೀಕರಣ ವ್ಯವಸ್ಥೆ ಪರಿಶೀಲಿಸಿದರು. ನಾಡ ಕಚೇರಿ ಪರಿಶೀಲನೆ ತಾಲ್ಲೂಕಿನ ಮಂಠಾಳದ ನಾಡ ಕಚೇರಿಗೆ ರಾಜೇಂದ್ರಕುಮಾರ ಕಠಾರಿಯಾ ಭೇಟಿ ನೀಡಿ ಪರಿಶೀಲಿಸಿದರು. ಸರ್ಕಾರದ ಭೂಮಿ ಅತಿಕ್ರಮಣ ಆಗುವುದನ್ನು ತಡೆಯಬೇಕು. ಗ್ರಾಮಸ್ಥರಿಗೆ ನಿಗದಿತ ಸಮಯದಲ್ಲಿ ಸೌಲಭ್ಯ ಒದಗಿಸಬೇಕು ಎಂದು ಸಲಹೆ ನೀಡಿದರು.

## ಹಡಪದ ಅಪ್ಪಣ್ಣನವರ ಬದುಕು, ವಿಚಾರಗಳು ಇಂದಿನ ಸಮಾಜಕ್ಕೆ ಅತೀ ಅವಶ್ಯ:ಎಡಿಸಿ ಡಾ.ಈಶ್ವರ ಉಳ್ಳಾಗಡ್ಡಿ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು.10 : ಹಡಪದ ಅಪ್ಪಣ್ಣನವರ ಬದುಕು ಮತ್ತೆ ವಿಚಾರಗಳು ವಚನಗಳಲ್ಲಿ ಅಡಕವಾಗಿದ್ದು, ಇಂದಿನ ಸಮಾಜಕ್ಕೆ ಅತಿ ಅವಶ್ಯಕವಾಗಿದೆ. ಹಡಪದ ಅಪ್ಪಣ್ಣ ಬಸವಣ್ಣನವರ ಆಪ್ತರಾಗಿದ್ದು ಕಾಯಕ ತತ್ವದಲ್ಲಿ ನಿಷ್ಠೆ ಉಳ್ಳವರಾಗಿದ್ದರೆಂದು ಅಪರ ಜಿಲ್ಲಾಧಿಕಾರಿ ಡಾ.ಈಶ್ವರ ಉಳ್ಳಾಗಡ್ಡಿ ತಿಳಿಸಿದರು. ಅವರು ಗುರುವಾರ ಜಿಲ್ಲಾ ಪಂಚಾಯತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಪೂಜ್ಯ ಡಾ.ಚನ್ನಬಸವ ಪಟ್ಟದೇವರು ರಂಗಮಂದಿರದಲ್ಲಿ ಹಮ್ಮಿಕೊಂಡಿದ್ದ ಶ್ರೀ ಶಿವಶರಣ ಹಡಪದ ಅಪ್ಪಣ್ಣನವರ ಜಯಂತ್ಯುತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.



ಹಿರಿಯ ಸಾಹಿತಿಗಳಾದ ಶಂಭುಲಿಂಗ ವಿ.ಶಾಮಣ್ಣನವರ ಉಪನ್ಯಾಸ ನೀಡಿ ಮಾತನಾಡಿ, ವಿಜಯಪುರ ಜಿಲ್ಲೆಯ ಬಸವನಭಾಗೇವಾಡಿ ತಾಲ್ಲೂಕಿನ ಮನಬಿನಾಳ ಗ್ರಾಮದಲ್ಲಿ ಜನಿಸಿದರು. ಅವರ ತಂದೆ ಚನ್ನವೀರಪ್ಪ, ತಾಯಿ ದೇವಮ್ಮ ಆಗಿದ್ದರು. ಅಪ್ಪಣ್ಣನವರು ತಮ್ಮ ಕುಲ ಕಸುಬಾದ ಕ್ಷೌರ ಮಾಡುವ ಕಾಯಕವಾಗಿತ್ತು. ಕಾಯಕ ನಿಷ್ಠರಾದ ಹಡಪದ ಅಪ್ಪಣ್ಣನವರು ಲಿಂಗಮ್ಮಳನ್ನು ವಿವಾಹ ಆಗುತ್ತಾರೆ. ಬಸವಣ್ಣನವರ ಒಡನಾಡಿಗಳು ಆಪ್ತ ಕಾರ್ಯದರ್ಶಿಯು ಆಗಿ ಬಸವಣ್ಣನವರ ಲಿಂಗೈಕ್ಯ ಆಗುವವರೆಗೂ ಜೊತೆ–ಗಿದ್ದರೆಂದರು.

ಈ ಕಾರ್ಯಕ್ರಮದಲ್ಲಿ ಹಡಪದ ಅಪ್ಪಣ್ಣ ಸಮಾಜ ಸಂಘದ ದತ್ತಾತ್ರಿ ಬಾಂದೇಕರ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಅಮೃತರಾವ ಚಿಮಕೊಡೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಸಿದ್ರಾಮ ಸಿಂಧೆ, ಹಡಪದ ಸಮಾಜದ ಯುವ ಘಟಕದ ಅಧ್ಯಕ್ಷರಾದ ಸಂಗಮೇಶ, ರವೀಂದ್ರ ಡಿಗ್ಗಿ ಸೇರಿದಂತೆ ಸಮಾಜದ ಮುಖಂಡರು, ಅಭಿಮಾನಿಗಳು ಉಪಸ್ಥಿತರಿದ್ದರು.


ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ,
ನಂದಿನಗರ, ಬೀದರ – 585 401

ಆಸ್ತಿ ಅಧಿಕಾರಿಗಳವರ ಕಛೇರಿ

ಕಛೇರಿ ದೂರವಾಣಿ: 08482–245445
Email.eokvafsu@gmail.com

ಸಂಖ್ಯೆ:ಆ.ಅ/ಕ.ಪ.ಪ.ಮೀ.ವಿ.ವಿ/ಟೆ.ನಂ–1/2025–26/

ದಿನಾಂಕ : 07-07-2025

**ಬಹಿರಂಗ ಹರಾಜು ಪ್ರಕಟಣೆ**
(ಅಲ್ಪಾವಧಿ ಟೆಂಡರ)

ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ನಂದಿನಗರ ಬೀದರಗೆ ಸೇರಿದ ಅನುಪಯುಕ್ತ ವಸ್ತುಗಳನ್ನು ಅನುಪಯುಕ್ತ ಎಂದು ನಿರ್ಧರಿಸಲಾಗಿದ್ದು, ಅವುಗಳನ್ನು ಹರಾಜು ಮಾಡಲು ವಿಶ್ವವಿದ್ಯಾಲಯದ ಅನುಮತಿ ದೊರಕಿರುವ ಹಿನ್ನೆಲೆಯಲ್ಲಿ ಈ ಬಹಿರಂಗ ಹರಾಜು ಪ್ರಕಟಣೆಯನ್ನು ಹೊರಡಿಸಲಾಗಿದೆ. ಆಸಕ್ತರು ರೂ.5,000=00 (ರೂಪಾಯಿ ಐದು ಸಾವಿರ ಮಾತ್ರ) ಡಿಮಾಂಡ ಡ್ರಾಪ್ಟ / ಬ್ಯಾಂಕರ್ಸ ಚೆಕ್ಕನ್ನು "The Comptroller, KVAFSU, Bidar" : 23.07.2025 ಸಾಯಂಕಲ್ : 05-00 ಗಂಟೆಯವರೆಗೆ ಈ ಕಛೇರಿಗೆ ಸಲ್ಲಿಸಲು ಮತ್ತು ಡಿ.ಡಿ ಸಲ್ಲಿಸಿದ ವ್ಯಕ್ತಿ ಮಾತ್ರ ಬಹಿರಂಗ ಹರಾಜಿನಲ್ಲಿ ಭಾಗವಹಿಸಲು ಅರ್ಹರಾಗಿರುತ್ತಾರೆ.

| | |
|---|---|
| 1. | ಬಹಿರಂಗ ಹರಾಜು ಡಿ.ಡಿ ಸಲ್ಲಿಸುವ ದಿನಾಂಕ :23.07.2025 ಮಧ್ಯಾಹ್ನ 05-00 ಗಂಟೆಯವರೆಗೆ. |
| 2. | ಬಹಿರಂಗ ಹರಾಜು ದಿನಾಂಕ : 26.07.2025 ಮಧ್ಯಾಹ್ನ 05-00 ಗಂಟೆಯವರೆಗೆ. |

ತಮ್ಮ ವಿಶ್ವಾಸಿ
ಆಸ್ತಿ ಅಧಿಕಾರಿಗಳು
ಕಪಪಮೀವಿವಿ, ಬೀದರ
ESTATE OFFICER
KVAFSU
Nandinagar, BI


Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.